ಸಂಪುಟ: 04 ಸಂಚಿಕೆ: 313 ಪುಟಗಳು: 08 ಶನಿವಾರ 25 ಜನವರಿ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
9448225696 +91 8035841833 ₹5

# ಉದಯ ವಾಹಿನಿ

UV ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ


**ಮುಂಜಾನೆ ಮಾತು**
ಬದಲಾವಣೆಗಳಿಗೆ ಹೆದರಬೇಡಿ, ಬದಲಾವಣೆ ನಿಸರ್ಗದ ನಿಯಮವಾಗಿದೆ ನೀವು ಬದಲಾವಣೆಗಳಿಗೆ ಸದಾಕಾಲ ಸಿದ್ಧರಾಗಿರಬೇಕು, ನೀವು ನಿಮ್ಮ ಕರ್ಮಗಳ ಅನುಸಾರವಾಗಿ ಮುಂದೆ ನೀವು ಶ್ರೀಮಂತರಾಗಬಹುದು ಅಥವಾ ಭಿಕ್ಷುಕರಾಗಬಹುದು.

## ಮೈಕ್ರೋ ಫೈನಾನ್ಸ್ ಹಾವಳಿ ಜಾಸ್ತಿ ಸರ್ಕಾರ ಮಾಡಲಿದೆಯೇ ಶಾಸ್ತಿ

ರಾಜ್ಯದ ಯಾವ ಜಿಲ್ಲೆಗಳಲ್ಲಿ ಹೆಚ್ಚಾಗಿದೆ ಮೈಕ್ರೋ ಫೈನಾನ್ಸ್ ಹಾವಳಿ

ಮೈಕ್ರೋ ಫೈನಾನ್ಸ್ ಹಾವಳಿ ತಪ್ಪಿಸಲು ಕ್ರಮ ಕೈಗೊಳ್ಳುತ್ತಾ ಸರ್ಕಾರ

ವಿಪಕ್ಷ ನಾಯಕರ ಟೀಕೆಗಳಿಗೆ ಸರ್ಕಾರದ ಬಳಿ ಉತ್ತರ ಇದೆಯೇ




**ಮಿತಿ ಮೀರಿದ ಮೈಕ್ರೋ ಫೈನಾನ್ಸ್ ಹಾವಳಿ**

1. ಮೈಕ್ರೋ ಫೈನಾನ್ಸ್ ಸಂಸ್ಥೆಗಳ ದುರಾಡಳಿತವನ್ನು ಹತ್ತಿಕ್ಕಲು ಸದ್ಯ ಇರುವ ಕಾನೂನು ಪರಿಣಾಮಕಾರಿಯಾಗಿಲ್ಲ
2. ರಾಜ್ಯದಲ್ಲಿ ಈಗಾಗಲೇ ಮೈಕ್ರೋ ಫೈನಾನ್ಸ್ ಹಾವಳಿಗೆ ಮೂವರು ಬಲಿ
3. ಮಧ್ಯವರ್ತಿಗಳ ಹಾವಳಿ ಹೆಚ್ಚಾಗಿರುವುದು ಸಮಸ್ಯೆಗೆ ಕಾರಣ
4. ಸರ್ಕಾರದ ನಿಯಾಮವಳಿಯನ್ನ ಗಾಳಿತೂರಿ ಮೈಕ್ರೋ ಫೈನಾನ್ಸ್ ನಡೆದುಕೊಳ್ಳುತ್ತಿದೆ

### 25 ರಂದು ಅಧಿಕಾರಿಗಳ ಸಭೆ

ರಾಜ್ಯದಲ್ಲಿ ಮೈಕ್ರೋ ಫೈನಾನ್ಸ್ ಸಂಸ್ಥೆಗಳಿಂದ ಸಾರ್ವಜನಿಕರಿಗೆ ನೀಡುತ್ತಿರುವ ಕಿರುಕುಳ ದಿನದಿಂದ ದಿನಕ್ಕೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಜನವರಿ 25 ರಂದು ಅಧಿಕಾರಿಗಳ ಸಭೆ ಕರೆದಿದ್ದಾರೆ. ಮುಖ್ಯಮಂತ್ರಿಗಳ ನೇತೃತ್ವದಲ್ಲಿ ಶನಿವಾರ ಗೃಹ ಕಚೇರಿ ಕೃಷ್ಣದಲ್ಲಿ ಸಭೆ ನಡೆಯಲಿದ್ದು, ಸಂಬಂಧಿಸಿದ ಮಾಹಿತಿಯೊಂದಿಗೆ ಸಭೆಗೆ ಹಾಜರಾಗುವಂತೆ ವಿವಿಧ ಇಲಾಖೆಗಳ ಅಧಿಕಾರಿಗಳಿಗೆ ಮುಖ್ಯಮಂತ್ರಿಗಳ ವಿಶೇಷ ಕರ್ತವ್ಯಾಧಿಕಾರಿ ಕೆ ಚಿರಂಜೀವಿ ಅವರು ಸೂಚಿಸಿದ್ದಾರೆ.

### ಕಾನೂನುಗಳು ಪರಿಣಾಮಕಾರಿಯಾಗಿಲ್ಲ



ರಾಜ್ಯದಾದ್ಯಂತ ಎಂಎಫ್ಐಗಳಿಂದ ಕಿರುಕುಳದ ಬಗ್ಗೆ ದೂರುಗಳು ಬಂದಿವೆ. ಸದ್ಯ ಅಸ್ತಿತ್ವದಲ್ಲಿರುವ ಕಾನೂನುಗಳು ಅಷ್ಟೇನು ಪರಿಣಾಮಕಾರಿಯಾಗಿಲ್ಲ ಎಂಬುದು ನಮಗೆ ತಿಳಿದು ಬಂದಿದೆ. ಕಾಂಗ್ರೆಸ್ ಸರ್ಕಾರ ಈ ಕಾನೂನಿಗೆ ತಿದ್ದುಪಡಿ ತರಲಿದೆ. 'ಬ್ಯಾಂಕ್ ನಿಯಮಾನುಸಾರ ಸಾಲ ವಸೂಲಾತಿ ಹಾಗೂ ಅವುಗಳ ರಕ್ಷಣೆಗೆ ಕಾನೂನು ಇದೆ. ಆದರೆ, ಮೈಕ್ರೋ ಫೈನಾನ್ಸ್ ಸಂಸ್ಥೆಗಳನ್ನು ಎದುರಿಸಲು ಸದ್ಯ ಇರುವ ಕಾನೂನುಗಳು ಪರಿಣಾಮಕಾರಿಯಾಗಿಲ್ಲ ಮತ್ತು ಅವುಗಳ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲು ಅವು ಕಠಿಣವಾಗಿಲ್ಲ ಎಂದು ನಮ್ಮ ಇಲಾಖೆಯಿಂದ ನಾವು ವರದಿಗಳನ್ನು ಪಡೆದಿದ್ದೇವೆ'. 'ಭವಿಷ್ಯದಲ್ಲಿ, ಎಂಎಫ್ಐಗಳನ್ನು ನಿಯಂತ್ರಿಸಲು ಕಟ್ಟುನಿಟ್ಟಾದ ಕಾನೂನುಗಳನ್ನು ರಚಿಸುವ ಅವಶ್ಯಕತೆಯಿದೆ ಮತ್ತು ಕಾಂಗ್ರೆಸ್ ನೇತೃತ್ವದ ಸರ್ಕಾರವು ಕಾನೂನುಗಳನ್ನು ರೂಪಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸುತ್ತದೆ. ಈ ನಡುವೆ, ರಾಜ್ಯದ ಕೆಲವೆಡೆ ನಡೆಯುತ್ತಿರುವ ಕಿರುಕುಳದ ಬಗ್ಗೆ ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ಸೂಚಿಸಿದ್ದೇವೆ' ಎಂದು ಗೃಹಸಚಿವ ಜಿ. ಪರಮೇಶ್ವರ್ ತಿಳಿಸಿದರು.

• ಉದಯವಾಹಿನಿ, ಬೆಂಗಳೂರು

ಕರ್ನಾಟಕದಲ್ಲಿ ಮೈಕ್ರೋ ಫೈನಾನ್ಸ್‌ಗಳ ಹಾವಳಿ ಹೆಚ್ಚಾಗಿದ್ದು, ಈ ಕುರಿತು ರಾಜ್ಯದ ಮೂಲೆ ಮೂಲೆಗಳಲ್ಲಿ ತರಹೇವಾರಿ ಚರ್ಚೆಗಳು ಆರಂಭವಾಗಿವೆ. ಮೈಕ್ರೋ ಫೈನಾನ್ಸ್ ಹಾವಳಿಗೆ ಬೇಸತ್ತು ರಾಜ್ಯದಲ್ಲಿ ಈಗಾಗಲೇ ಹಲವರು ತಮ್ಮ ಪ್ರಾಣ ಕಳೆದುಕೊಂಡಿದ್ದು, ಕೆಲವು ಕಡೆ ಗ್ರಾಮಕ್ಕೆ ಗ್ರಾಮವೇ ಖಾಲಿಯಾಗುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ.

**ರಾಮನಗರ:** ರಾಜ್ಯದ ರಾಮನಗರ ಜಿಲ್ಲೆಯಲ್ಲಿ ಮೈಕ್ರೋ ಫೈನಾನ್ಸ್ ಹಾವಳಿ ಹೆಚ್ಚಾಗಿ ಕೇಳಿಬಂದಿದ್ದು, ರಾಮನಗರದ ಕೂನಮುದ್ದನಹಳ್ಳಿ ಗ್ರಾಮದಲ್ಲಿ ಸುಮಾರು 15ಕ್ಕೂ ಹೆಚ್ಚು ಕುಟುಂಬಗಳು ಮೈಕ್ರೋ ಫೈನಾನ್ಸ್ ಸಿಬ್ಬಂದಿ ಕಾಟಕ್ಕೆ ಊರನ್ನು ತೊರೆದಿದ್ದಾರೆ. ಕೆಲವರಂತೂ ತಮ್ಮ ವೃದ್ಧ ತಂದೆ-ತಾಯಿಗಳನ್ನು ಮನೆಯಲ್ಲೇ ಬಿಟ್ಟು ಪರಸ್ಥಳಗಳಿಗೆ ವಲಸೆ ಹೋಗಿದ್ದಾರೆ. ಅದೇ ರೀತಿ ಚನ್ನಪಟ್ಟಣ ತಾಲ್ಲೂಕಿನ ಮೈಲನಾಯ್ಕನಹಳ್ಳಿ ಗ್ರಾಮದಲ್ಲಿ, ಮೈಕ್ರೋ ಫೈನಾನ್ಸ್ ಕಂಪನಿಗಳ ಕಿರುಕುಳಕ್ಕೆ ಬೇಸತ್ತು ಲೀಲಾವತಿ ಎಂಬ 50 ವರ್ಷದ ಮಹಿಳೆ ವಿಷ ಸೇವಿಸಿ ಆತ್ಮಹತ್ಯೆ ಮಾಡಿಕೊಂಡಿದ್ದಾಳೆ. ಇನ್ನು ಸಾಲ ವಸೂಲಿಗಾಗಿ ಮೈಕ್ರೊ ಫೈನಾನ್ಸ್‌ನವರು ನೀಡುವ ಕಿರುಕುಳ ತಾಳಲಾರದೆ, ಮಾಗಡಿ ತಾಲ್ಲೂಕಿನ ಕೆಲವು ಮಹಿಳೆಯರು ತಮ್ಮ ಕಿಡ್ನಿಗಳನ್ನೇ ಮಾರಾಟ ಮಾಡಿಕೊಳ್ಳುತ್ತಿದ್ದಾರೆ ಎಂಬ ವರದಿಗಳೂ ಬಂದಿವೆ. ಈ ಕುರಿತು ಮಾಗಡಿ ಪೊಲೀಸ್ ಠಾಣೆಯಲ್ಲಿ ದೂರು ಕೂಡ ದಾಖಲಾಗಿದೆ.

**ಮೈಸೂರು:** ಮೈಸೂರು ಜಿಲ್ಲೆಯ ನಂಜನಗೂಡು ತಾಲ್ಲೂಕಿನಲ್ಲೂ ಮೈಕ್ರೋ ಫೈನಾನ್ಸ್ ಹಾವಳಿ ಕೇಳಿಬಂದಿದ್ದು, ತಾಲ್ಲೂಕಿನ ಹುಲ್ಲಹಳ್ಳಿ, ರಾಂಪುರ, ಕುರಿಹುಂಡಿ, ಶಿರಮಳ್ಳಿ, ಕಗ್ಗಲೂರು ಹೆಗ್ಗಡಹಳ್ಳಿ ಸೇರಿದಂತೆ ಹಲವು ಗ್ರಾಮಗಳಲ್ಲಿ ಮೈಕ್ರೋ ಫೈನಾನ್ಸ್ ಕಂಪನಿಗಳಲ್ಲಿ ಸಾಲ ಪಡೆದಿರುವವರು ತಮ್ಮ ಗ್ರಾಮಗಳನ್ನು ತೊರೆದಿದ್ದಾರೆ.

**ಬೆಳಗಾವಿ:** ಸುವರ್ಣ ಸೌಧಕ್ಕೆ ಹೊಂದಿಕೊಂಡಿರುವ ತಾರಿಹಾಳ ಗ್ರಾಮದಲ್ಲಿ, ಸಾಲ ಮರುಪಾವತಿ ಮಾಡಿಲ್ಲ ಎಂಬ ಕಾರಣಕ್ಕೆ ಬಾಣಂತಿಯನ್ನು ಮನೆಯಿಂದ ಹೊರಹಾಕಿ ಮುಟ್ಟುಗೋಲು ಹಾಕಿಕೊಂಡಿದ್ದಾರೆ. ಈ ಕುರಿತು ಪ್ರತಿಕ್ರಿಯೆ ನೀಡಿರುವ ಬೆಳಗಾವಿ ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್, ಮಧ್ಯವರ್ತಿಗಳ ಹಾವಳಿ ಹೆಚ್ಚಾಗಿರುವುದು ಸಮಸ್ಯೆಗೆ ಕಾರಣ ಎಂದು ಹೇಳಿದ್ದಾರೆ.

**ಹಾವೇರಿ:** ಅದರಂತೆ ಮೈಕ್ರೋ ಫೈನಾನ್ಸ್ ಸಿಬ್ಬಂದಿಯ ಕಿರುಕುಳ ತಪ್ಪಿಸಿ ಮಹಿಳೆಯರ ಮಾಂಗಲ್ಯ ಉಳಿಸುವಂತೆ ಮನವಿ ಮಾಡಿ, ಮುಖ್ಯಮಂತ್ರಿಗಳಿಗೆ ಸಿದ್ದರಾಮಯ್ಯ ಅವರಿಗೆ ಪತ್ರದ ಜೊತೆಗೆ ಮಾಂಗಲ್ಯ ಸರ ರವಾನಿಸುವ ಮೂಲಕ, ಹಾವೇರಿ ಜಿಲ್ಲೆಯ ರಾಣೇಬೆನ್ನೂರಿನಲ್ಲಿ ರೈತ ಸಂಘದಿಂದ ವಿನೂತನ ಪ್ರತಿಭಟನೆ ನಡೆಸಲಾಗಿದೆ.

**ರಾಯಚೂರು:** ಇನ್ನು ರಾಯಚೂರಿನಲ್ಲಿ ಮೈಕ್ರೋ ಫೈನಾನ್ಸ್ ಕಂಪನಿಯವರು ಸಾಲ ಕೊಡುವುದಾಗಿ ದುಂಬಾಲು ಬಿದ್ದು, 250 ರೂ.ಗೆ ನಕಲಿ ದಾಖಲೆ ಸೃಷ್ಟಿಸಿ ಸಾಲ ಹಂಚಿಕೆ ಮಾಡುತ್ತಿದ್ದಾರೆ ಎಂಬ ಆರೋಪ ಕೇಳಿಬಂದಿದೆ. ಅಲ್ಲದೇ ಸಾಲ ಮರುಪಾವತಿ ವಿಳಂಬವಾದರೆ ಕಿರುಕುಳ ನೀಡಲು ಆರಂಭಿಸುತ್ತಾರೆ ಎಂದು ಸಂತ್ರಸ್ತರು ಅಳಲು ತೋಡಿಕೊಂಡಿದ್ದಾರೆ. ರಾಯಚೂರು ಜಿಲ್ಲೆಯ ಮಾನವಿ ತಾಲ್ಲೂಕಿನ ಕಪಗಲ್‌ನಲ್ಲಿ, ಇತ್ತೀಚೆಗೆ 30 ವರ್ಷದ ಶರಣಬಸವ ಎಂಬಾತ ಮೈಕ್ರೋಫೈನಾನ್ಸ್ ಕಿರುಕುಳಕ್ಕೆ ಬೇಸತ್ತು ಆತ್ಮಹತ್ಯೆಗೆ ಶರಣಾಗಿದ್ದ.

**ಚಿಕ್ಕಮಗಳೂರು:** ಇನ್ನ ಚಿಕ್ಕಮಗಳೂರಿನ ಹಾಂದಿ ಗ್ರಾಮದ ಭೀಮನಗರದಲ್ಲಿ, ಮೈಕ್ರೋ ಫೈನಾನ್ಸ್ ಸಿಬ್ಬಂದಿ ಕಾಟಕ್ಕೆ ಬೇಸತ್ತು, ಸುಮಾರು 15ಕ್ಕೂ ಹೆಚ್ಚು ಮಹಿಳೆಯರು ಊರು ತೊರೆದಿದ್ದಾರೆ. ಸಾಲಕ್ಕಾಗಿ ಮೈಕ್ರೋ ಫೈನಾನ್ಸ್‌ನವರೇ ಮನವಿ ಮಾಡಿ, ಇದೀಗ ಮರುಪಾವತಿಗಾಗಿ ಒತ್ತಡ ಹೇರುತ್ತಿದ್ದಾರೆ ಎಂಬುದು ಗ್ರಾಮಸ್ಥರ ಅಳಲಾಗಿದೆ.

### ಈ ಸರ್ಕಾರ ನಿದ್ದೆ ಮಾಡ್ತಿದ್ಯಾ, ಬದುಕಿದ್ಯಾ, ಸತ್ತಿದ್ಯಾ



ಸರ್ಕಾರ ಇನ್ನೂ ಎಚ್ಚೆತ್ತುಕೊಂಡಿಲ್ಲ. ಜನರ ಪ್ರಾಣ ತ್ಯಾಗ ಆಗ್ತಿದೆ, ಹಾಗಿದ್ದರೂ ಏಕೆ ಕ್ರಮ ಆಗಿಲ್ಲ. ಇವಾಗ ಸಿಎಂ ಸಭೆ ನಡೆಸಲು ಮುಂದಾಗಿದ್ದಾರೆ. ಏಕೆ ಇದಕ್ಕೂ ಮೊದಲು ಸಿಎಂ ಕ್ರಮ ಕೈಗೊಳ್ಳಲಿಲ್ಲ. ಮೈಕ್ರೋ ಫೈನಾನ್ಸ್ ನಿಂದ ಸಾಕಷ್ಟು ಜನರು ಸಾವನ್ನಪ್ಪುತ್ತಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಇತಿಮಿತಿಯಿಲ್ಲದೆ ಮೈಕ್ರೋ ಫೈನಾನ್ಸ್ ಹಾವಳಿ ನಡೆಯುತ್ತಿದೆ. ಮೈಕ್ರೋ ಫೈನಾನ್ಸ್ ನಿಂದ ಬಡವರಿಗೆ ವಂಚನೆಯಾಗುತ್ತಿದೆ. ಈ ಸರ್ಕಾರ ಬಂದ ಮೇಲೆ ಮೈಕ್ರೋ ಫೈನಾನ್ಸ್ ಹಾವಳಿ ಹೆಚ್ಚಾಗಿದೆ. ರಾಜ್ಯ ಸರ್ಕಾರದ ನಿಯಾಮವಳಿಯನ್ನ ಗಾಳಿತೂರಿ ಮೈಕ್ರೋ ಫೈನಾನ್ಸ್ ನಡೆದುಕೊಳ್ಳುತ್ತಿದೆ ಇನ್ನೊಂದು ಕಡೆ ಗ್ಯಾರಂಟಿ ಕೊಟ್ಟಿದ್ದೇವೆ. ಗ್ಯಾರಂಟಿ ಹಣದಲ್ಲಿ 24 ಸಾವಿರ ರೂಪಾಯಿಯಲ್ಲಿ ಕಾರು, ಬೈಕ್ ಮತ್ತು ಬೋರ್ ವೆಲ್ ಹಾಕಿಸಿದ್ದಾರಂತೆ ಅಂತ ಬುರುಡೆ ಬಿಡುತ್ತಿದೆ. ರಾಮನಗರದಲ್ಲಿ ಮೈಕ್ರೋ ಫೈನಾನ್ಸ್ ನಿಂದ ಕಿಡ್ನಿ ಮಾರಿಕೊಂಡ ವರದಿಯಾಗಿದೆ. ಈ ಸರ್ಕಾರ ನಿದ್ದೆ ಮಾಡ್ತಿದ್ಯಾ ಬದುಕಿದ್ಯಾ ಸತ್ತಿದ್ಯಾ ಅಂತ ಕೇಳಬೇಕಾಗುತ್ತೆ ಎಂದು ರಾಜ್ಯ ಸರ್ಕಾರದ ವಿರುದ್ಧ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಕಿಡಿಕಾರಿದರು.

## ಖೋ ಖೋ ವಿಶ್ವಕಪ್ ಗೆದ್ದ ಕನ್ನಡಿಗರಿಗೆ ತಲಾ ರೂ.5 ಲಕ್ಷ

• ಉದಯವಾಹಿನಿ, ಬೆಂಗಳೂರು

2025ರ ಪುರುಷರ ಹಾಗೂ ಮಹಿಳಾ ಖೋ ಖೋ ವಿಶ್ವಕಪ್‌ನಲ್ಲಿ ಅತ್ಯುತ್ತಮ ಆಟವಾಡಿ ಭಾರತ ತಂಡವು ಎರಡೂ ವಿಭಾಗದಲ್ಲಿ ವಿಶ್ವ ಚಾಂಪಿಯನ್ ಆಗಿದ್ದು, ಈ ನಿಮಿತ್ತ ಕನ್ನಡಿಗರಿಗೆ ಸಿಎಂ ಸಿದ್ದರಾಮಯ್ಯ ಅವರು ತಲಾ ರೂ.5 ಲಕ್ಷ ಘೋಷಣೆ ಮಾಡಿದರು. ಅತ್ಯುತ್ತಮ ಪ್ರದರ್ಶನ ನೀಡಿದ ಮಂಡ್ಯ ಜಿಲ್ಲೆಯ ಡಿ.ಮಲ್ಲಿಗೆರೆ ಗ್ರಾಮದ ಎಂ.ಕೆ ಗೌತಮ್ ಹಾಗೂ ಮೈಸೂರು ನರಸೀಪುರದ ಕುರುಬೂರಿನ ಚೈತ್ರಾ, ಅವರನ್ನು ಸಿಎಂ ಅವರು ವಿಧಾನಸೌಧದ ತಮ್ಮ ಕಚೇರಿಯಲ್ಲಿ ಸನ್ಮಾನಿಸಿ ಗೌರವಿಸಿದರು. ಇಬ್ಬರೂ ಪಟುಗಳಿಗೆ ತಲಾ 5 ಲಕ್ಷ ರೂಪಾಯಿಯ ಬಹುಮಾನವನ್ನೂ ಘೋಷಿಸಿದರು. ಈ ಸಂದರ್ಭದಲ್ಲಿ ಸಚಿವರಾದ ಚಲುವರಾಯಸ್ವಾಮಿ ಮತ್ತು ಒಲಂಪಿಕ್ ಅಸೋಸಿಯೇಷನ್ ಅಧ್ಯಕ್ಷರಾದ ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಗೋವಿಂದರಾಜು ಉಪಸ್ಥಿತರಿದ್ದರು.

## ಅಸಾದುದ್ದೀನ್ ಒವೈಸಿ ಸೇರಿ 8 ಸಂಸದರು ಅಮಾನತು

• ಉದಯವಾಹಿನಿ, ನವದೆಹಲಿ

ವಕ್ಫ್ (ತಿದ್ದುಪಡಿ) ಮಸೂದೆ ಕುರಿತು ಶುಕ್ರವಾರ ನಡೆಯುತ್ತಿರುವ ಜಂಟಿ ಸಂಸದೀಯ ಸಮಿತಿ (ಜೆಪಿಸಿ) ಸಭೆಯಲ್ಲಿ ಗದ್ದಲ ಭುಗಿಲೆದ್ದಿದೆ. ಗದ್ದಲದ ನಂತರ ಎಐಎಂಐಎಂ ಮುಖ್ಯಸ್ಥ ಅಸಾದುದ್ದೀನ್ ಒವೈಸಿ ಸೇರಿದಂತೆ ಹತ್ತು ವಿರೋಧ ಪಕ್ಷದ ಸಂಸದರನ್ನು ಸಭೆಯಿಂದ ಒಂದು ದಿನದ ಮಟ್ಟಿಗೆ ಅಮಾನತುಗೊಳಿಸಲಾಯಿತು. ಕಲ್ಯಾಣ್ ಬ್ಯಾನರ್ಜಿ, ಮೊಹಮ್ಮದ್ ಜಾವೈದ್, ಎ ರಾಜಾ, ಅಸಾದುದ್ದೀನ್ ಒವೈಸಿ, ನಾಸಿರ್ ಹುಸೇನ್, ಮೊಹಿಬುಲ್ಲಾ, ಎಂ ಅಬ್ದುಲ್ಲಾ, ಅರವಿಂದ್ ಸಾವಂತ್, ನದೀಮುಲ್ ಹಕ್ ಮತ್ತು ಇಮ್ರಾನ್ ಮಸೂದ್ ಅವರನ್ನು ಅಮಾನತುಗೊಳಿಸಲಾಗಿದೆ. ಸಮಿತಿ ಸದಸ್ಯರ ನಡುವಿನ ಭಿನ್ನಾಭಿಪ್ರಾಯದ ನಂತರ ಈ ಸಂಸದರನ್ನು ಅಮಾನತುಗೊಳಿಸಲಾಯಿತು. ಸಮಿತಿಯ ಅಧ್ಯಕ್ಷರು ಯಾರ ಮಾತನ್ನೂ ಕೇಳುತ್ತಿಲ್ಲ ಎಂದು ಟಿಎಂಸಿ ಸಂಸದ ಕಲ್ಯಾಣ್ ಬ್ಯಾನರ್ಜಿ ಆರೋಪಿಸಿದ್ದಾರೆ. ಇದು ಸಭೆಯಲ್ಲಿ ನಡೆಯುತ್ತಿರುವ ಅಘೋಷಿತ ತುರ್ತು ಪರಿಸ್ಥಿತಿಯಂತಿದೆ... ಅಧ್ಯಕ್ಷರು ಇದನ್ನು (ಸಭೆ) ಮುಂದುವರಿಸುತ್ತಿದ್ದಾರೆ ಮತ್ತು ಅವರು ಯಾರ ಮಾತನ್ನೂ ಕೇಳುವುದಿಲ್ಲ... ಅವರು (ಬಿಜೆಪಿ ಸಂಸದರು) ತಾವು ಉಪ ಪ್ರಧಾನಿ ಮತ್ತು ಉಪ ಗೃಹ ಸಚಿವರು ಎಂದು ಭಾವಿಸುತ್ತಾರೆ. ಇದು ಸಂಪೂರ್ಣ ಪ್ರಹಸನ... ಜನವರಿ 24 ಮತ್ತು 25 ರಂದು ಸಭೆ ನಡೆಯಲಿದೆ ಎಂದು ನಮಗೆ ತಿಳಿಸಲಾಯಿತು. ಈಗ, ಇಂದಿನ ಸಭೆಯಲ್ಲಿ, ಕಾರ್ಯಸೂಚಿಯನ್ನು ಷರತ್ತು ಚರ್ಚೆಯಿಂದ ಷರತ್ತು ಚರ್ಚೆಯಿಂದ ಬದಲಾಯಿಸಲಾಗಿದೆ ಎಂದು ಬ್ಯಾನರ್ಜಿ ಹೇಳಿದರು.

## ಮತ್ಯಾಕೆ ಜನ ಮೈಕ್ರೋ ಫೈನಾನ್ಸ್ ನಲ್ಲಿ ಸಾಲ ಮಾಡ್ತಿದ್ದಾರೆ

• ಉದಯವಾಹಿನಿ, ರಾಮನಗರ

ರಾಜ್ಯದಲ್ಲಿ ಮೈಕ್ರೋ ಫೈನಾನ್ಸ್ ಹಾವಳಿಗೆ ಸರ್ಕಾರದ ವಿರುದ್ಧ ಕೇಂದ್ರ ಸಚಿವ ಕುಮಾರಸ್ವಾಮಿ ವಾಗ್ದಾಳಿ ನಡೆಸಿದ್ದಾರೆ. ಇದನ್ನ ಸರ್ಕಾರ ನೋಡಬೇಕಲ್ವಾ. ಉಸ್ತುವಾರಿ ಸಚಿವರು ನೋಡಬೇಕಲ್ವಾ. ಕೇವಲ ರಾಮನಗರ ಅಲ್ಲ, ರಾಜ್ಯದ ಹಲವೆಡೆ ಮೈಕ್ರೋ ಫೈನಾನ್ಸ್ ಹಾವಳಿ ಹೆಚ್ಚಾಗಿದೆ ಎಂದು ಹೇಳಿದರು. ಈಗ 2 ಸಾವಿರ ಗ್ಯಾರಂಟಿ ಹಣ ಕೊಟ್ಟಿದ್ದಾರಲ್ಲ, ಮತ್ಯಾಕೆ ಜನ ಮೈಕ್ರೋ ಫೈನಾನ್ಸ್‌ನಲ್ಲಿ ಸಾಲ ಮಾಡ್ತಿದ್ದಾರೆ, ನಾನು ಸಿಎಂ ಆಗಿದ್ದಾಗ ಬಿಲ್ ಪಾಸ್ ಮಾಡಿ ಒಂದು ಕಾನೂನು ತಂದೆ. ಆ ಬಿಲ್ ಏನಾಯ್ತು., ಅಂದಿನ ಸಹಕಾರ ಸಚಿವರನ್ನ ಕೇರಳಕ್ಕೆ ಕಳುಹಿಸಿ ಈ ಬಗ್ಗೆ ಅಧ್ಯಯನ ಮಾಡಿಸಿದ್ದೆ. ಕೇರಳದಲ್ಲಿ ಈ ವಿಚಾರಕ್ಕೆ ಒಂದು ಕಮಿಷನ್ ಇದೆ. ಅಂತಹ ಒಂದು ಕಮಿಷನ್ ಇಲ್ಲೂ ಕೂಡಾ ತೆರೆದು ಸಾಲ ತೆಗೆದುಕೊಂಡು ಕಟ್ಟಲು ಆಗದವರಿಗೆ ಅನುಕೂಲ ಮಾಡಬೇಕು ಅಂತ ನೋಡಿದ್ದೆ. ಆದ್ರೆ, ನಮ್ಮ ಸರ್ಕಾರ ತೆಗೆದುಹಾಕಿದ್ರು. ಇವತ್ತು ಸರ್ಕಾರ ನಡೆಯುತ್ತಿದೆಯಲ್ಲಾ ಯಾಕೆ ಮಾಡ್ತಿಲ್ಲ. ಎಂದು ಕಿಡಿಕಾರಿದರು.. ರಾಮನಗರದಲ್ಲಿ ಒಬ್ಬ ಮಹಿಳೆ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ರಾಮನಗರ ಉದ್ಧಾರ ಮಾಡ್ತೀವಿ ಅಂತಿದ್ರಲ್ಲಾ ಯಾರಾದ್ರೂ ಹೋಗಿ ಅವರ ಸಮಸ್ಯೆ ಕೇಳಿದ್ದೀರಾ., ಯಾವ ಮಂತ್ರಿಯಾದ್ರೂ ಬಂದಿದ್ದಾರಾ. ಇದನ್ನ ಜನ ಅರ್ಥ ಮಾಡಿಕೊಳ್ಳಬೇಕು ಎಂದರು.

## 20,000 ಸ್ವೀಕರಿಸುತ್ತಿದ್ದಾಗಲೇ ಲೋಕಾಯುಕ್ತ ಬಲೆಗೆ ಬಿದ್ದ ಪಿಡಿಓ

• ಉದಯವಾಹಿನಿ, ಬೆಂಗಳೂರು

ಜಮೀನು ಖಾತೆ ಸಂಬಂಧ ರೈತನಿಂದ 20,000 ಲಂಚ ಸ್ವೀಕರಿಸುತ್ತಿದ್ದಾಗಲೇ ಲೋಕಾಯುಕ್ತ ಬಲೆಗೆ ಬೇಗೂರು ಗ್ರಾಮ ಪಂಚಾಯ್ತಿ ಪಿಡಿಓ ಬಿದ್ದಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ ತಾಲ್ಲೂಕಿನ ಬೇಗೂರು ಗ್ರಾಮ ಪಂಚಾಯ್ತಿ ಪಿಡಿಓ ಶೋಭಾರಾಣಿ ಎಂಬುವರು ಜಮೀನು ಖಾತೆ ಮಾಡಿಕೊಡಲು ರಮೇಶ್ ಎಂಬುವರಿಂದ 20,000 ಲಂಚಕ್ಕೆ ಬೇಡಿಕೆ ಇಟ್ಟಿದ್ದರು. ಈ ಸಂಬಂಧ ರಮೇಶ್ ಲೋಕಾಯುಕ್ತ ಪೊಲೀಸರಿಗೆ ದೂರು ನೀಡಿದ್ದರು. 20,000 ಲಂಚದ ಹಣವನ್ನು ಬೋಕರ್ ರುದ್ರಪ್ಪ ಮೂಲಕ ಪಿಡಿಓ ಶೋಭಾರಾಣಿ ಪಡೆಯುತ್ತಿದ್ದಾಗ ಲೋಕಾಯುಕ್ತ ಪೊಲೀಸರು ರೆಡ್ ಹ್ಯಾಂಡ್ ಆಗಿಯೇ ಹಿಡಿದಿದ್ದಾರೆ. ಇದೀಗ ವಶಕ್ಕೆ ಪಡೆದಿರುವಂತ ಲೋಕಾಯುಕ್ತ ಪೊಲೀಸರು, ವಿಚಾರಣೆ ನಡೆಸುತ್ತಿದ್ದಾರೆ.

## ಎಲ್ಲೂ ಹೋಗಲ್ಲ, ಶ್ರೀರಾಮುಲು ಎಲ್ಲೂ ಹೋಗಲ್ಲ

• ಉದಯವಾಹಿನಿ, ಬೆಂಗಳೂರು

ಮಾಜಿ ಸಚಿವ ಬಿ. ಶ್ರೀರಾಮುಲು ಅವರು ಬಿಜೆಪಿ ತೊರೆಯವುದಿಲ್ಲ ಮತ್ತು ಕಾಂಗ್ರೆಸ್ ಪಕ್ಷ ಸೇರುವ ವಿಚಾರವನ್ನೂ ಅವರು ಮಾಡಲಾರರು, ಬಿಜೆಪಿಯಲ್ಲೇ ಇದ್ದು ಪಕ್ಷ ಕಟ್ಟುವ ಕೆಲಸ ಮಾಡಲಿದ್ದಾರೆ ಎಂದು ಮಾಜಿ ಶಾಸಕ ರಾಜುಗೌಡ ಅವರು ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಬಿಜೆಪಿಯ ಸಾಮಾನ್ಯ ಕಾರ್ಯಕರ್ತನಾಗಿ ಶ್ರೀರಾಮುಲು ಅವರು ದುಡಿಯಲಿದ್ದಾರೆ ಎಂದರು. ರಾಮುಲು ಅವರು ಮನಸ್ಸು ಮಾಡಿದರೆ ಕಾಂಗ್ರೆಸ್ಸಿನ ಸಚಿವರು, ಶಾಸಕರನ್ನು ಕರೆದುಕೊಂಡು ಬರುವ ಕೆಲಸ ಮಾಡುತ್ತಾರೆ ಎಂದು ತಿಳಿಸಿದರು. ಬಿ. ಶ್ರೀರಾಮುಲು ಅವರು ಕಾಂಗ್ರೆಸ್ಸಿಗೆ ಸೇರಲಿದ್ದಾರೆ ಎಂಬ ವಿಷಯ ಮಾಧ್ಯಮಗಳಲ್ಲಿ ಬರುತ್ತಿದೆ. ಇದು ಬಹಳಷ್ಟು ಚರ್ಚೆಯಾಗುತ್ತಿದೆ. ರಾಮುಲು ಅವರ ಜೊತೆ ನಾನು ಮೊನ್ನೆ ಮಾತನಾಡಿದ್ದೇನೆ.

ಅವರು ಮನಸ್ಸಿಗೆ ನೋವು ಮಾಡಿಕೊಂಡಿದ್ದರು. ಶ್ರೀರಾಮುಲು ಅವರು ನಮ್ಮ ಸಮಾಜದಲ್ಲಿ ಪ್ರಶ್ನಾತೀತ ನಾಯಕರು. ಇದರಲ್ಲಿ ಎರಡನೇ ಮಾತಿಲ್ಲ ಎಂದು ತಿಳಿಸಿದರು. ಪಕ್ಷದ ಹಿರಿಯರಿಗೆ ಯಾರೋ ತಪ್ಪು ಸಂದೇಶ ನೀಡಿದ್ದರಿಂದ ಹಾಗಾಗಿದೆ. ನಾವೆಲ್ಲರೂ ಒಂದೇ ಇದ್ದೇವೆ. ಪಕ್ಷದ ನಾಯಕರು ಎಂದ ಮೇಲೆ ಸ್ವಲ್ಪ ಹೆಚ್ಚು ಕಮ್ಮಿ ಆಗುತ್ತದೆ. ಸಮಾಧಾನದಿಂದ ಇರುವಂತೆ ಹೇಳಿದ್ದು, ಅವರು ಒಪ್ಪಿಕೊಂಡಿದ್ದಾರೆ ಎಂದು ತಿಳಿಸಿದರು.



ನನ್ನಲ್ಲಿ ಯಾವುದೇ ಅಧಿಕಾರ ಇಲ್ಲದಿದ್ದರೂ ನನ್ನನ್ನು ಆಡಳಿತದಲ್ಲಿದ್ದವರು ಕರೆಯುತ್ತಿದ್ದಾರೆ ಎಂದರೆ ಅವರಿಗೆ ನನ್ನ ಮೇಲಿರುವ ಗೌರವ. ಒಳ್ಳೆಯವರಿದ್ದರೆ ಅಷ್ಟೇ ಕರೆಯುತ್ತಾರೆ. ನನ್ನ ವ್ಯಕ್ತಿತ್ವವನ್ನು ನೋಡಿ ಅವರು ನನ್ನನ್ನೂ ಕರೆದೂ ಇರಬಹುದು. ಅವರ ದೊಡ್ಡತನಕ್ಕೆ ನಾನು ಕೈಮುಗಿತ್ತೀನಿ. ರಾಜಕೀಯವನ್ನು ಹೊರತು ಪಡಿಸಿ ಅವರು ಪ್ರೀತಿಯಿಂದ ಮಾತನಾಡಿದ್ದಾರೆ. ಬಿಜೆಪಿ ನನ್ನ ತಾಯಿ ಇದ್ದ ಹಾಗೇ. ಅದರಲ್ಲಿ ಸೇವಕನಾಗಿ ಕೆಲಸ ಮಾಡಬೇಕೆಂಬುದು ನನ್ನ ನಿರ್ಧಾರ. -ಶ್ರೀರಾಮುಲು, ಮಾಜಿ ಸಚಿವ

ಜನಾರ್ದನ ರೆಡ್ಡಿ ಮತ್ತು ಶ್ರೀರಾಮುಲು ಅವರು ಚಿಕ್ಕಂದಿನಿಂದಲೇ ಒಳ್ಳೆಯ ಸ್ನೇಹಿತರು. ಸ್ನೇಹಿತರೆಂದ ಮೇಲೆ ಕೆಲವೊಮ್ಮೆ ಜಗಳ, ವೈಮನಸ್ಸು ಬಂದೇ ಬರುತ್ತದೆ. ಆ ಜಗಳವನ್ನು ಅವರೇ ಬಗೆಹರಿಸಿಕೊಳ್ಳುತ್ತಾರೆ. ಆ ಜಗಳ ಬೇಗನೇ ಬಗೆಹರಿಯಲಿದೆ ಎಂದು ನುಡಿದರು.

## ರಾಜ್ಯಾಧ್ಯಕ್ಷ ಸ್ಥಾನದ ಗದ್ದಲ: ದಿಢೀರ್ ದೆಹಲಿ ಪ್ರವಾಸ ಮಾಡಿದ ವಿಜಯೇಂದ್ರ

• ಯತ್ನಾಳ್ ನೇತೃತ್ವದ ರೆಬೆಲ್ ಬಣ ವಿಜಯೇಂದ್ರ ಅವರನ್ನು ರಾಜ್ಯಾಧ್ಯಕ್ಷರನ್ನಾಗಿ ಮುಂದುವರಿಸಲು ವಿರೋಧಿಸುತ್ತಿದೆ


• ಉದಯವಾಹಿನಿ, ಬೆಂಗಳೂರು

ವಿಜಯೇಂದ್ರ ಅವರ ರಾಜ್ಯಾಧ್ಯಕ್ಷ ಸ್ಥಾನ ಮುಂದುವರಿಯಬೇಕು ಹೇಗೆಂಬ ಕುರಿತು ರಾಜ್ಯ ಬಿಜೆಪಿ ನಲ್ಲಿ ಗದ್ದಲ ನಡೆಯುತ್ತಿದೆ. ಯತ್ನಾಳ್ ನೇತೃತ್ವದ ಗುಂಪು ಇದರ ವಿರುದ್ಧ, ಇನ್ನೊಂದು ಬಣ ವಿಜಯೇಂದ್ರ ಪರವಾಗಿದ್ದು, ದೆಹಲಿಯ ವರಿಷ್ಠರನ್ನು ವಿಜಯೇಂದ್ರ ಭೇಟಿಯಾಗಿ, ರಾಜ್ಯದ ಬೆಳವಣಿಗೆಗಳ ಕುರಿತು ಚರ್ಚೆ ನಡೆಸುವ ಸಾಧ್ಯತೆ ಇದೆ. ಈ ಸಂದರ್ಭ ಬದಲಾವಣೆ ಸೂಕ್ತವೋ ಎಂಬ ವಿಚಾರವನ್ನು ಹೈಕಮಾಂಡ್ ಮುಂದಿಡಲಾಗಿದೆ. ರಾಜ್ಯ ಬಿಜೆಪಿಯಲ್ಲಿ ರಾಜ್ಯಾಧ್ಯಕ್ಷ ಸ್ಥಾನಕ್ಕೆ ನಡೆಯುತ್ತಿರುವ ಗದ್ದಲದ ಹಿನ್ನೆಲೆಯಲ್ಲಿ ಬಿವೈ ವಿಜಯೇಂದ್ರ ಅವರು ದಿಢೀರ್ ಆಗಿ ದೆಹಲಿಗೆ ತೆರಳಿದ್ದಾರೆ. ದೆಹಲಿಯಲ್ಲಿ ವರಿಷ್ಠರನ್ನು ಭೇಟಿ ಮಾಡಿ ರಾಜ್ಯದಲ್ಲಿ ನಡೆಯುತ್ತಿರುವ ಬೆಳವಣಿಗೆಗಳ ಕುರಿತಾಗಿ ಮಾಹಿತಿ ನೀಡುವ ಸಾಧ್ಯತೆ ಇದೆ.

ಬಿವೈ ವಿಜಯೇಂದ್ರ ರಾಜ್ಯಾಧ್ಯಕ್ಷರಾಗಿ ಮುಂದುವರಿಯಬಾರದು ಎಂಬ ನಿಟ್ಟಿನಲ್ಲಿ ಯತ್ನಾಳ್ ನೇತೃತ್ವದ ರೆಬೆಲ್ ಬಣ ಪಟ್ಟು ಹಿಡಿದಿದೆ. ವಿಜಯೇಂದ್ರ ಅವರನ್ನು ರಾಜ್ಯಾಧ್ಯಕ್ಷರನ್ನಾಗಿ ಮುಂದುವರಿಸುವುದಾದರೆ ಚುನಾವಣೆಯಲ್ಲಿ ತಮ್ಮ ಅಭ್ಯರ್ಥಿಯನ್ನು ಕಣಕ್ಕಿಳುತ್ತೇವೆ ಎಂಬ ಎಚ್ಚರಿಕೆ ನೀಡಿದೆ. ಇದು ಹೈಕಮಾಂಡ್ ತಲೆನೋವಿಗೆ ಕಾರಣವಾಗಿದೆ.

**ಸೈಲೆಂಟ್ ಗುಂಪು ಪ್ರತ್ಯೇಕ ಸಭೆ**

ಈ ನಡುವೆ ಬಿವೈ ವಿಜಯೇಂದ್ರ ಪರವಾಗಿ ಮಾಜಿ ಶಾಸಕರ ತಂಡ ನಿರಂತರ ಬ್ಯಾಟಿಂಗ್ ಮಾಡುತ್ತಿದೆ. ಮಾಜಿ ಶಾಸಕ ಎಂಪಿ ರೇಣುಕಾಚಾರ್ಯ ನೇತೃತ್ವದಲ್ಲಿ ವಿಜಯೇಂದ್ರ ಪರವಾಗಿ ನಿರಂತರ ಸಭೆಗಳನ್ನು ನಡೆಸಲಾಗುತ್ತಿದೆ. ಅಲ್ಲದೆ, ರಾಜ್ಯ ಬಿಜೆಪಿ ಉಸ್ತುವಾರಿ ರಾಧಾ ಮೋಹನ್ ಅಗರವಾಲ್ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಲಾಗಿದೆ.



**ವರಿಷ್ಠರನ್ನು ಭೇಟಿ ಮಾಡಿ ಮನವರಿಕೆ**

ಈ ಎಲ್ಲಾ ಬೆಳವಣಿಗೆಗಳ ನಡುವೆ ಬಿವೈ ವಿಜಯೇಂದ್ರ ಅವರು ದಿಢೀರ್ ದೆಹಲಿಗೆ ತೆರಳಿದ್ದಾರೆ. ದೆಹಲಿಯಲ್ಲಿ ವರಿಷ್ಠರನ್ನು ಭೇಟಿ ಮಾಡಿ ರಾಜ್ಯದಲ್ಲಿ ನಡೆಯುತ್ತಿರುವ ಬೆಳವಣಿಗೆಗಳಿಂದ ಉಂಟಾಗುತ್ತಿರುವ ಸಮಸ್ಯೆಗಳ ಬಗ್ಗೆ ಮನವರಿಕೆ ಮಾಡುವ ಸಾಧ್ಯತೆ ಇದೆ ಎಂದು ತಿಳಿದುಬಂದಿದೆ. ಒಂದು ಕಡೆಗೆ ಬಿಜೆಪಿಯಲ್ಲಿ ಒಗ್ಗಟ್ಟಿಲ್ಲ ಎಂಬ ವಿಪಕ್ಷಗಳ ಟೀಕೆಗಳು ಇದ್ದಾಗಲೇ ಗಾಲಿ ಜನಾರ್ದನ ರೆಡ್ಡಿ ಹಾಗೂ ಶ್ರೀರಾಮುಲು ನಡುವಿನ ಭಿನ್ನಾಭಿಪ್ರಾಯ ಬಹಿರಂಗವಾಗಿ ಸ್ಫೋಟವಾಗಿದೆ. ಈ ಎಲ್ಲಾ ಬೆಳವಣಿಗೆಗಳಿಂದ ಕರ್ನಾಟಕ ಬಿಜೆಪಿಯು ತೀವ್ರ ಮುಜುಗರಕ್ಕೀಡಾಗಿದೆ. ಅತ್ತ, ಯತ್ನಾಳ್ ಮತ್ತು ಅವರ ತಂಡದವರು ನಾವು ಇಟ್ಟ ಹೆಜ್ಜೆ ಹಿಂದಿಡೋಲ್ಲ. ವಿಜಯೇಂದ್ರ ಅವರನ್ನು ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನದಿಂದ ಕೆಳಗಿಳಿಸಿಯೇ ತೀರುತ್ತೇವೆ ಎಂದು ಪಟ್ಟು ಹಿಡಿದಿದ್ದಾರೆ. ಇಂಥ ಸಂದರ್ಭದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷರ ಬದಲಾವಣೆ ಮಾಡುವುದು ಸೂಕ್ತವಾದ ನಿರ್ಧಾರವೇ ಎಂಬಿತ್ಯಾದಿ ವಿಚಾರಗಳನ್ನು ಹೈಕಮಾಂಡ್ ಮುಂದಿಡಲು ವಿಜಯೇಂದ್ರ ಬಣ ನಿರ್ಧರಿಸಿದೆ ಎನ್ನಲಾಗಿದೆ.

**ಸೈಲೆಂಟ್ ಗುಂಪಿನ ಪ್ರತ್ಯೇಕ ಸಭೆ:** ಈ ಎಲ್ಲಾ ಬೆಳವಣಿಗೆಗಳ ನಡುವೆ ಎರಡು ತಂಡದ ಜೊತೆಗೆ ಅಂತರವನ್ನು ಕಾಯ್ದುಕೊಂಡಿದ್ದ ಸೈಲೆಂಟ್ ಗುಂಪು ಪ್ರತ್ಯೇಕ ಸಭೆಯನ್ನು ನಡೆಸಿದೆ. ಮಾಜಿ ಸಿಎಂ ಡಿವಿ ಸದಾನಂದ ಗೌಡ ಅವರ ನಿವಾಸದಲ್ಲಿ ಸಭೆ ನಡೆಸಿದ್ದ ಗುಂಪು ಸದ್ಯದ ವಿದ್ಯಮಾನಗಳ ಕುರಿತಾಗಿ ಚರ್ಚೆ ನಡೆಸಿದೆ. ಈ ತಂಡದಲ್ಲಿ ವಿರೋಧ ಪಕ್ಷದ ನಾಯಕ ಆರ್. ಅಶೋಕ್, ಮಾಜಿ ಸಿಎಂ ಹಾಗೂ ಸಂಸದ ಬಸವರಾಜ ಬೊಮ್ಮಾಯಿ, ಅಶ್ವತ್ಥ ನಾರಾಯಣ, ಸಿಟಿ ರವಿ ಇದ್ದರು. ಈ ಸಭೆಯಲ್ಲಿ ರಾಜ್ಯಾಧ್ಯಕ್ಷ ಸ್ಥಾನದ ಬಗ್ಗೆ ಸೃಷ್ಟಿಯಾಗಿರುವ ಗೊಂದಲದ ಬಗ್ಗೆ ಚರ್ಚೆ ನಡೆಸಲಾಗಿದೆ. ಅಲ್ಲದೆ, ಎರಡು ಬಣಗಳ ನಡುವೆ ಯಾವ ರೀತಿಯಲ್ಲಿ ಸಮನ್ವಯವನ್ನು ಸಾಧಿಸಬೇಕು ಎಂಬ ನಿಟ್ಟಿನಲ್ಲೂ ಚರ್ಚೆ ನಡೆಸಲಾಗಿದೆ.

**ಈ ದಿನದ ದರ**

| | |
|---|---|
| ಪೆಟ್ರೋಲ್: | 103.50 ₹/L |
| ಡೀಸೆಲ್ : | 90.03 ₹/L |
| ಬಂಗಾರ: | ₹8,242 /Gram24ct ₹7,555/Gram22ct |
| ಬೆಳ್ಳಿ: | ₹97.60/Gram |



## ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

### ಶಿವಪುತ್ರಸ್ವಾಮಿಗಳ ಪುಣ್ಯಾರಾಧನೆ

ನಿನ್ನೆ ಸಿದ್ಧಾರೂಢರ ಶಿಷ್ಯ ಶಿವಪುತ್ರಸ್ವಾಮಿಗಳ 41ನೇ ಪುಣ್ಯಾರಾಧನೆಯ ಸಮಾರೋಪ. ಅಭಿನವ ಸಿದ್ಧಾರೂಢ ಸ್ವಾಮೀಜಿ ಮುಂತಾದವರ ಸಾನ್ನಿಧ್ಯ. ಎಂದಿನಂತೆ ಸಭಾಂಗಣ ಭರ್ತಿ. ಭಾಗವಹಿಸಿ ಆಡಿದ ಸ್ಥಿತಪ್ರಜ್ಞ ಶ್ರೀ ಸಿದ್ಧಾರೂಢ ವಿಷಯದ ಮಾತು: ತನ್ನ ನಿಜಸ್ವರೂಪದಲ್ಲಿ ನೆಲೆ ನಿಂತ ಪ್ರಜ್ಞೆಯುಳ್ಳವನು ಸ್ಥಿತಪ್ರಜ್ಞ. ತನ್ನ ಮೂಲ ಸ್ವರೂಪ ಪರಮಾತ್ಮವೇ ಆಗಿದ್ದು ಅದು ಎಲ್ಲೆಡೆ ವ್ಯಾಪಿಸಿದೆ. ಅಲ್ಲಿ ನೆಲೆಗೊಂಡವನು ಸರ್ವವನ್ನು ತನ್ನಲ್ಲಿ ಸರ್ವದರಲ್ಲಿ ತನ್ನನ್ನು ಕಾಣುವನು. ಇಂಥವನು ಸುಖ ದುಃಖಗಳಲ್ಲಿ ಹೊಯ್ದಾಡದೇ ಏಕರೂಪತೆಯಲ್ಲಿ ಉಳಿವನು. ಮನ ಬುದ್ಧಿ ಇಂದ್ರಿಯಗಳು ಹರಿದಡೆಯಲ್ಲೆಲ್ಲ ತನ್ನನ್ನು ಪರಮಾತ್ಮನನ್ನೇ ಕಾಣುವನು. ಇವನು ಜಾತಿ ಲಿಂಗ ಧರ್ಮ ಮುಂತಾದುದನ್ನು ಎಣಿಸಲಾರ. ಅಭೇದ ಅದ್ವೈತ ಸಿದ್ಧಾಂತಕ್ಕೆ ಚೌಕಟ್ಟು ಕಟ್ಟಿಕೊಟ್ಟ ಶಂಕರಾಚಾರ್ಯರ ವಿಷಯದಲ್ಲಿಯೂ ಅಭೇದ ಸ್ಥಿತಿಯ ಸಂದೇಹವಿದೆ. ವ್ಯಾಸರು ಬರೆದ ಬ್ರಹ್ಮಸೂತ್ರಗಳ ಪೈಕಿ ಅಪಶೂದ್ರಾಧಿಕರಣದ ಐದು ಸೂತ್ರಗಳಿಂದ ಶೂದ್ರನಿಗೆ ವೇದವೇದಾಂತಗಳ ಓದುವ ಕೇಳುವ ಅಧಿಕಾರ ಇಲ್ಲ ಎನ್ನಲಾಗಿದೆ. ದ್ವಿಜರಲ್ಲದ ವ್ಯಾಸರು ಹೀಗೆ ಹೇಳಿಯಾರೇ? ಒಂದು ವೇಳೆ ಹೇಳಿದ್ದರೂ ದ್ವಿಜರಾಗಿದ್ದರೂ, ಚಂಡಾಲನೇ ಆಗಿರಲಿ ಆತ್ಮಜ್ಞಾನಿಯಾದರೆ ಆತ ನನ್ನ ಗುರು ಎಂದ ಶಂಕರರು ಇದನ್ನು ಒಪ್ಪಿಕೊಂಡಾರೆಯೇ? ಎಂಬ ಸಂದೇಹ. ಆದರೆ ಸಿದ್ಧಾರೂಢರು ಯಾವತ್ತೂ ಯಾವ ಭೇದವನ್ನೂ ಮಾಡದ ನಿಜವಾದ ಸ್ಥಿತಪ್ರಜ್ಞರು.

# ಉತ್ತರ ಭಾರತೀಯರಿಗೆ ಬೆಂಗಳೂರು ಬಂದ್ ಪೋಸ್ಟ್ ವೈರಲ್!

## ಬಾಗಿಲು ಮುಚ್ಚುವ ಕುರಿತು ಕನ್ನಡ ಭಾಷಾಭಿಮಾನಿಗಳು, ಉತ್ತರ ಭಾರತೀಯರ ನಡುವೆ ಸಾಮಾಜಿಕ ಜಾಲತಾಣದಲ್ಲಿ ಚರ್ಚೆ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

''ಕನ್ನಡ ನಾಡಿನಲ್ಲಿದ್ದು ಕನ್ನಡ ಕಲಿಯದ ಉತ್ತರ ಭಾರತೀಯರಿಗೆ ಹಾಗೂ ಅಕ್ಕಪಕ್ಕದ ರಾಜ್ಯದವರಿಗೆ ಬೆಂಗಳೂರಿನ ಬಾಗಿಲು ಮುಚ್ಚಿದೆ. ಇಲ್ಲಿನ ಭಾಷೆ ಹಾಗೂ ಸಂಸ್ಕೃತಿಗೆ ಬೆಲೆ ಕೊಡಲು ಸಿದ್ಧವಿಲ್ಲದವರಿಗೆ ಬೆಂಗಳೂರಿನ ಅವಶ್ಯಕತೆಯಿಲ್ಲ' ಎಕ್ಸ್ ಸಾಮಾಜಿಕ ಜಾಲತಾಣದಲ್ಲಿ ಬಬ್ರುವಾಹನ ಎಂಬ ಖಾತೆಯಿಂದ ಮೂಡಿಬಂದಿರುವ ಈ ಪೋಸ್ಟ್, ಸಾಮಾಜಿಕ ಜಾಲತಾಣದಲ್ಲಿ ಬಿಸಿಬಿಸಿ ಚರ್ಚೆಯನ್ನು ಹುಟ್ಟುಹಾಕಿದೆ. ಈ ಪೋಸ್ಟ್ ವಿರುದ್ಧ ಉತ್ತರ ಭಾರತೀಯರು ಕಿಡಿಕಾರಲಾರಂಭಿಸಿದ್ದಾರೆ. ಆದರೆ, ಇದನ್ನು ಕನ್ನಡ ಭಾಷಾಭಿಮಾನಿಗಳು ಸಮರ್ಥಿಸಿಕೊಳ್ಳುತ್ತಿದ್ದಾರೆ. ಹೊಸ ಭಾಷೆಯನ್ನು ಕಲಿಯುವುದು ಅವರವರ ಖಾಸಗಿ ಆಯ್ಕೆಯಾಗಿರುತ್ತದೆ. ಅದನ್ನು ಇನ್ನೊಬ್ಬರ ಮೇಲೆ ಹೇರಬಾರದು ಎಂದು ಹೇಳಿದೆ. ಈ ಪೋಸ್ಟ್‌ನ ಕಮೆಂಟ್ಸ್ ಬಾಕ್ಸ್‌ನಲ್ಲಿ ಇದಕ್ಕೆ ಮಿಶ್ರ ಪ್ರತಿಕ್ರಿಯೆಗಳೂ ಬಂದಿವೆ.

ಹಿಂದಿಗೆ ಇರುವ ಸ್ಥಾನಮಾನ ಕನ್ನಡಕ್ಕೂ ಇದೆ; ಹಿಂದಿ ದಿವಸಕ್ಕೆ ಚಾಮರಾಜನಗರದಲ್ಲಿ ಕನ್ನಡ ಪರ ಸಂಘಟನೆಗಳ ವಿರೋಧ ''ನಾನು ನಿಮ್ಮ ಅನಿಸಿಕೆಯನ್ನು ಗೌರವಿಸುತ್ತೇನೆ. ಆದರೆ, ಬೆಂಗಳೂರಿಗೆ ಉದ್ಯೋಗ ನಿಮಿತ್ತ ಬರುವವರು ಕಡ್ಡಾಯವಾಗಿ ಕನ್ನಡ ಕಲಿಯಬೇಕು ಎಂದು ಸರ್ಕಾರ ಒಂದು ನಿಯಮ ಮಾಡಬೇಕು. ಸುಮ್ಮನೇ ನಿರ್ದಿಷ್ಟ ಗುಂಪುಗಳು ಹೀಗೆ ಒತ್ತಾಯ ಮಾಡುವುದು ಸರಿಯಲ್ಲ'' ಎಂದು ಹೇಳಿದ್ದಾರೆ.

''ಕರ್ನಾಟಕಕ್ಕೆ ಹೊರ ರಾಜ್ಯಗಳಿಂದ ಬರುವವರು ಕನ್ನಡ ಕಲಿಯಬೇಕು. ಇಲ್ಲಿ ಕನ್ನಡವೇ ನಿತ್ಯ ವ್ಯವಹಾರದ ಭಾಷೆಯಾಗಬೇಕು. ಇಂಗ್ಲೀಷ್ ಹಾಗೂ ಅನ್ಯ ಭಾಷೆಗಳಿಗೆ ಕಡಿವಾಣ ಹಾಕಬೇಕು. ಇನ್ನು ಪ್ರಜ್ಞಾಪೂರ್ವಕವಾಗಿ ಅನುಷ್ಠಾನಗೊಳಿಸಬೇಕು'' ಎಂದು ಅವರು ತಿಳಿಸಿದ್ದಾರೆ. ಇದಲ್ಲದೆ, ಕನ್ನಡ ಭಾಷೆಯ ವಿಚಾರಕ್ಕಾಗಿ ಹಲವಾರು ಉತ್ತರ ಭಾರತೀಯರು ಕನ್ನಡಿಗರ ಜೊತೆಗೆ ಕಿರಿಕ್ ಮಾಡಿಕೊಂಡಿದ್ದಿದೆ. ಕನ್ನಡ ಭಾಷೆಯಲ್ಲೇ ಮಾತನಾಡುವಂತೆ ಕೇಳುತ್ತಾರೆ. ''ನೀವು ಬೆಂಗಳೂರಿಗರು ಹಿಂದಿ ಕಲಿಯಿರಿ. ಇದು ಭಾರತ. ಭಾರತದಲ್ಲಿದ್ದುಕೊಂಡು ಹಿಂದಿ ಭಾಷೆ ಬರುವುದಿಲ್ಲವೆಂದರೆ ಏನರ್ಥ'' ಎಂಬಂಥ ಪ್ರಶ್ನೆಗಳನ್ನು ಕೇಳಿದ್ದಾರೆ.

ಆದರೆ, ಇದೆಲ್ಲದಕ್ಕೂ ಕನ್ನಡಿಗರು ಉತ್ತರ ಕೊಟ್ಟಿದ್ದು, ''ಹಿಂದಿ ರಾಷ್ಟ್ರಭಾಷೆಯೇನಲ್ಲ. ಅದನ್ನು ಕಲಿಯುವ ಅಗತ್ಯವೇನಿಲ್ಲ. ಕನ್ನಡಿಗರು ದೆಹಲಿಗೆ ಮುಂತಾದ ಹಿಂದಿ ಭಾಷಿಗರಿರುವ ರಾಜ್ಯಗಳಿಗೆ ಬಂದಾಗ ಅಲ್ಲಿಯವರು ನಮ್ಮೊಂದಿಗೆ ಕನ್ನಡ ಮಾತನಾಡುವ ಹಾಗಿದ್ದರೆ ನಾವು ಹಿಂದಿ ಕಲಿಯುತ್ತೇವೆ'' ಎಂದು ತಿರುಗೇಟು ಕೊಟ್ಟಿದ್ದಾರೆ. ಒಟ್ಟಿನಲ್ಲಿ ಇಂಥ ಪರ - ವಿರೋಧ ಚರ್ಚೆಗಳ ಮುಂದಿನ ಭಾಗವಾಗಿ 'ಉತ್ತರ ಭಾರತೀಯರಿಗೆ ಬೆಂಗಳೂರು ಕ್ಲೋಸ್' ಎಂಬ ಪೋಸ್ಟ್ ಮೂಡಿಬಂದಿದೆ.

> ''ಉತ್ತರ ಭಾರತೀಯರು, ತಮ್ಮಿಂದಲೇ ಬೆಂಗಳೂರು ಇವತ್ತು ನಡೆಯುತ್ತಿದೆ. ಐಟಿ, ಬಿಟಿ ಕಂಪನಿಗಳಲ್ಲಿ ಉತ್ತರ ಭಾರತೀಯರೇ ತುಂಬಿ ತುಳುಕುತ್ತಿದ್ದಾರೆ. ಐಟಿ - ಬಿಟಿಯಿಂದ ಸಾವಿರಾರು ಕೋಟಿ ರೂ. ತೆರಿಗೆ ರಾಜ್ಯದ ಬೊಕ್ಕಸಕ್ಕೆ ಹೋಗುತ್ತಿದೆ. ಅದರಿಂದಲೇ ಕರ್ನಾಟಕದಲ್ಲಿ ಅಭಿವೃದ್ಧಿ ಕಾರ್ಯಗಳಾಗುತ್ತಿವೆ. ಉತ್ತರ ಭಾರತೀಯರೆಲ್ಲರೂ ಬೆಂಗಳೂರು ಬಿಟ್ಟು ಹೋದರೆ, ಇಲ್ಲಿನ ಐಟಿ ಬಿಟಿ ನಿಂತು ಹೋಗಲಿವೆ. ಆಗ ಕರ್ನಾಟಕ ಹಣಕ್ಕಾಗಿ ಕಣ್ಣುಬಾಯಿ ಬಿಡಬೇಕಾಗುತ್ತದೆ'' ಎಂದು ಹೇಳಿದ್ದರು.

### ಹಿಂದೆಯೂ ಹಲವಾರು ಚರ್ಚೆಗಳು

**ಇಂಥ ಚರ್ಚೆಯು ನಡೆಯುತ್ತಿರುವ ಇದೇ ಮೊದಲೇನಲ್ಲ. ಉದ್ಯಾನ ನಗರಿಯಲ್ಲಿ ಉದ್ಯೋಗವಕಾಶಗಳಿಗಾಗಿ ಹೊರರಾಜ್ಯಗಳಿಂದ ಬರುತ್ತಿರುವವರು ಕನ್ನಡವನ್ನು ಕಲಿಯಬೇಕು, ಇಲ್ಲಿನ ನೆಲ, ಜಲ, ಭಾಷೆಗೆ ಬೆಲೆ ಕೊಡಬೇಕು ಎಂಬುದು ಬೆಂಗಳೂರು ಕನ್ನಡಿಗರ ವಾದ. ಇದೇ ವಿಚಾರವಾಗಿ, ಉತ್ತರ ಭಾರತೀಯರಿಗೂ, ಕನ್ನಡಿಗರಿಗೂ ಸಾಮಾಜಿಕ ಜಾಲತಾಣಗಳಲ್ಲಿ ವಾಕ್ಸಮರ ನಡೆಯುತ್ತಿರುತ್ತದೆ.**

**ನೀವು ಬೆಂಗಳೂರಿಗರು ಹಿಂದಿ ಕಲಿಯಿರಿ**

## ಅರಣ್ಯದಲ್ಲಿ ಚಿತ್ರೀಕರಣಕ್ಕೆ ಸರ್ಕಾರದ ಅನುಮತಿ ಕಡ್ಡಾಯ: ಈಶ್ವರ ಖಂಡ್ರೆ

• ಉದಯವಾಹಿನಿ, ಬೆಂಗಳೂರು

ಅರಣ್ಯ ಪ್ರದೇಶದಲ್ಲಿ ಇನ್ನು ಮುಂದೆ ಸಿನಿಮಾ, ಸಾಕ್ಷ್ಯಚಿತ್ರ, ಧಾರಾವಾಹಿ ಸೇರಿದಂತೆ ಯಾವುದೇ ಚಿತ್ರೀಕರಣಕ್ಕೆ ಸರ್ಕಾರದ ಅನುಮತಿ ಪಡೆಯುವುದನ್ನು ಕಡ್ಡಾಯಗೊಳಿಸಿ ಆದೇಶ ಹೊರಡಿಸಲು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಖಂಡ್ರೆ ಸೂಚನೆ ನೀಡಿದ್ದಾರೆ. ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಯವರಿಗೆ ಸ್ಪಷ್ಟ ಸೂಚನೆ ನೀಡಿರುವ ಸಚಿವರು, ಚಲನಚಿತ್ರ, ದೂರದರ್ಶನ ಸಾಕ್ಷ್ಯಚಿತ್ರ. ಧಾರಾವಾಹಿ ಇತ್ಯಾದಿ ಚಿತ್ರೀಕರಣಕ್ಕೆ ಸಂಬಂಧಿತ ಉಪ ಅರಣ್ಯ ಸಂರಕ್ಷಣಾಧಿಕಾರಿಗಳು ನಿಗದಿತ ಶುಲ್ಕ ಕಟ್ಟಿಸಿಕೊಂಡು ಅನುಮತಿ ನೀಡುತ್ತಿದ್ದಾರೆ. ಇದಲ್ಲದೆ ಸ್ಥಳೀಯ ಮಟ್ಟದಲ್ಲೂ ಅಧಿಕಾರಿಗಳು ಅನುಮತಿ ನೀಡುತ್ತಿರುವುದರಿಂದ ಅರಣ್ಯ ಪ್ರದೇಶದ ಗೌಪ್ಯ ಮಾಹಿತಿ ಹೊರ ಜಗತ್ತಿಗೆ ಲಭಿಸುವ ಸಂಭವ ಇರುತ್ತದೆ. ಇದು ಪರಿಸರ, ಜೀವವೈವಿಧ್ಯಕ್ಕೂ ಧಕ್ಕೆ ತರುತ್ತದೆ ಎಂದು ತಿಳಿಸಿದ್ದಾರೆ. ಅರಣ್ಯ, ವನ್ಯ ಜೀವಿಗಳನ್ನು ಸಂರಕ್ಷಿಸಿ ಮುಂದಿನ ಪೀಳಿಗೆಗೆ ಉತ್ತಮ ಪರಿಸರ, ಪ್ರಕೃತಿ ಹಸ್ತಾಂತರಿಸುವ ನಿಟ್ಟಿನಲ್ಲಿ ರಾಜ್ಯದ ಯಾವುದೇ ಅರಣ್ಯ ಪ್ರದೇಶದಲ್ಲಿ ಯಾವುದೇ ಬಗೆಯ ಚಿತ್ರೀಕರಣಕ್ಕೆ ಕಡ್ಡಾಯವಾಗಿ ಸರ್ಕಾರದ ವತಿಯಿಂದ ಅನುಮತಿ ಪಡೆಯಲು ಸೂಕ್ತ ಆದೇಶ ಹೊರಡಿಸುವಂತೆ ಸೂಚಿಸಿದ್ದಾರೆ.

## ಹಣಕಾಸು ವಿಚಾರಕ್ಕೆ ಕೊಲೆ ಬೆದರಿಕೆ ಆರೋಪ

• ಉದಯವಾಹಿನಿ, ಬೆಂಗಳೂರು

ಹಣಕಾಸಿನ ವಿಚಾರಕ್ಕೆ ಉದ್ಯಮಿ ಒಬ್ಬರಿಗೆ ಗನ್ ತೋರಿಸಿ ಕೊಲೆ ಬೆದರಿಕೆ ಆರೋಪ ಹಿನ್ನೆಲೆಯಲ್ಲಿ ಇದೀಗ ಬೆಂಗಳೂರಲ್ಲಿ ಫೈಟರ್ ರವಿಯನ್ನು ಪೊಲೀಸರು ಅರೆಸ್ಟ್ ಮಾಡಿದ್ದಾರೆ. ಸದಾಶಿವನಗರ್ ಪೊಲೀಸರಿಂದ ಫೈಟರ್ ರವಿಯನ್ನು ಬಂಧಿಸಲಾಗಿದೆ. ಉದ್ಯಮಿಗೆ ಗನ್ ತೋರಿಸಿ ಹಲ್ಲೆ ನಡೆಸಿದ ಆರೋಪ ಕೇಳಿಬಂದಿತ್ತು ಉದ್ಯಮಿ ಸೋಮಶೇಖರ್ ಮೇಲೆ ಹಲ್ಲೆ ನಡೆಸಲಾಗಿತ್ತು. ಹಣಕಾಸು ವಿಚಾರಕ್ಕೆ ಕೊಲೆ ಬೆದರಿಕೆ ಆರೋಪ ಕೇಳಿ ಬಂದಿತ್ತು. ಗನ್ ತೋರಿಸಿ ಬೆದರಿಕೆ ಹಾಕಿದ್ದ ಆರೋಪದಡಿ ಇದೀಗ ಪ್ರಕರಣ ಕೂಡ ದಾಖಲಾಗಿದೆ. ಶ್ರೀಕಾಂತ್ ಎಂಬಾತನಿಗೆ ಸೋಮಶೇಖರ್ 75 ಲಕ್ಷ ಕೊಟ್ಟಿದ್ದರು. ಈ ಒಂದು ಹಣಕಾಸಿನ ವಿಚಾರವಾಗಿ ಫೈಟರ್ ರವಿ ಮಧ್ಯ ಪ್ರವೇಶಿಸಿದ್ದು ಗನ್ ತೋರಿಸಿ ಕೊಲೆ ಬೆದರಿಕೆ ಹಾಕಿದ್ದ. ಹಾಗಾಗಿ ಈ ಒಂದು ಬೆದರಿಕೆ ಪ್ರಕರಣದಲ್ಲಿ ಪ್ರಕರಣ ಕೂಡ ದಾಖಲಾಗಿತ್ತು. ಇದೀಗ ಬೆಂಗಳೂರಿನ ಸದಾಶಿವನಗರ ಠಾಣೆ ಪೊಲೀಸರು ಫೈಟರ್ ರವಿಯನ್ನು ಅರೆಸ್ಟ್ ಮಾಡಿದ್ದಾರೆ.

## ಮನೆ ಕೆಲಸದಾಕೆ ಮೇಲೆ ಲೈಂಗಿಕ ದೌರ್ಜನ್ಯ ಎಸಗಿ ಬರ್ಬರ ಹತ್ಯೆ!

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನಲ್ಲಿ ಮನೆ ಕೆಲಸ ಮಾಡಿಕೊಂಡಿದ್ದ ಬಾಂಗ್ಲಾದೇಶದ ಮೂಲದ ಮಹಿಳೆಯ ಮೇಲೆ ಲೈಂಗಿಕ ದೌರ್ಜನ್ಯ ಎಸಗಿ ಭೀಕರವಾಗಿ ಕೊಲೆ ಮಾಡಿರುವ ಘಟನೆ ಬೆಂಗಳೂರಿನ ಕಲ್ಕೆರೆ ಅಪಾರ್ಟ್‌ಮೆಂಟ್ ಬಳಿ ಈ ಒಂದು ಘಟನೆ ನಡೆದಿದೆ. ಹೌದು ಬೆಂಗಳೂರಲ್ಲಿ ಮನೆ ಕೆಲಸ ಮಾಡುತ್ತಿದ್ದ ಮಹಿಳೆ ಮೇಲೆ ಲೈಂಗಿಕ ದೌರ್ಜನ್ಯ ಎಸಗಿ ಬಳಿಕ ಬರ್ಬರವಾಗಿ ಕೊಲೆ ಮಾಡಲಾಗಿದೆ. ರಾಮಮೂರ್ತಿ ನಗರ ಬಳಿಯ ಕಲ್ಕೆರೆ ಅಪಾರ್ಟ್‌ಮೆಂಟ್ ಬಳಿ ಇದೀಗ ಮಹಿಳೆಯ ಮೃತದೇಹ ಪತ್ತೆಯಾಗಿದೆ. ಮಹಿಳೆಯ ಮೇಲೆ ಲೈಂಗಿಕ ದೌರ್ಜನ್ಯಾ ಎಸಗೆ ಕೊಲೆ ಮಾಡಿರುವ ಶಂಕೆ ವ್ಯಕ್ತವಾಗುತ್ತಿದೆ. ಮೂಲತಃ ಬಾಂಗ್ಲಾದೇಶದ ನಿವಾಸಿಯಾಗಿದ್ದ ನಮ್ಮ ಎನ್ನುವ ಮಹಿಳೆ, ಅಪಾರ್ಟೆಂಟ್ನಲ್ಲಿ ನಜ್ರಾ ಎನ್ನುವ ಮಹಿಳ ಕೆಲಸ ಮಾಡುತ್ತಿದ್ದಳು. ಈಕೆಗೆ ಮೂರು ಮಕ್ಕಳಿದ್ದು ಸದ್ಯ ಆಕೆಯ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದು ಅಲ್ಲದೆ ಭೀಕರವಾಗಿ ಕೊಲೆ ಮಾಡಿರುವ ಶಂಕೆ ವ್ಯಕ್ತವಾಗುತ್ತಿದೆ ಘಟನೆ ಸ್ಥಳಕ್ಕೆ ರಾಮಮೂರ್ತಿನಗರ ಠಾಣೆ ಪೊಲೀಸು ಭೇಟಿ ನೀಡಿದ್ದು ಪರಿಶೀಲನೆ ನಡೆಸುತ್ತಿದ್ದಾರೆ.

## ಜ.26 ರಂದು ಈ ಮಾರ್ಗಗಳಲ್ಲಿ ಸಂಚಾರ ನಿರ್ಬಂಧ!

• ಉದಯವಾಹಿನಿ, ಬೆಂಗಳೂರು

ಜನವರಿ 26ರಂದು ಗಣರಾಜ್ಯೋತ್ಸವ ಆಚರಣೆ ಹಿನ್ನೆಲೆಯಲ್ಲಿ ಬೆಂಗಳೂರಿನ ಈ ಕೆಳಗಿನ ಪ್ರಮುಖ ರಸ್ತೆಗಳಲ್ಲಿ ಸಂಚಾರ ನಿರ್ಬಂಧಿಸಿ ನಗರ ಸಂಚಾರಿ ಉಳಿಸಲು ಸೂಚನೆ ನೀಡಿದ್ದಾರೆ ಅಲ್ಲದೆ ಕೆಲವು ಪ್ರದೇಶಗಳಲ್ಲಿ ವಾಹನ ನಿಲುಗಡೆ ಕೂಡ ನಿಷೇಧಿಸಿದ್ದಾರೆ. 26ರಂದು ಬೆಂಗಳೂರಿನ ಕೆಲ ಮಾರ್ಗಗಳಲ್ಲಿ ಬದಲಾವಣೆ ಮಾಡಿದ್ದು, 26ರಂದು ಬೆಳಗ್ಗೆ 8:30 ರಿಂದ 10:30ರ ವರೆಗೆ ಸಂಚಾರ ನಿಷೇಧಿಸಲಾಗಿದೆ. ಕಬ್ಬನ್ ರಸ್ತೆ, ಕಾಮರಾಜ ರಸ್ತೆ, ಬಿ ಆರ್ ವಿ ರಸ್ತೆಯಲ್ಲಿ ಸಂಚಾರ ನಿರ್ಬಂಧಿಸಲಾಗಿದೆ. ಪರ್ಯಾಯ ರಸ್ತೆಗಳಲ್ಲಿ ಸಂಚರಿಸಲು ನಗರ ಸಂಚಾರ ಪೊಲೀಸರು ಸೂಚನೆ ನೀಡಿದ್ದಾರೆ. ಅದೇ ರೀತಿಯಾಗಿ ಬೆಂಗಳೂರಿನ ಹಲವಡೆ ವಾಹನ ನಿಲುಗಡೆಗೆ ನಿಷೇಧಿಸಿದ್ದಾರೆ. ಸೆಂಟ್ರಲ್ ಸ್ಟ್ರೀಟ್, ಕುಂಬ್ಳೆ ವೃತ್ತ, ಶಿವಾಜಿನಗರ ಬಸ್ ನಿಲ್ದಾಣ, ಕಬ್ಬನ್ ರಸ್ತೆ, ಸಿಡಿಓ ವೃತ್ತದಿಂದ ಕೆಆರ್ ರಸ್ತೆ, ಕಬ್ಬನ್ ಜಂಕ್ಷನ್ ಎಂ.ಜಿ ರಸ್ತೆ, ಅನಿಲ್ ಕುಂಬಳೆ ವೃತ್ತದ ವರೆಗೆ ಸಂಚಾರ ನಿಷೇಧಿಸಲಾಗಿದೆ.

## ಎಂ.ಬಿ ಪಾಟೀಲ್ ದಾವೋಸ್ ಸಮ್ಮೇಳನಕ್ಕೆ ಹೋಗಬೇಕು: ಮುರುಗೇಶ್ ನಿರಾಣಿ

• ಉದಯವಾಹಿನಿ, ಬೆಂಗಳೂರು

ಬೃಹತ್ ಕೈಗಾರಿಕೆ ಸಚಿವ ಎಂ.ಬಿ ಪಾಟೀಲ್ ದಾವೋಸ್ ಸಮ್ಮೇಳನಕ್ಕೆ ಹೋಗಬೇಕು ಎಂದು ಮಾಜಿ ಸಚಿವ ಮುರುಗೇಶ್ ನಿರಾಣಿ ಸಲಹೆ ನೀಡಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ಎಂ.ಬಿ ಪಾಟೀಲ್ ಅವರು ದಾವೋಸ್ ಸಮ್ಮೇಳನಕ್ಕೆ ಹೋಗಬೇಕು. ಅವರು ಹೋಗದೇ ಇರೋದು ಸರಿಯಲ್ಲ. ಇದರಿಂದ ನಮ್ಮ ರಾಜ್ಯಕ್ಕೆ ನಷ್ಟ ಆಗುತ್ತದೆ. ಕೈಗಾರಿಕೆ ಬಾರದೇ ಹೋದರೆ ಉದ್ಯೋಗ ಸೃಷ್ಟಿ ಆಗೋದಿಲ್ಲ. ಇದರಿಂದ ರಾಜ್ಯಕ್ಕೆ ಬಹಳ ನಷ್ಟ ಆಗಲಿದೆ ಎಂದು ಬೇಸರ ವ್ಯಕ್ತಪಡಿಸಿದ್ದಾರೆ. ಜಗತ್ತಿನ ದೊಡ್ಡ ದೊಡ್ಡ ಕೈಗಾರಿಕೆಗಳು ಅಲ್ಲಿಗೆ ಬಂದಿರುತ್ತವೆ. ಜಗತ್ತಿನಲ್ಲಿ ಯಾವುದೇ ಸಮ್ಮೇಳನ ನಡೆದರೂ ಹೋಗಿ ಕರ್ನಾಟಕದ ಬಗ್ಗೆ ಅಲ್ಲಿ ಮಾಹಿತಿ ಕೊಡಬೇಕು. ನಮ್ಮ ಸರ್ಕಾರ ಇದ್ದಾಗ ಕೈಗಾರಿಕೆ ಕ್ಷೇತ್ರದಲ್ಲಿ ಕರ್ನಾಟಕ ಟಾಪ್ 3ನೇ ಸ್ಥಾನದಲ್ಲಿ ಇತ್ತು. ಇವತ್ತು ರಾಜ್ಯ ಡಬಲ್ ಡಿಜಿಟ್‌ಗೆ ತಲುಪಿದೆ.

## ಬೆಂಗಳೂರು ವಿಮಾನ ನಿಲ್ದಾಣಕ್ಕೆ ಎಸಿಐನಿಂದ ಮಾನ್ಯತೆ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಕೆಂಪೇಗೌಡ ಅಂತಾರಷ್ಟ್ರೀಯ ವಿಮಾನ ನಿಲ್ದಾಣವು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಗಳ ಮಂಡಳಿ (ಎಸಿಐ) ನೀಡುವ ಪ್ರವೇಶ ವರ್ಧಕ ಮಾನ್ಯತೆ ಕಾರ್ಯಕ್ರಮದಡಿ 1ನೇ ಹಂತದ ಮಾನ್ಯತೆ ಪಡೆದಿದೆ. ಈ ಮೂಲಕ 1 ನೇ ಹಂತದ ಮಾನ್ಯತೆ ಪಡೆದ ದೇಶದ ಮೊದಲ ವಿಮಾನ ನಿಲ್ದಾಣ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ.

ಬೆಂಗಳೂರು ವಿಮಾನ ನಿಲ್ದಾಣದಲ್ಲಿ ವಿಶೇಷಚೇತನರು, ಹಿರಿಯ ನಾಗರಿಕರು ಸುಲಭವಾಗಿ ಸಂಚರಿಸಲು ಹಾಗೂ ಇತರ ಸೌಲಭ್ಯಗಳನ್ನು ಸರಳವಾಗಿ ಬಳಸಿಕೊಳ್ಳಲು ಸೂಕ್ತ ವ್ಯವಸ್ಥೆ ಕಲ್ಪಿಸಲಾಗಿದೆ. ವಿಶೇಷಚೇತನರು ಹಾಗೂ ಹಿರಿಯ ನಾಗರಿಕ ಪ್ರಯಾಣಿಕರ ಅಗತ್ಯತೆಗಳನ್ನು ಪೂರೈಸುವ ಉದ್ದೇಶದಿಂದ ವಿಮಾನ ನಿಲ್ದಾಣದಲ್ಲಿ ಅಗತ್ಯ ಸೌಕರ್ಯ ಒದಗಿಸುವ ಎಇಎ ಕಾರ್ಯಕ್ರಮವನ್ನು ಜಾರಿಗೊಳಿಸಲಾಗಿದೆ. ಇದು ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಎಇಎ ಮಾನ್ಯತೆ ಪಡೆಯಲು ಕಾರಣವಾಗಿದೆ.

ಮೂರು ಪ್ರಗತಿಶೀಲ ಹಂತಗಳನ್ನು ಒಳಗೊಂಡಿರುವ ಕಾರ್ಯಕ್ರಮವು, ವಿಮಾನ ನಿಲ್ದಾಣಗಳ ಕಾರ್ಯತಂತ್ರ, ನೀತಿ ನಿಯಮಗಳು ಮತ್ತು ಅವುಗಳಿಂದ ದೊರೆಯುವ ಫಲಿತಾಂಶಗಳನ್ನು ಮೌಲ್ಯಮಾಪನ ಮಾಡುತ್ತದೆ. ಪ್ರಯಾಣಿಕರು, ಸಂದರ್ಶಕರು ಮತ್ತು ಸಿಬ್ಬಂದಿ ಸೇರಿದಂತೆ ವಿಮಾನ ನಿಲ್ದಾಣದ ಎಲ್ಲಾ ಬಳಕೆದಾರರ ಪ್ರಯಾಣ ಅನುಭವದ ಅಭಿಪ್ರಾಯವನ್ನು ಆಧರಿಸಿ ಈ ಮಾನ್ಯತೆಯನ್ನು ನೀಡಲಾಗಿದೆ.

**1ನೇ ಹಂತದ ಮಾನ್ಯತೆ ಪಡೆದ ದೇಶದ ಏರ್ ಪೋರ್ಟ್!**

> ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸತ್ಯಕಿ ರಘುನಾಥ್, ಎಸಿಐನಿಂದ ಪ್ರವೇಶ ವರ್ಧಕ ಮಾನ್ಯತೆ ದೊರೆತಿರುವುದು ಬೆಂಗಳೂರು ವಿಮಾನ ನಿಲ್ದಾಣದಲ್ಲಿ ಪ್ರತಿಯೊಬ್ಬರಿಗೂ ಸೂಕ್ತ ಸೌಲಭ್ಯ ಒದಗಿಸಲಾಗುತ್ತದೆ ಎಂಬುದನ್ನು ಪ್ರತಿಬಿಂಬಿಸುತ್ತದೆ. ಎಲ್ಲಾ ಟರ್ಮಿನಲ್‌ಗಳಲ್ಲಿ ನಮ್ಮ ಸಿಬ್ಬಂದಿಯನ್ನು ಸಬಲೀಕರಣಗೊಳಿಸಲು ಮತ್ತು ವಿಮಾನ ನಿಲ್ದಾಣದಲ್ಲಿನ ಇತರ ಸಂಸ್ಥೆಗಳ ಜತೆ ನಿರಂತರ ಸಹಯೋಗ ಸಾಧಿಸಲು ಕೆಲವು ವರ್ಷಗಳಿಂದ ಹಲವಾರು ಉಪಕ್ರಮಗಳನ್ನು ಪರಿಚಯಿಸಿದ್ದೇವೆ. ವಿಮಾನ ನಿಲ್ದಾಣಕ್ಕೆ ಪ್ರತಿಯೊಬ್ಬರನ್ನೂ ಆತ್ಮೀಯವಾಗಿ ಸತ್ಕರಿಸುವ ನಮ್ಮ ಪ್ರಯತ್ನ ನಿರಂತರವಾಗಿ ಮುಂದುವರಿಯಲಿದೆ ಎಂದರು.

## ಮಾಣಿಕ್ ಷಾ ಪರೇಡ್ ಮೈದಾನ ಸುತ್ತಲು ಬಿಗಿ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ

• ಉದಯವಾಹಿನಿ, ಬೆಂಗಳೂರು



ಗಣರಾಜ್ಯೋತ್ಸವದ ಅಂಗವಾಗಿ ಜನವರಿ 26ರಂದು ಕರ್ನಾಟಕ ರಾಜ್ಯಪಾಲ ಥಾವರ್ ಚಂದ್ ಗೆಹ್ಲೊಟ್ ಅವರು ಧ್ವಜಾರೋಹಣ ನೆರವೇರಿಸಲಿದ್ದಾರೆ. ಹಾಗಾಗಿ ಬೆಂಗಳೂರಿನ ಮಾಣಿಕ್ ಷಾ ಪರೇಡ್ ಮೈದಾನ ಸುತ್ತಲು ಬಿಗಿ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿದ್ದು ಅಧಿಕಾರಿಗಳ ಜೊತೆಗೆ ಪೊಲೀಸ್ ಸಿಬ್ಬಂದಿಗಳನ್ನು ನಿಯೋಜನೆ ಮಾಡಲಾಗಿದ್ದು ಈಗಾಗಲೇ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಬೆಂಗಳೂರಿನ ಕಮಿಷನರ್ ಬಿ ದಯಾನಂದ್ ಮಾಹಿತಿ ನೀಡಿದರು. ಬೆಂಗಳೂರಲ್ಲಿ ಈ ಕುರಿತು ಮಾತನಾಡಿದ ಅವರು, 26 ಜನವರಿ ಗಣರಾಜ್ಯೋತ್ಸವಕ್ಕೆ ಸಕಲ ಸಿದ್ಧತೆ ಮಾಡಿಕೊಂಡಿದ್ದು, ಬೆಳಿಗ್ಗೆ 9 ಗಂಟೆಗೆ ರಾಜ್ಯಪಾಲರಿಂದ ಧ್ವಜಾರೋಹಣ ನಡೆಯಲಿದ್ದು ಯಾವುದೇ ಸಮಸ್ಯೆಯಾಗದಂತೆ ರಾಜೋತ್ಸವ ಆಚರಣೆಗೆ ಸಿದ್ಧತೆ ಮಾಡಿಕೊಳ್ಳಲಾಗಿದೆ. ನಗರದ ಎಲ್ಲಾ ವಿಭಾಗಗಳಿಂದ ಪೊಲೀಸ್ ಭದ್ರತೆ 2.8??, 74, 442, 114 22, 185 ಎಎಸ್ಐ, 80 ಮಹಿಳಾ ಸಿಬ್ಬಂದಿ 30 ಕ್ಯಾಮರಾ ಸಿಬ್ಬಂದಿಗಳನ್ನು ನಿಯೋಜನೆ ಮಾಡಲಾಗಿದೆ.10 ಕೆ.ಎಸ್.ಆರ್.ಪಿ ತುಕಡಿ 2 ಅಗ್ನಿಶಾಮಕ ವಾಹನ, ಕ್ಷಿಪ್ರಕಾರ್ಯ ಪಡೆ, ಭದ್ರತೆಗಾಗಿ ಒಟ್ಟು 1,051 ಅಧಿಕಾರಿಗಳು ಹಾಗೂ ಸಿಬ್ಬಂದಿಗಳನ್ನು ನಿಯೋಜನೆ ಮಾಡಲಾಗಿದೆ. ಮೈದಾನದ ಸುತ್ತಮುತ್ತ 103 ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಕೆ ಮಾಡಲಾಗಿದೆ. ಕಲರ್ ಕೋಡ್ ಮೂಲಕ ಪಾಸ್ ವಿತರಿಸಿ ಪ್ರವೇಶಕ್ಕೆ ಅವಕಾಶ ಕಲ್ಪಿಸಲಾಗಿದೆ. ಕಾರ್ಯಕ್ರಮಕ್ಕೆ ಆಗಮಿಸುವ ವರಿಗೆ ಪಿಂಕ್ ಬಣ್ಣದ ಪಾಸ್ ವಿತರಣೆ ಮಾಡಲಾಗುತ್ತದೆ. ಕಾರ್ಯಕ್ರಮಕ್ಕೆ ಬರುವ ಸಾರ್ವಜನಿಕರಿಗೆ ವಿಐಪಿ ಗೇಟ್ 2ರಲ್ಲಿ ಪ್ರವೇಶಕ್ಕೆ ಅವಕಾಶ ಕಲ್ಪಿಸಲಾಗಿದೆ. ಪಿಂಕ್ ಬಣ್ಣದ ಸೇರುವವರಿಗೆ ವಿಐಪಿ ಗೇಟ್ 2ರಲ್ಲಿ ಪ್ರವೇಶ ಕಲ್ಪಿಸಲಾಗುತ್ತದೆ. ಮುಖ್ಯ ಅತಿಥಿ ಗಣ್ಯರಿಗೆ ಗೇಟ್ 3ರಲ್ಲಿ ಪ್ರವೇಶಕ್ಕೆ ಅವಕಾಶ ಮಾಡಿಕೊಡಲಾಗುತ್ತೆ ವೈಟ್ ಪಾಸ್ ಮಾಧ್ಯಮ ಪ್ರತಿನಿಧಿಗಳಿಗೆ ಗೇಟ್ 4ರಲ್ಲಿ ಪ್ರವೇಶ ಕಲ್ಪಿಸಲಾಗಿದೆ ಎಂದು ಬೆಂಗಳೂರು ಪೊಲೀಸ್ ಕಮಿಷನರ್ ದಯಾನಂದ್ ಹೇಳಿಕೆ ನೀಡಿದರು.

## ಗರುಡಾಕ್ಷಿ ವ್ಯವಸ್ಥೆ ಶುರುವಾದ 2 ವಾರದಲ್ಲೇ 40 ಎಫ್ಐಆರ್ ದಾಖಲು

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಅರಣ್ಯ ಇಲಾಖೆ ವ್ಯಾಪ್ತಿಯಲ್ಲಿನ ಅಪರಾಧಗಳ ಕುರಿತ ದೂರು ದಾಖಲಿಸುವಿಕೆ, ಮೇಲ್ವಿಚಾರಣೆಯಂತಹ ಕಾರ್ಯ ಚಟುವಟಿಕೆಗಳ ಸರಳೀಕರಣಕ್ಕೆ ಸರ್ಕಾರ 'ಗರುಡಾಕ್ಷಿ' ತಂತ್ರಾಂಶ ಜಾರಿಗೆ ತಂದಿದೆ. ಈ ತಂತ್ರಾಂಶ ಜಾರಿಗೆ ತಂದು ಕೇವಲ 15 ದಿನಗಳಲ್ಲಿ ಸಾರ್ವಜನಿಕರಿಂದ ವ್ಯಾಪಕ ಸ್ಪಂದನೆ ವ್ಯಕ್ತವಾಗಿದೆ. ಅರಣ್ಯ ಪೊಲೀಸರಿಗೂ ಈ ತಂತ್ರಾಂಶದಿಂದ ಹೆಚ್ಚು ಸಹಾಯವಾಗುತ್ತಿದೆ. ಅರಣ್ಯ ಸಚಿವ ಈಶ್ವರ ಖಂಡ್ರೆ ಅವರು ಅರಣ್ಯ ಇಲಾಖೆಗೆ ಮಹತ್ವದ 'ಗರುಡಾಕ್ಷಿ' ತಂತ್ರಾಂಶವನ್ನು ಜನವರಿ 08ರಂದು ಲೋಕಾರ್ಪಣೆ ಮಾಡಿದ್ದಾರೆ. ಅಲ್ಲಿಂದ ಈವರೆಗೆ ಅರಣ್ಯ ಇಲಾಖೆ, ವನ್ಯಜೀವಿಗಳ ರಕ್ಷಣೆ ಇನ್ನಿತರ ಅಪರಾಧ ಪ್ರಕರಣಗಳಿಗೆ ಕುರಿತಂತೆ ಒಟ್ಟು 40ಕ್ಕೂ ಹೆಚ್ಚು ಪ್ರಕರಣಗಳು ದಾಖಲಾಗಿವೆ ಎಂದು ಇಲಾಖೆ ಮೂಲಗಳು ತಿಳಿಸಿವೆ. ಇದೊಂದು ಎಫ್ಐಆರ್ ವ್ಯವಸ್ಥೆಯೂ ಆಗಿದ್ದು, ಇಲಾಖೆಯಡಿ ದಾಖಲಾಗುವ ದೂರುಗಳ ಸರಳೀಕರಣಗೊಳಿಸಲು, ಅದನ್ನು ಸೂಕ್ತವಾಗಿ ಮೇಲ್ವಿಚಾರಣೆ ಮಾಡಲು ಈ ವ್ಯವಸ್ಥೆ ಹೆಚ್ಚು ಸಹಕಾರಿಯಾಗುತ್ತದೆ. ಎಫ್ಐಆರ್ ಅನ್ನು ಡಿಜಿಟಲೀಕರಣಗೊಳಿಸಲು ಜಾಲತಾಣ ಅನುಷ್ಠಾನಕ್ಕೆ ತರಲಾಗಿದೆ. ಅರಣ್ಯ ಇಲಾಖೆ ಸಿಬ್ಬಂದಿಯು ಈ ವ್ಯವಸ್ಥೆ ಬಳಕೆಗೆ ಬಂದ ಮೇಲೆ ಅರಣ್ಯ ಮತ್ತು ವನ್ಯಜೀವಿ ಕಾನೂನುಗಳಡಿ ಅರಣ್ಯ ಅಪರಾಧ ಪ್ರಕರಣಗಳನ್ನು ಮತ್ತಷ್ಟು ಪರಿಣಾಮಕಾರಿಯಾಗಿ ನಿರ್ವಹಿಸಲು, ಸೂಕ್ತ ಮೇಲ್ವಿಚಾರಣೆ ಮಾಡುತ್ತಿದ್ದಾರೆ. ಈಗಾಗಲೇ ಇಂತಹ ವ್ಯವಸ್ಥೆ ರಾಜ್ಯ ಪೊಲೀಸ್ ಇಲಾಖೆಯಲ್ಲಿದೆ. ಅದೇ ಮಾದರಿಯನ್ನು ಈಗ ಈ ಇಲಾಖೆಯಲ್ಲೂ ಅಳವಡಿಸಲಾಗಿದೆ. ಐದು ಕಡೆ ಮಾತ್ರವೇ 'ಗರುಡಾಕ್ಷಿ' ಆರಂಭ ಜಾರಿಗೆ ತಂದಿಲ್ಲ. ಬದಲಾಗಿ ಪ್ರಾಯೋಗಿಕ ಹಂತವೆಂಬಂತೆ ಐದು ಕಡೆಗಳಲ್ಲಿ 'ಬೆಂಗಳೂರು ನಗರ ವಿಭಾಗ, ಬೆಂಗಳೂರು ಅರಣ್ಯ ಸಂಚಾರಿ ಸದ್ಯ ಈ ವ್ಯವಸ್ಥೆಯನ್ನು ರಾಜ್ಯ ಅರಣ್ಯ ಇಲಾಖೆಯ ಎಲ್ಲಾ ವಿಭಾಗಗಳಲ್ಲಿ ದಳ ವಿಭಾಗ', ಭದ್ರಾವತಿ ವಿಭಾಗ, ಮಲೆಮಹದೇಶ್ವರ ಬೆಟ್ಟ ವನ್ಯಜೀವಿ ವಿಭಾಗ ಶಿರಸಿ ವಿಭಾಗದಲ್ಲಿ ಮಾತ್ರವೇ ತಂತ್ರಾಂಶ ಸೇವೆ ಆರಂಭಿಸಲಾಗಿದೆ. ಸಾರ್ವಜನಿಕರು ನಿಮ್ಮ ಹತ್ತಿರದ ಅರಣ್ಯ ವ್ಯಾಪ್ತಿಯಲ್ಲಿ ಅತಿಕ್ರಮ, ವನ್ಯಜೀವಿಗಳಿಗೆ ತೊಂದರೆ, ವನ್ಯಜೀವಿ ಭೇಟಿ (ಕಳ್ಳಭೇಟೆ), ಅಕ್ರಮ ಮರ ಕಡಿತ ಸೇರಿದಂತೆ ವಿವಿಧ ಅಪರಾಧ ಚಟುವಟಿಕೆಗಳ ವಿರುದ್ಧ ಆನ್‌ಲೈನ್‌ನಲ್ಲಿ ದೂರು ನೀಡಲು ಮತ್ತು ದೂರು ದಾಖಲಿಸಬಹುದಾಗಿದೆ. ಇಂತಹ ಪ್ರಕರಣಗಳಿಗೆ ಸಂಬಂಧಿಸಿದಂತೆ ಕಳೆದ ಎರಡೇ ವಾರದಲ್ಲಿ 40ಕ್ಕೂ ಅಧಿಕ ಪ್ರಕರಣ ದಾಖಲಾಗಿವೆ ಎಂದು ಅರಣ್ಯ ಇಲಾಖೆ ಸಿಬ್ಬಂದಿ ಮಾಹಿತಿ ನೀಡಿದರು.

## ರಾಜ್ಯ ಸರ್ಕಾರದ ಮಸೂದೆಗಳನ್ನು ವಾಪಸ್ ಕಳುಹಿಸಿದ ರಾಜ್ಯಪಾಲರು

• ಉದಯವಾಹಿನಿ, ಬೆಂಗಳೂರು



ಕಳೆದ ಬೆಳಗಾವಿ ಅಧಿವೇಶನದಲ್ಲಿ ರಾಜ್ಯಪಾಲರ ಅಂಗೀಕಾರಕ್ಕೆ ರಾಜ್ಯ ಸರ್ಕಾರ ಹಲವು ಮಸೂದೆಗಳನ್ನು ಕಳುಹಿಸಿಕೊಡಲಾಗಿತ್ತು ಆದರೆ ರಾಜ್ಯಪಾಲರು ಮಸೂದೆಗಳನ್ನು ಅಂಗೀಕಾರ ಹಾಕದೆ ವಾಪಸ್ ಕಳಿಸಿದ್ದಾರೆ ಇದೀಗ ರಾಜಪಾಲರ ನಡೆಗೆ ರಾಜ ಸರ್ಕಾರ ತೀವ್ರವಾಗಿ ಖಂಡಿಸಿದ್ದು ಕಾನೂನು ಹೋರಾಟಕ್ಕೆ ಚಿಂತನೆ ನಡೆಸಿದೆ. ಹೌದು ರಾಜ್ಯಪಾಲರು ನಡೆಯಿಂದ ರಾಜ್ಯ ಸರ್ಕಾರ ಆಕ್ರೋಶಗೊಂಡಿದ್ದು ರಾಜ್ಯಪಾಲರು ವಿರುದ್ಧ ಕಾನೂನು ಹೋರಾಟಕ್ಕೆ ಇದೀಗ ಚಿಂತನೆ ನಡೆಸುತ್ತಿದೆ. ರಾಜ್ಯಪಾಲರು ಮತ್ತು ಸರ್ಕಾರದ ನಡುವೆ ಸಂಘರ್ಷ ಮುಂದುವರೆದಿದ್ದು, ಮಸೂದೆಗಳನ್ನು ರಾಜ್ಯಪಾಲರು ವಾಪಸ್ ಕಳುಹಿಸುತ್ತಿದ್ದಾರೆ. ರಾಜಪಾಲರಿಂದ ರಾಜ್ಯ ಮಸೂದೆಗಳು ಇದೀಗ ವಾಪಸ್ ಕಳುಹಿಸಿದ್ದಾರೆ. ಸರ್ಕಾರದ ನಾಲ್ಕು ಮಸೂದೆಗಳನ್ನು ರಾಜ್ಯಪಾಲರು ಇದೀಗ ವಾಪಸ್ ಕಳುಹಿಸಿದ್ದಾರೆ. ಅಲ್ಲದೇ ಇನ್ನು ನಾಲ್ಕು ಮಸೂದೆ ಅಂಗೀಕರಿಸಲು ರಾಜಪಾಲರು ಬಾಕಿ ಉಳಿಸಿಕೊಂಡಿದ್ದಾರೆ ಬೆಳಗಾವಿ ಅಧಿವೇಶನದಲ್ಲಿ ನಾಲ್ಕು ವಿಧೇಯಕ ಅಂಗೀಕಾರಗೊಂಡಿತ್ತು. ಆದರೆ ರಾಜ್ಯಪಾಲರು ನಾಲ್ಕು ವಿಧೇಯಕಗಳಿಗೆ ಅಂಗೀಕಾರ ಹಾಕದೆ ವಾಪಸ್ ಕಳುಹಿಸಿದ್ದಾರೆ. ಹಾಗಾಗಿ ಇದೀಗ ಗವರ್ನರ್ ವಿರುದ್ಧ ರಾಜ್ಯ ಸರ್ಕಾರ ಆಕ್ರೋಶ ಹೊರಹಾಕಿದ್ದು ಕಾನೂನು ಹೋರಾಟಕ್ಕೆ ಚಿಂತನೆ ನಡೆಸುತ್ತಿದೆ.

ರಾಜ್ಯಪಾಲರಿಂದ ವಾಪಸ್ ಕಳುಹಿಸಿದ ಮಸೂದೆಗಳು

1) ಕರ್ನಾಟಕ ಮಿನರಲ್ಸ್ ಹಕ್ಕು ಮತ್ತು ಬೇರಿಂಗ್ ಲ್ಯಾಂಡ್ ಟ್ಯಾಕ್ಸ್ 2024

2) ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಮುಜರಾಯಿ ವಿಧೇಯಕ 2024

3) ಕರ್ನಾಟಕ ಸಹಕಾರಿ ಸಹಿತಿಗಳ ತಿದ್ದುಪಡಿ ವಿಧೇಯಕ 2024 ಗದಗ ಬೆಟಗೇರಿ ವ್ಯಾಪಾರ ಸಂಸ್ಕೃತಿ ಮತ್ತು ವಸ್ತು ಪ್ರದರ್ಶನ ಪ್ರಾಧಿಕಾರ ವಿಧೇಯಕ 2024 ಈ ನಾಲ್ಕು ವಿಧೇಯಕಗಳನ್ನು ಅಂಗೀಕರಿಸಿದೆ ವಾಪಸ್ ಕಳಿಸಿದ್ದಾರೆ ಎಂದು ತಿಳಿದುಬಂದಿದೆ. ಹಾಗಾಗಿ ಇದೀಗ ರಾಜ್ಯ ಸರ್ಕಾರ ರಾಜ್ಯಪಾಲರ ಈ ನಡೆಯಿಂದ ಆಕ್ರೋಶಗೊಂಡಿದ್ದು ಕಾನೂನಿನ ಮೂಲಕ ಹೋರಾಟ ನಡೆಸಲು ಚಿಂತನೆ ನಡೆಸುತ್ತಿದೆ ಎಂದು ಬಲ್ಲ ಮೂಲಗಳಿಂದ ತಿಳಿದು ಬಂದಿದೆ.

## ಹೆಣ್ಣುಮಕ್ಕಳ ಸಮಾನತೆ, ಘನತೆಯ ಬದುಕಿನ ಕನಸನ್ನು ನನಸಾಗಿಸೋಣ

• ಉದಯವಾಹಿನಿ, ಬೆಂಗಳೂರು

ಅಂತರಾಷ್ಟ್ರೀಯ ಹೆಣ್ಣು ಮಕ್ಕಳ ದಿನಾಚರಣೆಯ ಅಂಗವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಟೀಟ್ ಮುಖಾಂತರ ನಾಡಿನ ಸಮಸ್ತ ಹೆಣ್ಣು ಮಕ್ಕಳಿಗೆ ರಾಷ್ಟ್ರೀಯ ಹೆಣ್ಣುಮಕ್ಕಳ ದಿನಾಚರಣೆಯ ಶುಭಾಶಯ ಕೋರಿದ್ದಾರೆ. ಟ್ವೀಟ್ ನಲ್ಲಿ ಅಡುಗೆ ಮನೆಯಿಂದ ಅಂತರಿಕ್ಷದವರೆಗೆ ಹೆಣ್ಣು ಮಕ್ಕಳು ಪ್ರವೇಶ ಮಾಡದೆ ಇರುವ ಕ್ಷೇತ್ರಗಳಿಲ್ಲ, ಸಾಧಿಸದ ಗುರಿಯಿಲ್ಲ, ಏರದ ಎತ್ತರವಿಲ್ಲ. ತಾಯಿ, ಅಕ್ಕ-ತಂಗಿ, ಹೆಂಡತಿಯಾಗಿ ಹೀಗೆ ಪುರುಷನ ಬದುಕಿನ ಪ್ರತಿ ಹಂತದಲ್ಲೂ ಕಷ್ಟ- ಸುಖಗಳಿಗೆ, ನೋವು - ನಲಿವುಗಳಿಗೆ ಹೆಗಲಾಗಿ ನಿಲ್ಲುವ ಹೆಣ್ಣುಮಕ್ಕಳು ನಿಸರ್ಗದ ಅದ್ಭುತ ಸೃಷ್ಟಿ. ಆಧುನಿಕ ಯುಗದಲ್ಲಿ ಹೆಣ್ಣುಮಕ್ಕಳು ಎದುರಿಸುತ್ತಿರುವ ಲಿಂಗಾಧಾರಿತ ಅಸಮಾನತೆ, ಅವಕಾಶಗಳಲ್ಲಿ ತಾರತಮ್ಯದಂತಹ ಅಡ-ತಡೆ, ಅಡ್ಡಿ- ಆತಂಕಗಳ ವಿರುದ್ಧದ ಹೋರಾಟಕ್ಕೆ ನಾವು, ನೀವೆಲ್ಲರೂ ಬೆಂಬಲವಾಗಿ ನಿಂತು, ಹೆಣ್ಣುಮಕ್ಕಳ ಸಮಾನತೆ ಹಾಗೂ ಘನತೆಯ ಬದುಕಿನ ಕನಸನ್ನು ನನಸಾಗಿಸೋಣ.

# ಮುನಿರತ್ನ ಮೇಲೆ ಮೊಟ್ಟೆ ಎಸೆದವರು ಕಾಂಗ್ರೆಸ್‌ನವರಲ್ಲ

## ಮುನಿರತ್ನ ಅವರಿಂದ ಕ್ಷೇತ್ರಕ್ಕೆ ಅವಮಾನವಾಗಿದೆ ಎಂಬ ಕಾರಣಕ್ಕೆ ಆಕ್ರೋಶಗೊಂಡು ಆರೋಪಿಗಳು ಮೊಟ್ಟೆ ದಾಳಿ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ರಾಜರಾಜೇಶ್ವರಿನಗರ ಬಿಜೆಪಿ ಶಾಸಕ ಮುನಿರತ್ನ ಮೇಲೆ ಮೊಟ್ಟೆ ಎಸೆತ ಪ್ರಕರಣದಲ್ಲಿ ಬಂಧಿತರಾಗಿದ್ದ ಆರೋಪಿಗಳು ಕಾಂಗ್ರೆಸ್ ಕಾರ್ಯಕರ್ತರಲ್ಲ, ಬದಲಿಗೆ ಬಿಜೆಪಿ ಪಕ್ಷದ ಬೆಂಬಲಿಗರು. ಮುನಿರತ್ನ ಅವರಿಂದ ಕ್ಷೇತ್ರಕ್ಕೆ ಅವಮಾನವಾಗಿದೆ ಎಂಬ ಕಾರಣಕ್ಕೆ ಆಕ್ರೋಶಗೊಂಡು ಆರೋಪಿಗಳು ಮೊಟ್ಟೆ ದಾಳಿ ನಡೆಸಿದ್ದ ಸಂಗತಿ ಪೊಲೀಸರ ತನಿಖೆಯಲ್ಲಿ ಬಯಲಾಗಿದೆ.

2024ರ ಡಿಸೆಂಬರ್ 25ರಂದು ಲಕ್ಷ್ಮೀದೇವಿ ನಗರದಲ್ಲಿ ಆಯೋಜನೆಯಾಗಿದ್ದ ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಜನ್ಮ ಶತಮಾನೋತ್ಸವ ಕಾರ್ಯಕ್ರಮದಲ್ಲಿ ಭಾಗಿಯಾಗಿ ಹಿಂದಿರುಗುತ್ತಿದ್ದಾಗ ಶಾಸಕ ಮುನಿರತ್ನರ ಮೇಲೆ ಮೊಟ್ಟೆ ದಾಳಿ ನಡೆದಿತ್ತು. ಈ ಸಂಬಂಧ ನಂದಿನಿ ಲೇಔಟ್ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಮೂವರನ್ನು ಬಂಧಿಸಿ ಸಮಗ್ರ ತನಿಖೆ ನಡೆಸಿದ್ದು, ಆರೋಪಿಗಳು ಬಿಜೆಪಿ ಬೆಂಬಲಿಗರೆಂಬ ಸಂಗತಿ ದೃಢಪಟ್ಟಿತ್ತು.ಮೊಟ್ಟೆ ಎಸೆತ ಪ್ರಕರಣ ಸಂಬಂಧ ಎಲ್ಲಾ ಆಯಾಮದಲ್ಲೂ ತನಿಖೆ ನಡೆಸಲಾಗಿದೆ. ಶಾಸಕ ಮುನಿರತ್ನ ಅವರಿಂದ ರಾಜರಾಜೇಶ್ವರಿನಗರ ಕ್ಷೇತ್ರಕ್ಕೆ ಅವಮಾನವಾಗಿದೆ ಎಂದು ಅಸಮಾಧಾನಗೊಂಡು ಆರೋಪಿಗಳು ಮೊಟ್ಟೆ ದಾಳಿ ನಡೆಸಿದ್ದರು. ಈ ಕೃತ್ಯದ ಹಿಂದೆ ರಾಜಕೀಯ ಪ್ರಭಾವಿಗಳ ಕೈವಾಡವಿಲ್ಲ ಎಂಬ ಸಂಗತಿ ತನಿಖೆಯಲ್ಲಿ ದೃಢಪಟ್ಟಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಗಳು ಹೇಳಿದ್ದಾರೆ.

ಪ್ರಕರಣ ಸಂಬಂಧ ವಿಶ್ವಮೂರ್ತಿ, ವಿಶ್ವಕಿರಣ್ ಮತ್ತು ಅಶೋಕ್ ಕುಮಾರ್ ಎಂಬುವವರನ್ನು ಬಂಧಿಸಲಾಗಿತ್ತು. ಈ ಮೂವರು ಕಾಂಗ್ರೆಸ್ ಕಾರ್ಯಕರ್ತರಾಗದೆ ಪಕ್ಷದ ಬೆಂಬಲಿಗರಾಗಿ ಗುರುತಿಸಿಕೊಂಡಿದ್ದ ಸಂಗತಿ ತನಿಖೆಯಲ್ಲಿ ಗೊತ್ತಾಗಿದೆ. ಅತ್ಯಾಚಾರ, ಜೀವ ಬೆದರಿಕೆ ಹಾಗೂ ಜಾತಿ ನಿಂದನೆ ಪ್ರಕರಣದಲ್ಲಿ ಮುನಿರತ್ನ ಅವರ ಬಂಧನವಾದ ಬಳಿಕ ಆರೋಪಿಗಳು ಶಾಸಕರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದರು. ಶಾಸಕರ ದುರ್ನಡತೆಯಿಂದ ಕ್ಷೇತ್ರದ ಮತದಾರರಿಗೆ ಅವಮಾನವಾಗಿದೆ ಎಂದು ಭಾವಿಸಿ ಆರೋಪಿಗಳು ಮೊಟ್ಟೆ ದಾಳಿ ನಡೆಸಿದ್ದರು ಎಂದು ಪೊಲೀಸ್ ಮೂಲಗಳು ಹೇಳಿವೆ.

ಸಂಚು ರೂಪಿಸಿ ದಾಳಿ: ಮುನಿರತ್ನ ಅವರು ಜಾಮೀನಿನ ಮೇಲೆ ಬಿಡುಗಡೆಯಾದ ಬಳಿಕ ಆರೋಪಿಗಳು ಗುಂಪು ಕಟ್ಟಿಕೊಂಡು ಶಾಸಕರ ವಿರುದ್ಧ ಪ್ರತಿಭಟನೆ ಸಹ ಮಾಡಿದ್ದರು. ಮುನ್ನೆಚ್ಚರಿಕೆ ಕ್ರಮವಾಗಿ ಆ ಮೂವರನ್ನು ಎರಡು ಬಾರಿ ವಶಕ್ಕೆ ಪಡೆದು ಎಚ್ಚರಿಕೆ ನೀಡಿ ಕಳುಹಿಸಲಾಗಿತ್ತು. ಡಿ.25ರಂದು ಮುನಿರತ್ನ ಅವರು ಲಕ್ಷ್ಮೀದೇವಿನಗರದ ಕಾರ್ಯಕ್ರಮಕ್ಕೆ ಬರುವ ಸಂಗತಿ ತಿಳಿದು ಸಂಚು ರೂಪಿಸಿ ಮೊಟ್ಟೆ ದಾಳಿ ನಡೆಸಿದ್ದರು. ಲಕ್ಷ್ಮೀದೇವಿ ನಗರದ ಅಂಗಡಿಯಲ್ಲಿ ಮೊಟ್ಟೆ ಖರೀದಿಸಿ ಮುನಿರತ್ನ ಅವರು ಬರುತ್ತಿದ್ದಂತೆ ಏಕಾಏಕಿ ದಾಳಿ ನಡೆಸಿದ್ದರು.

**ಪೊಲೀಸ್ ತನಿಖೆಯಲ್ಲಿ ಸ್ಫೋಟಕ ಸಂಗತಿ ಬಯಲು!**

### ಮೊಟ್ಟೆಯಲ್ಲಿ ಆಯಸಿಡ್ ಇರಲಿಲ್ಲ

**ಮೊಟ್ಟೆ ದಾಳಿಗೆ ಬೇರೆ ಪಕ್ಷಗಳ ರಾಜಕೀಯ ನಾಯಕರು ಕುಮ್ಮಕ್ಕು ನೀಡದಿರುವುದು ಆರೋಪಿತರ ವಿಚಾರಣೆಯಿಂದ ಗೊತ್ತಾಗಿದೆ. ದಾಳಿಗೆ ಬಳಸಿದ್ದ ಮೊಟ್ಟೆಯಲ್ಲಿ ಮುನಿರತ್ನ ಅವರು ಆರೋಪಿಸಿದಂತೆ ಆ್ಯಸಿಡ್ ಇರಲಿಲ್ಲ ಎಂದು ಎಫ್ಎಸ್ಎಲ್ ಪರೀಕ್ಷೆಯಿಂದ ದೃಢಪಟ್ಟಿದೆ. ಎಫ್ಎಸ್ಎಲ್ ವರದಿ ಕೈಸೇರಿದ ಬಳಿಕ ನ್ಯಾಯಾಲಯಕ್ಕೆ ಆರೋಪಪಟ್ಟಿ ಸಲ್ಲಿಸುತ್ತೇವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.**

### ಕ್ಷೇತ್ರದ ಮತದಾರರಿಗೆ ಅವಮಾನ

**ತಮ್ಮ ಮೇಲೆ ಆ್ಯಸಿಡ್ ಮಿಶ್ರಿತ ಮೊಟ್ಟೆಯ ದಾಳಿ ಮಾಡಿದ್ದು, ತಲೆಗೆ ತೀವ್ರ ಪೆಟ್ಟು ಬಿದ್ದು ಉರಿ ಊತ ಕಾಣಿಸಿಕೊಂಡಿದೆ. ಒಳ ಸಂಚು ರೂಪಿಸಿ ತಮ್ಮನ್ನು ಕೊಲೆ ಮಾಡುವ ಉದ್ದೇಶದ ಭಾಗವಾಗಿ ಮೊಟ್ಟೆ ದಾಳಿ ನಡೆಸಲಾಗಿದೆ. ಆ್ಯಸಿಡ್ ದಾಳಿಯಿಂದ ನೋವಾಗಿ ಕೈಯಿಂದ ಉಜ್ಜಿದಾಗ ಕೂದಲು ಸಹ ಕಿತ್ತು ಬಂದಿದೆ. 100ರಿಂದ 150 ಜನರ ಗುಂಪು ತಮ್ಮ ಮೇಲೆ ದಾಳಿ ಮಾಡಿದ್ದು, ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಮುನಿರತ್ನ ದೂರು ಕೊಟ್ಟಿದ್ದರು. ದೂರಿನಲ್ಲಿ ಮಾಜಿ ಸಂಸದ ಡಿಕೆ ಸುರೇಶ್ ಮತ್ತು ಕಾಂಗ್ರೆಸ್ ಮುಖಂಡೆ ಕುಸುಮಾ ಅವರ ಹೆಸರನ್ನೂ ಪ್ರಸ್ತಾಪಿಸಿದ್ದರು.**

# ಮಂಡ್ಯದಲ್ಲಿ ಇಂದಿನಿಂದ 5 ದಿನ ಫಲಪುಷ್ಪ ಪ್ರದರ್ಶನ

## ಫಲಪುಷ್ಪ ಪ್ರದರ್ಶನ ಹಾಗೂ ಮಧುರ ವಸ್ತ್ರೋತ್ಸವಕ್ಕೆ ಸಚಿವ ಎನ್.ಚಲುವರಾಯಸ್ವಾಮಿ ಅವರು ಚಾಲನೆ

• **ಉದಯವಾಹಿನಿ, ಮಂಡ್ಯ**

ಸಕ್ಕರೆ ನಾಡಿನಲ್ಲಿ ಐದು ದಿನಗಳ ಕಾಲ ನಡೆಯುವ ಫಲಪುಷ್ಪ ಪ್ರದರ್ಶನ ಹಾಗೂ ಮಧುರ ವಸ್ತ್ರೋತ್ಸವಕ್ಕೆ ಸಚಿವ ಎನ್. ಚಲುವರಾಯಸ್ವಾಮಿ ಅವರು ಚಾಲನೆ ನೀಡಿದರು.ಜಿಲ್ಲಾಧಿಕಾರಿ ಕಚೇರಿ ಮುಂಭಾಗದ ಉದ್ಯಾನವನದಲ್ಲಿ ಫಲಪುಷ್ಪ ಪ್ರದರ್ಶನ ನಡೆಯುತ್ತಿದೆ. ಉದ್ಯಾನವನದಲ್ಲಿ ಆಕರ್ಷಕ ಬಣ್ಣದ ನಾನಾ ಜಾತಿಯ ಹೂಗಳಿಂದ ಹಲವಾರು ಕಲಾಕೃತಿಗಳು ಅರಳಿ ನಿಂತಿದ್ದು, ಜನರನ್ನು ಕೈಬೀಸಿ ಕರೆಯುತ್ತಿದೆ. ಆಕರ್ಷಕ ಸೆಲ್ಫಿ ಪಾಯಿಂಟ್‌ಗಳಲ್ಲಿ ಪುಷ್ಪ ಪ್ರಿಯರು ಸೆಲ್ಫಿ ಕ್ಲಿಕ್ಕಿಸಿಕೊಳ್ಳಲು ಮುಗಿಬೀಳುತ್ತಿದ್ದಾರೆ. ಮತ್ತೊಂದೆಡೆ 9 ಲಕ್ಷ ವಿವಿಧ ಬಣ್ಣದ ಸೇವಂತಿಗೆ ಮತ್ತು ಗುಲಾಬಿ ಹೂವುಗಳಿಂದ ಪ್ರವಾಸಿ ತಾಣ, ದೇವಾಲಯಗಳ ನಿರ್ಮಾಣವಾಗಿದ್ದು, ಕಣ್ಮನ ಸೆಳೆಯುತ್ತಿದೆ.ಮತ್ತೊಂದು ಬದಿಯಲ್ಲಿ ವಿವಿಧ ತರಕಾರಿ ಬೆಳೆಗಳು, ಕೈತೋಟ ಆಹಾರ ಬೆಳೆಗಳು ಮತ್ತು ತರಕಾರಿ ಬೆಳೆಗಳು ಹಾಗೂ ವಿವಿಧ ಅಭಿವೃದ್ಧಿ ಇಲಾಖೆ ಕಾರ್ಯಕ್ರಮಗಳ ಸಮಗ್ರ ಮಾಹಿತಿಯನ್ನು ಇಲ್ಲಿ ನೀಡಲಾಗುತ್ತಿದೆ.


ಉದಯವಾಹಿನಿ ಚಿತ್ರ

**ಪ್ರತಿ ದಿನ ರಾತ್ರಿ 10 ಗಂಟೆವರೆಗೆ ಪ್ರವೇಶ**

ಪ್ರತಿ ದಿನ ಬೆಳಗ್ಗೆ 10 ರಿಂದ ರಾತ್ರಿ 10 ಗಂಟೆ ವರೆಗೆ ಪ್ರವೇಶ 5 ದಿನಗಳ ಕಾಲ ನಡೆಯಲಿರುವ ಫಲಪುಷ್ಪ ಪ್ರದರ್ಶನಕ್ಕೆ ಪ್ರತಿದಿನ ಬೆಳಗ್ಗೆ 10 ಗಂಟೆಯಿಂದ ರಾತ್ರಿ 10 ಗಂಟೆ ವರೆಗೆ ಫಲಪುಷ್ಪ ಪ್ರದರ್ಶನ ವೀಕ್ಷಿಸಲು ಅವಕಾಶ ಕಲ್ಪಿಸಲಾಗಿದೆ. ಈ ವೇಳೆ ಸಂಜೆ 6 ಗಂಟೆಯಿಂದ ರಾತ್ರಿ 10 ಗಂಟೆ ವರೆಗೆ ಸಾಂಸ್ಕೃತಿಕ ಹಾಗೂ ಮನರಂಜನಾ ಕಾರ್ಯಕ್ರಮ ಏರ್ಪಡಿಸಲಾಗಿದೆ. ವಯಸ್ಕರಿಗೆ ಟಿಕೆಟ್ ದರ 30 ರೂ. ಟಿಕೆಟ್ ದರ ಇರಲಿದ್ದು, 6-12 ವರ್ಷದ ಮಕ್ಕಳಿಗೆ 20 ರೂ. ಹಾಗೂ ಸಮವಸ್ತ್ರ ಧರಿಸಿ ಬರುವ ಶಾಲಾ ಮಕ್ಕಳಿಗೆ ಹಾಗೂ 6 ವರ್ಷದೊಳಗಿನ ಮಕ್ಕಳಿಗೆ ಉಚಿತ ಪ್ರವೇಶ ಇರಲಿದೆ.

**ಪ್ರಮುಖ ಆಕರ್ಷಣೆಗಳಿವು**

**ಫಲಪುಷ್ಪ ಪ್ರದರ್ಶನದಲ್ಲಿ ವಿವಿಧ ಬಣ್ಣದ 9 ಲಕ್ಷ ಸೇವಂತಿಗೆ ಹೂವು, ಬಗೆ ಬಗೆಯ ಬಣ್ಣದ ಗುಲಾಬಿ ಬಳಸಿ ಪ್ರಸಿದ್ಧ ದೇವಾಲಯ ಹಾಗೂ ಪ್ರವಾಸಿ ತಾಣಗಳನ್ನು ನಿರ್ಮಿಸಿರುವುದು ಪ್ರಮುಖ ಆಕರ್ಷಣೆಯಾಗಿದೆ. ಇದರೊಂದಿಗೆ ಯುವ ಜನತೆಯನ್ನು ಸೆಳೆಯಲು ಹತ್ತು ಸ್ಥಳಗಳಲ್ಲಿ ಸೆಲ್ಫಿ ಪಾಯಿಂಟ್, ಹೂವಿನ ಆಕೃತಿಯ ಕ್ಷಯ ರೋಗ ಕುರಿತು ಜಾಗೃತಿ, ನರೇಗಾ ಯೋಜನೆಯ ಮಾಹಿತಿಯೊನ್ನೊಳಗೊಂಡ ಸ್ಥಬ್ಧ ಚಿತ್ರ, ಆಕರ್ಷಕ ಅಡಿನಿಯಂ ಗಿಡಗಳು, ಬೋನ್ಸಾಯ್ ಗಿಡಗಳು, ವಿವಿಧ ತರಕಾರಿ ಹಣ್ಣುಗಳನ್ನು ಬಳಸಿ ಕಲಾಕೃತಿಗಳನ್ನ ಕೆತ್ತನೆ ಮಾಡಲಾಗಿದೆ.**

**ವಿಶೇಷ ಆಕರ್ಷಣೆಗಳಿವು:** 40 ಬಗೆಯ ವಿವಿಧ ಜಾತಿಯ ಹೂವುಗಳ ಅಲಂಕಾರಿಕ ಕುಂಡಗಳ ಜೋಡಣೆ, 1.50 ಲಕ್ಷ ವಿವಿಧ ಜಾತಿಯ ಅಲಂಕಾರಿಕ ಗಿಡಗಳಾದ ಪೆಟೋನಿಯಾ, ಸಾಲ್ವಿಯಾ, ಅಂಟಿರೈನಂ, ಸೆಲೋಶಿಯಾ, ಮಾರಿಗೋಲ್ಡ್, ಜೀನಿಯಾ ಸೇವಂತಿಗೆ, ಪಾಯ್ನಿಸೆಟಿಯಾಗಳು ಗಮನ ಸೆಳೆಯುತ್ತಿವೆ.

ವಿವಿಧ ಜಿಲ್ಲೆಗಳ ಕೈಮಗ್ಗ, ನೇಕಾರರ ಸಹಕಾರ ಸಂಘಗಳು ಭಾಗವಹಿಸಿದ್ದು, ಕೈಮಗ್ಗ ನೇಕಾರರಿಂದ ತಯಾರಿಸಿರುವ ಹತ್ತಿ, ರೇಷ್ಮೆ, ಮೊಳಕಾಲ್ಮೂರು ರೇಷ್ಮೆ ಸೀರೆ, ಚಿಂತಾಮಣಿ ರೇಷ್ಮೆ ಸೀರೆ, ಕಾಟನ್ ಸೀರೆ, ಪಂಚೆ, ಬೆಡ್‌ಶೀಟ್, ಟವಲ್, ಲುಂಗಿ ಹಾಗೂ ಇತರೆ ಕೈ ಮಗ್ಗ ಉತ್ಪನ್ನಗಳನ್ನು ಶೇ.20 ರಿಯಾಯಿತಿ ದರದಲ್ಲಿ ಮಾರಾಟ ಮಾಡಲಾಗುತ್ತಿದೆ.

ಅಲ್ಲದೇ ಕೃಷಿ ಇಲಾಖೆ, ಮೀನುಗಾರಿಕೆ ಇಲಾಖೆ, ಶಿಕ್ಷಣ ಇಲಾಖೆ, ಅರಣ್ಯ ಇಲಾಖೆ, ಪಶು ಸಂಗೋಪನೆ ಇಲಾಖೆ, ಆರೋಗ್ಯ ಇಲಾಖೆ, ಕೈಗಾರಿಕೆ ಮತ್ತು ಖಾದಿ ಮತ್ತು ಗ್ರಾಮೋದ್ಯೋಗ ವತಿಯಿಂದ ಕಲಾಕೃತಿಗಳನ್ನು ಹಾಗೂ ಪ್ರಾತ್ಯಕ್ಷಿಕೆಯನ್ನು ಪ್ರದರ್ಶಿಸಲಾಗುತ್ತಿದೆ.

# ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಪ್ರಗತಿ ಪರಿಶೀಲನಾ ಸಭೆ

• **ಉದಯವಾಹಿನಿ, ಸೋಮವಾರಪೇಟೆ**

ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಪ್ರಗತಿ ಪರಿಶೀಲನಾ ಸಭೆ ಅಧ್ಯಕ್ಷ ಕಾಂತರಾಜ್ ಅಧ್ಯಕ್ಷತೆಯಲ್ಲಿ ಇಲ್ಲಿನ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಈಚೆಗೆ ನಡೆಯಿತು.


ಉದಯವಾಹಿನಿ ಚಿತ್ರ

**ಕೆಎಸ್‌ಆರ್‌ಟಿಸಿ ಘಟಕ ಪ್ರಾರಂಭ**

ಅನ್ನಭಾಗ್ಯ ಯೋಜನೆಗೆ ಸಂಬಂಧಿಸಿದ ಪಡಿತರ ಚೀಟಿಯ ತಿದ್ದುಪಡಿ ಬೇರೆ ಜಿಲ್ಲೆಯಲ್ಲಿ ಈಗಾಗಲೇ ಮುಗಿದಿದೆ.

ಆದರೆ, ಕೊಡಗಿನಲ್ಲಿ ಇನ್ನೂ ಕಾರ್ಯರೂಪಕ್ಕೆ ಬಂದಿಲ್ಲ ಎಂದು ಸಮಿತಿ ಸದಸ್ಯರು ದೂರಿದರು. ತಾಲ್ಲೂಕಿನಾದ್ಯಂತ ಕೆಎಸ್ ಆರ್‌ಟಿಸಿ ಬಸ್ ಸಮಸ್ಯೆಗಳ ಬಗ್ಗೆ ಚರ್ಚಿಸಲಾಯಿತು. ಸೋಮವಾರಪೇಟೆಯಲ್ಲಿ ಕೆಎಸ್‌ಆರ್‌ಟಿಸಿ ಘಟಕ ಪ್ರಾರಂಭಿಸಲು ಸೂಕ್ತ ಜಾಗದ ಅವಶ್ಯಕತೆ ಇದೆ. ಇದು ಕಾರ್ಯರೂಪಕ್ಕೆ ಬಂದರೆ ಬಸ್ ಮಾರ್ಗದ ವ್ಯವಸ್ಥೆ ಸುಧಾರಿಸುವುದರೊಂದಿಗೆ ಸರ್ಕಾರದ ಶಕ್ತಿ ಯೋಜನೆಯ ಮೂಲಕ ಘಟಕಕ್ಕೂ ಆದಾಯ ಬರಲಿದೆ ಎಂದು ಮಡಿಕೇರಿ ಡಿಪೊ ವ್ಯವಸ್ಥಾಪಕ ಮಹಮ್ಮದಾಲಿ ಸಭೆಗೆ ತಿಳಿಸಿದರು. ಸರ್ಕಾರದ ಗ್ಯಾರಂಟಿ ಯೋಜನೆಗಳ ಕುರಿತು ಸಂಬಂಧಿಸಿದ ಇಲಾಖೆಗಳು ಧ್ವನಿಮುದ್ರಣ ಮಾಡಿ ಕಳುಹಿಸಿಕೊಟ್ಟರೆ ಗ್ರಾಮ ಪಂಚಾಯಿತಿಯ ಸ್ವಚ್ಛವಾಹಿನಿ ವಾಹನಗಳ ಮೂಲಕ ದಿನಂಪ್ರತಿ ಪ್ರಚಾರ ಮಾಡಿ ಇನ್ನಷ್ಟು ಫಲಾನುಭವಿಗಳು ಇದರ ಪ್ರಯೋಜನ ಪಡೆಯುವಂತೆ ಮಾಡಬಹುದು. ಸಂತೆ ಮತ್ತು ಜಾತ್ರೆಗಳಲ್ಲಿ ಪಂಚ ಗ್ಯಾರಂಟಿ ಯೋಜನೆಗಳ ಮಾಹಿತಿ ಇರುವ ಭಿತ್ತಿ ಪತ್ರಗಳನ್ನು ಹಂಚುವುದು ಸೂಕ್ತ ಎಂದು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಪರಮೇಶ್ ಕುಮಾರ್ ಹೇಳಿದರು. ಸಭೆಯಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಸದಸ್ಯರುಗಳು ಹಾಗೂ ಯೋಜನೆಗೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಇದ್ದರು.

**ಯುವನಿಧಿ ಯೋಜನೆಯ ಕುರಿತು ಕಾಲೇಜುಗಳಿಗೆ ತೆರಳಿ ವಿದ್ಯಾರ್ಥಿಗಳಿಗೆ ಮಾಹಿತಿ ನೀಡುವಂತಾದಲ್ಲಿ ಮಾತ್ರ ಹೆಚ್ಚು ಪರಿಣಾಮಕಾರಿ ಯಾಗಿ ಯೋಜನೆಯನ್ನು ಜಾರಿಗೊಳಿಸಲು ಸಾಧ್ಯ. ಗೃಹಲಕ್ಷ್ಮೀ ಯೋಜನೆಯ ಪ್ರಯೋಜನದ ಕುರಿತು ಹಾಡಿಗಳಲ್ಲಿ ಪ್ರಚಾರ ಮಾಡಬೇಕಿದೆ ಎಂದು ಅಧ್ಯಕ್ಷರಾದ ಕಾಂತರಾಜ್ ಹೇಳಿದರು.**

# ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಪಲ್ಲವಿ

• **ಉದಯವಾಹಿನಿ, ಮಂಡ್ಯ**



ಸ್ವಾತಂತ್ರ್ಯ ಬಂದು 78 ವರ್ಷಗಳಾದರೂ, ರಾಜ್ಯದಲ್ಲಿ ಅಲೆಮಾರಿ ಜನಾಂಗ ಇಂದಿಗೂ ನೆಲೆ ಮತ್ತು ಮೂಲಸೌಕರ್ಯವಿಲ್ಲದೆ ಪರದಾಡುತ್ತಿದೆ. ಅವರಿಗೆ ನಿವೇಶನ ಮತ್ತು ಮನೆ ಸೌಲಭ್ಯ ಕಲ್ಪಿಸುವ ಮೂಲಕ 'ಟೆಂಟ್ ಮುಕ್ತ ಕರ್ನಾಟಕ' ನಮ್ಮ ಗುರಿ' ಎಂದು ರಾಜ್ಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಪಲ್ಲವಿ ಜಿ. ತಿಳಿಸಿದರು. ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಶುಕ್ರವಾರ ಪ್ರಗತಿ ಪರಿಶೀಲನಾ ಸಭೆ ನಡೆಸಿದ ನಂತರ ಅವರು ಮಾಧ್ಯಮದವರೊಂದಿಗೆ ಮಾತನಾಡಿ, ಈಗಾಗಲೇ ರಾಜ್ಯದ 14 ಜಿಲ್ಲೆಗಳಲ್ಲಿ ಪ್ರವಾಸ ಮಾಡಿ ಅಲೆಮಾರಿ ಜನಾಂಗದ ಕುಂದು ಕೊರತೆಗಳನ್ನು ಆಲಿಸಿದ್ದೇನೆ. ಉಳಿದ ಜಿಲ್ಲೆಗಳಲ್ಲೂ ಪ್ರವಾಸ ಮಾಡಿ ಮಾರ್ಚ್ 12ರೊಳಗೆ ಅಲೆಮಾರಿ ಜನಾಂಗದ ಸ್ಥಿತಿಗತಿ ಕುರಿತು ರಾಜ್ಯ ಸರ್ಕಾರಕ್ಕೆ ವರದಿ ಸಲ್ಲಿಸುತ್ತೇನೆ ಎಂದು ಹೇಳಿದರು. ಧ್ವನಿ ಇಲ್ಲದ, ಅವಕಾಶ ವಂಚಿತರಾದ ಅಲೆಮಾರಿಗಳ ಸಮಸ್ಯೆಗಳನ್ನು ಪರಿಹರಿಸಲು ಪ್ರಾಮಾಣಿಕ ಪ್ರಯತ್ನ ನಡೆಸುತ್ತಿದ್ದೇನೆ. ಅಹವಾಲುಗಳನ್ನು ಸ್ವೀಕರಿಸಿ ಕಾಲಮಿತಿಯಲ್ಲಿ ಪರಿಹಾರ ಕಲ್ಪಿಸಲು ಅಧಿಕಾರಿಗಳು ಮಾತ್ರ ಹೃದಯದಿಂದ ಕೆಲಸ ಮಾಡಲು ಸೂಚಿಸಿದ್ದೇನೆ.

ಅಲೆಮಾರಿ ಜನಾಂಗದ ಮಕ್ಕಳಿಗೆ ಪ್ರವೇಶ ಪರೀಕ್ಷೆ ರಹಿತವಾಗಿ ಸಮಾಜ ಕಲ್ಯಾಣ ಇಲಾಖೆಯ ವಸತಿ ಶಾಲೆಗಳಲ್ಲಿ ಪ್ರವೇಶ ಕಲ್ಪಿಸಲು ಕ್ರಮ ಕೈಗೊಳ್ಳಲಾಗಿದೆ ಎಂದರು. ಹಕ್ಕಿಪಿಕ್ಕಿ ಜನಾಂಗದ ಮೇಲಿನ ದೌರ್ಜನ್ಯ ಮತ್ತು ಬುಡಕಟ್ಟು ಜನರ ಹೆಸರಿನಲ್ಲಿ ಅನರ್ಹರು ಜಾತಿ ಪ್ರಮಾಣ ಪತ್ರ ಪಡೆಯುವುದನ್ನು ಗಂಭೀರವಾಗಿ ಪರಿಗಣಿಸಿದ್ದು, ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು. ಪಾಂಡವಪುರ ಸೇರಿದಂತೆ ಕೆಲವು ಕಡೆ ಶವಸಂಸ್ಕಾರ ನಡೆಸಲು ಸ್ಮಶಾನಗಳ ಕೊರತೆ ಬಗ್ಗೆ ಅಹವಾಲು ಬಂದಿವೆ. ಕೂಡಲೇ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿಗೆ ಸೂಚಿಸಿದ್ದೇನೆ ಎಂದರು.

# ಹೆಚ್‌ಡಿಕೆ ಬಳಿಕ ಕೆ.ಎನ್.ರಾಜಣ್ಣ ವಿರುದ್ಧ ನಾಲಿಗೆ ಹರಿಬಿಟ್ಟ ಮಾಧುಸ್ವಾಮಿ..!

• **ಉದಯವಾಹಿನಿ, ತುಮಕೂರು**

ಮಾಜಿ ಪ್ರಧಾನಿ ಹೆಚ್.ಡಿ ದೇವೇಗೌಡ, ಮಾಜಿ ಸಿಎಂ ಹೆಚ್.ಡಿ ಕುಮಾರಸ್ವಾಮಿ ಬಳಿಕ ಇದೀಗ ಕೆ.ಎನ್.ರಾಜಣ್ಣ ವಿರುದ್ಧ ಬಿಜೆಪಿ ಮಾಜಿ ಸಚಿವ ಜೆ.ಸಿ.ಮಾಧುಸ್ವಾಮಿ ನಾಲಿಗೆ ಹರಿಬಿಟ್ಟಿದ್ದಾರೆ. ಚಿಕ್ಕನಾಯಕನಹಳ್ಳಿಯಲ್ಲಿ ನಡೆದ ಅಭಿನಂದನಾ ಸಮಾರಂಭದಲ್ಲಿ ಮಾತನಾಡಿದ ಮಾಧುಸ್ವಾಮಿಯವರು ನಾಮನಿರ್ದೇಶನ ಮಾಡಿ ಪಾವಗಡ ಶಾಸಕ ವೆಂಕಟೇಶ್ ಅವರನ್ನು ಅಧ್ಯಕ್ಷರನ್ನಾಗಿ ಮಾಡಿದ್ದಕ್ಕೆ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಪಾವಗಡದವರನ್ನ ನಾಮನಿರ್ದೇಶನ ಮಾಡಿ, ಅಧ್ಯಕ್ಷರನ್ನಾಗಿ ಮಾಡಿ ನಮ್ಮ ಮುಖದ ಮೇಲೆ ಕೆನ್ನೆಗೆ ಒಡೆದಂತಾಗಿದೆ. ಇದಕ್ಕಿಂತ ನಾಚಿಕೆಗೇಡಿನ ಸ್ಥಿತಿ ಒಕ್ಕೂಟ ವ್ಯವಸ್ಥೆಗೆ ಬರಬಾರದು ಎಂದು


ಉದಯವಾಹಿನಿ ಚಿತ್ರ

ಕಿಡಿಕಾರಿದ್ದಾರೆ. ಸಹಕಾರ ಮಂತ್ರಿ ಅನ್ನೋ ಯೋಗ್ಯತೆ ಅವರಿಗೆ ಇದ್ದರೆ ಬಂದು ಸಾರ್ವಜನಿಕವಾಗಿ ಕ್ಷಮೆ ಕೇಳಬೇಕು. ನಾನು ಸಹಕಾರ ಕ್ಷೇತ್ರಕ್ಕೆ ಅಯೋಗ್ಯ, ಈ ಕ್ಷೇತ್ರಕ್ಕೆ ಯೋಗ್ಯನಲ್ಲ ಅಂತಾ ರಾಜೀನಾಮೆ ಕೊಡಬೇಕು ಎಂದು ಕೆ.ಎನ್.ರಾಜಣ್ಣ ವಿರುದ್ಧ ನಾಲಿಗೆ ಹರಿಬಿಟ್ಟರು.

ನಾನು ಅಧಿಕಾರದಲ್ಲಿದ್ದಾಗ ನನ್ನದು ನಡೀತಾ ಇತ್ತು, ಒಂದು ದಿನವೂ ಆ ವ್ಯವಸ್ಥೆಗೆ ಬಾಯಾಕಿಲ್ಲ. ಅವರೂ ನಮ್ಮ ಹಾಗೆಯೇ ಗೆದ್ದು ಬಂದಿದ್ದಾರೆ ಅವರ ಆಡಳಿತ ಅವರು ಮಾಡಲಿ ಅಂತಾ ಹೇಳಿದವರು ನಾವು.

ರೈತರ ಕೆನ್ನೆ ಮೇಲೆ ಒಡೆದಂಗೆ ಹತ್ತು ಜನರಲ್ಲಿ ಅವರು ಯಾರಿಗಾದ್ರು ಅಧ್ಯಕ್ಷ ಸ್ಥಾನ ಕೊಡಲಿ. ನಾವು ಯಾರಿಗೆ ವೋಟ್ ಹಾಕಬೇಕು ಅಂತಾ ತೀರ್ಮಾನ ಮಾಡಿರಲಿಲ್ಲ ಎಂದರು. ನಮ್ಮ ಗುಂಪಿಗೆ ಶಕ್ತಿ ಇರಲಿಲ್ಲ, ಕಾಂಗ್ರೆಸ್ ಅವರು ಆಗ್ತಾರ ಆಗಲಿ ಅಂತಾ. ಗೆದ್ದ ಹತ್ತು ಜನರನ್ನು ಆಚೆ ಇಟ್ಟು ನಾಮನಿರ್ದೇಶನ ಮಾಡಿ ಅಧ್ಯಕ್ಷ ಮಾಡ್ತಾರೆ ಅಂದ್ರೆ ಈ ಕಸರತ್ತು ನಾವು ಮಾಡಬೇಕಿತ್ತಾ..?. ವೋಟ್ ಹಾಕಿಸಿಕೊಂಡು ಇಷ್ಟೆಲ್ಲಾ ಕಷ್ಟಪಟ್ಟು ಗೆದ್ದೋರು ಯಾರು ಬೇಕಾಗಿಲ್ಲ. ಕೆಎಂಎಫ್ ಅಲ್ಲಿ ಇಂತಹದ ಸ್ಥಿತಿ, ಮುಚ್ಚು ಬಿಡ್ಡಿ ಕೆಎಂಎಫ್ ನಾ ಎಂದು ತಮ್ಮ ಆಕ್ರೋಶ ಹೊರಹಾಕಿದ್ದಾರೆ.


# ಮಹದೇಶ್ವರ ಬೆಟ್ಟದ ಅರಣ್ಯದೊಳಗೆ ಫೆ.1, 2ರಂದು ಪಕ್ಷಿ ಗಣತಿ

• **ಉದಯವಾಹಿನಿ, ಚಾಮರಾಜನಗರ**

ಕೊಳ್ಳೇಗಾಲ ತಾಲ್ಲೂಕು ವ್ಯಾಪ್ತಿಗೊಳಪಡುವ ಮಲೆ ಮಹದೇಶ್ವರ ವನ್ಯಜೀವಿ ಧಾಮದಲ್ಲಿ ಫೆ.1, 2 ರಂದು 'ಪಕ್ಷಿ ಗಣತಿ' ಕಾರ್ಯಕ್ರಮ ನಡೆಯುತ್ತಿದ್ದು ಪಕ್ಷಿತಜ್ಞರು ಸಮೀಕ್ಷಾ ಕಾರ್ಯದಲ್ಲಿ ಭಾಗವಹಿಸಲಿದ್ದಾರೆ.ಮಲೆ ಮಹದೇಶ್ವರ ವನ್ಯಜೀವಿ ಧಾಮವು ವಿಸ್ಮಯಗಳ ಆಗರವಾಗಿದ್ದು ಜೀವ ವೈವಿಧ್ಯಗಳ ತಾಣವಾಗಿದೆ. ಅಪರೂಪದ ಸಸ್ಯ, ಪ್ರಾಣಿ, ಪಕ್ಷಿ ಸಂಕುಲಗಳಿಗೆ ಆಶ್ರಯ ನೀಡಿದೆ.

ಇದೇ ಮೊದಲ ಬಾರಿಗೆ ಮಹದೇಶ್ವರ ಬೆಟ್ಟದ ಅರಣ್ಯದೊಳಗೆ ಪಕ್ಷಿ ಗಣತಿ ನಡೆಯುತ್ತಿದ್ದು ಅಪರೂಪದ ಪಕ್ಷಿ ಪ್ರಬೇಧಗಳನ್ನು ಗುರುತಿಸಿ ದಾಖಲೀಕರಣ ಮಾಡಲು ಸಹಾಯವಾಗಲಿದೆ. ಅರಣ್ಯ ಇಲಾಖೆ, ಕರ್ನಾಟಕ ಎಕೋ ಟೂರಿಸಂ, ಜಂಗಲ್ ಲಾಸ್ ಹಾಗೂ ರೆಸಾರ್ಟ್ ಸಹಯೋಗದಲ್ಲಿ ಹೊಳೆಮತ್ತಿ ನೇಚರ್ ಫೌಂಡೇಷನ್ ನೆರವಿನೊಂದಿಗೆ ಪಕ್ಷಿ ಗಣತಿ ನಡೆಯುತ್ತಿದೆ. ವೆಬ್‌ಸೈಟ್https://aranya.gov.in/ಮೂಲಕ ಹೆಸರು ನೋಂದಾಯಿಸಿಕೊಳ್ಳಲು ಅವಕಾಶ ನೀಡಲಾಗಿತ್ತು. ಇದುವರೆಗೂ ರಾಜ್ಯದ ಎಲ್ಲ ಭಾಗಗಳಿಂದ 500ಕ್ಕೂ ಮಂದಿ ಹೆಸರು ನೋಂದಾಯಿಸಿಕೊಂಡಿದ್ದು, ಅರಣ್ಯದೊಳಗೆ ವಾಸ್ತವ್ಯ ಹಾಗೂ ಸುರಕ್ಷತೆಯ ದೃಷ್ಟಿಯಿಂದ 150 ಮಂದಿಗೆ ಮಾತ್ರ ಗಣತಿ ಕಾರ್ಯದಲ್ಲಿ ಭಾಗವಹಿಸಲು ಅನುಮತಿ ನೀಡಲಾಗುತ್ತಿದೆ ಎಂದು ಅರಣ್ಯ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ.

**ಹೇಗೆ ನಡೆಯಲಿದೆ ಗಣತಿ:** ಫೆ.1 ಹಾಗೂ 2ರಂದು ಬೆಳಿಗ್ಗೆ 6 ರಿಂದ ಮಧ್ಯಾಹ್ನ 12ರವರೆಗೆ ಹಾಗೂ ಸಂಜೆ 4 ರಿಂದ 6ರವರೆಗೆ ಎಂಎಂ ಹಿಲ್ಸ್ ಅರಣ್ಯದೊಳಗೆ ಪಕ್ಷಿ ಗಣತಿ ನಡೆಯಲಿದ್ದು ನೋದಾಯಿಸಿಕೊಂಡಿರುವ 150 ಮಂದಿ ಭಾಗವಹಿಸಲಿದ್ದಾರೆ. ಎರಡೂ ದಿನ ಕಾಡಿನೊಳಗೆ 5 ರಿಂದ 10 ಕಿ.ಮೀ ವ್ಯಾಪ್ತಿಯಲ್ಲಿ ಸಂಚರಿಸಿ ಕಣ್ಣಿಗೆ ಬೀಳುವ ಪಕ್ಷಿ ಪ್ರಬೇಧಗಳ ಸಂಪೂರ್ಣ ವಿವರವನ್ನು ಫೋಟೊ ಸಹಿತ ದಾಖಲಿಸಿಕೊಳ್ಳಲಿದ್ದಾರೆ.



**ದಾಖಲೀಖರಣ ಕಾರ್ಯಕ್ಕೆ ಅರಣ್ಯ ಇಲಾಖೆಯಿಂದ ಪ್ರತಿಯೊಬ್ಬರಿಗೂ ಚೆಕ್ ಲಿಸ್ಟ್ ನೀಡಲಾಗುತ್ತಿದ್ದು ಅದರಲ್ಲಿ ವೀಕ್ಷಣೆ ಮಾಡಿರುವ ಪಕ್ಷಿಗಳ ವಿವರ ದಾಖಲಿಸಲು ಸೂಚಿಸಲಾಗಿದೆ. ಎರಡು ದಿನಗಳ ಬಳಿಕ ಪ್ರತಿಯೊಬ್ಬರಿಂದಲೂ ಚೆಕ್‌ಲಿಸ್ಟ್ ಪಡೆದುಕೊಳ್ಳಲಾಗುವುದು. ಇದರಿಂದ ಮಲೆ ಮಹದೇಶ್ವರ ಬೆಟ್ಟ ಅರಣ್ಯ ವ್ಯಾಪ್ತಿಯಲ್ಲಿರುವ ಪಕ್ಷಿ ಪ್ರಬೇಧಗಳ ಸಂಪೂರ್ಣ ಮಾಹಿತಿ ಲಭ್ಯವಾಗಲಿದೆ ಎಂದು ಮಲೆ ಮಹದೇಶ್ವರ ವನ್ಯಜೀವಿ ದಾಮದ ಉಪ ಅರಣ್ಯ ಸಂರಕ್ಷಣಾಧಿಕಾರಿ ಡಾ.ಕೆ.ಸಂತೋಷ್ ಕುಮಾರ್ ಮಾಹಿತಿ ನೀಡಿದರು.ಭಾಗವಹಿಸಿದ ಎಲ್ಲರಿಗೂ ಪ್ರಮಾಣಪತ್ರ ನೀಡಲಾಗುವುದು. ಜೊತೆಗೆ ಪಕ್ಷಿಗಳ ಅತ್ಯುತ್ತಮ ಛಾಯಾಚಿತ್ರ ಸೆರೆಹಿಡಿದವರಿಗೆ ಹಾಗೂ ಅತಿ ಹೆಚ್ಚು ಪಕ್ಷಿ ಪ್ರಬೇಧಗಳನ್ನು ಗುರುತಿಸುವವರಿಗೆ ಪ್ರಶಸ್ತಿ ನೀಡಲಾಗುವುದು ಎಂದರು.**

# ರಾಮನಗರ ಉದ್ಧಾರ ಮಾಡ್ತೀವಿ ಅಂತಿದ್ರಲ್ಲಾ

## ಕಿರುಕುಳ ತಾಳಲಾರದೇ ಆತ್ಮಹತ್ಯೆ ಮಾಡಿಕೊಳ್ಳುವ ಪ್ರಕರಣ

• **ಉದಯವಾಹಿನಿ, ರಾಮನಗರ**

ರಾಜ್ಯದಲ್ಲಿ ಮೈಕ್ರೋ ಫೈನಾನ್ಸ್‌ನವರ ಹಾವಳಿ ಹೆಚ್ಚಾಗಿದೆ. ಕಿರುಕುಳ ತಾಳಲಾರದೇ ಆತ್ಮಹತ್ಯೆ ಮಾಡಿಕೊಳ್ಳುವ ಪ್ರಕರಣಗಳು ವರದಿಯಾಗುತ್ತಿದೆ. ಈ ಬಗ್ಗೆ ಕೇಂದ್ರ ಸಚಿವ ಎಚ್‌ಡಿ ಕುಮಾರಸ್ವಾಮಿ ಅವರು ಪ್ರತಿಕ್ರಿಯಿಸಿದ್ದಾರೆ. ರಾಮನಗರ ಜಿಲ್ಲೆಯಲ್ಲಿ ಮೈಕ್ರೋ ಫೈನಾನ್ಸ್‌ನವರ ಕಿರುಕುಳ ಹೆಚ್ಚಾಗಿದೆ.

ಈ ಬಗ್ಗೆ ಉಸ್ತುವಾರಿ ಸಚಿವರು ಗಮನ ಹರಿಸಬೇಕು ಎಂದು ವಾಗ್ದಾಳಿ ನಡೆಸಿದರು. ಜಿಲ್ಲೆಯಲ್ಲಿ ಮೈಕ್ರೋ ಫೈನಾನ್ಸ್ ಹಾವಳಿ ವಿಚಾರವಾಗಿ ತಾಲೂಕಿನ ದಾಸೇಗೌಡನದೊಡ್ಡಿ ಗ್ರಾಮದಲ್ಲಿ ಕೇಂದ್ರ ಸಚಿವ ಕುಮಾರಸ್ವಾಮಿ ಪ್ರತಿಕ್ರಿಯಿಸಿದ್ದಾರೆ. ಇದನ್ನು ಸರ್ಕಾರ ನೋಡಬೇಕಲ್ವಾ ? ಉಸ್ತುವಾರಿ ಸಚಿವರು ನೋಡಬೇಕಲ್ವಾ? ಕೇವಲ ರಾಮನಗರ ಅಲ್ಲ, ರಾಜ್ಯದ ಹಲವೆಡೆ ಮೈಕ್ರೋ ಫೈನಾನ್ಸ್ ಹಾವಳಿ ಹೆಚ್ಚಾಗಿದೆ. ಈಗ 2 ಸಾವಿರ ಗ್ಯಾರಂಟಿ ಹಣ ಕೊಟ್ಟಿದ್ದಾರಲ್ಲ, ಮತ್ಯಾಕೆ ಜನ ಮೈಕ್ರೋ ಫೈನಾನ್ಸ್ ನಲ್ಲಿ ಸಾಲ ಮಾಡ್ತಾರೆ? ನಾನು ಸಿಎಂ ಆಗಿದ್ದಾಗ ಬಿಲ್ ಪಾಸ್ ಮಾಡಿ ಒಂದು ಕಾನೂನು ತಂದೆ. ಆ ಬಿಲ್ ಏನಾಯ್ತು.? ಅಂದಿನ ಸಹಕಾರ ಸಚಿವರನ್ನ ಕೇರಳಕ್ಕೆ ಕಳುಹಿಸಿ ಈ ಬಗ್ಗೆ ಅಧ್ಯಯನ ಮಾಡಿಸಿದ್ದೆ. ಕೇರಳದಲ್ಲಿ ಈ ವಿಚಾರಕ್ಕೆ ಒಂದು ಕಮಿಷನ್ ಇದೆ. ಅಂತಹ ಒಂದು ಕಮಿಷನ್ ಇಲ್ಲೂ ಕೂಡಾ ತೆರೆದು ಸಾಲ ತೆಗೆದುಕೊಂಡು ಕಟ್ಟಲು ಆಗದವರಿಗೆ


ಉದಯವಾಹಿನಿ ಚಿತ್ರ

ಅನುಕೂಲ ಮಾಡಬೇಕು ಅಂತ ನೋಡಿದ್ದೆ. ಆದ್ರೆ ನಮ್ಮ ಸರ್ಕಾರವನ್ನು ತೆಗೆದುಹಾಕಿದ್ರು. ಇವತ್ತು ಸರ್ಕಾರ ನಡೆಯುತ್ತಿದೆಯಲ್ಲಾ ಯಾಕೆ ಮಾಡುತ್ತಿಲ್ಲ? ಎಂದು ಪ್ರಶ್ನಿಸಿದರು.

ರಾಮನಗರದಲ್ಲಿ ಓರ್ವ ಮಹಿಳೆ ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ರಾಮನಗರ ಉದ್ಧಾರ ಮಾಡ್ತೀವಿ ಅಂತಿದ್ರಲ್ಲಾ ಯಾರಾದ್ರೂ ಹೋಗಿ ಅವರ ಸಮಸ್ಯೆ ಕೇಳಿದ್ದಾರಾ? ಯಾವ ಮಂತ್ರಿಯಾದ್ರೂ ಬಂದಿದ್ದಾರಾ? ಇದನ್ನ ಜನ ಅರ್ಥ ಮಾಡಿಕೊಳ್ಳಬೇಕು. ಬಡವರ ಮೇಲೆ ಕಾಳಜಿ ಇರುವವರು ಯಾರು ಅಂತ ಅರ್ಥ ಮಾಡಿಕೊಳ್ಳಿ ಎಂದರು. ರಾಮನಗರ ಶಾಸಕರ ವಿರುದ್ಧ ಭೂಕಬಳಿಕೆ ಆರೋಪ ವಿಚಾರವಾಗಿ ಪ್ರತಿಕ್ರಿಯಿಸಿ, ರಾಮನಗರ ಶಾಸಕರದ್ದಾ? ಅವರ ಬಗ್ಗೆ ಯಾಕೆ ಚರ್ಚೆ ಮಾಡೋಣ ಎಂದರು. ರಾಮನಗರದಲ್ಲಿ ಮೈಕ್ರೋ ಫೈನಾನ್ಸ್ ಹಾವಳಿ ವಿಚಾರ ರಾಜ್ಯದ ಆರ್ಥಿಕ ಪರಿಸ್ಥಿತಿ ಹೇಗಿದೆ ಅಂತ ನೋಡಿದ್ದೀರಿ. ಈ ಜಿಲ್ಲೆ ಮಾತ್ರವಲ್ಲ, ಎಲ್ಲಾ ಜಿಲ್ಲೆಯಲ್ಲೂ ಇಂತಹ ಹಾವಳಿ ಹೆಚ್ಚಾಗಿದೆ. ಸರ್ಕಾರ ಈ ಬಗ್ಗೆ ಯಾವುದೇ ಕ್ರಮ ಕೈಗೊಂಡಿಲ್ಲ. ಜನರ ಸಮಸ್ಯೆಗಳನ್ನ ಬಗೆಹರಿಸುವಲ್ಲಿ ಸರ್ಕಾರ ವಿಫಲವಾಗಿದೆ ಎಂದರು.

ರಾಮನಗರ ತಾಲ್ಲೂಕಿನ ದಾಸೇಗೌಡನದೊಡ್ಡಿ ಗ್ರಾಮದಲ್ಲಿನ ದೇವಾಲಯದ ಮುಖ್ಯದ್ವಾರ ಹಾಗೂ ಅಶ್ವತ್ಥ ಕಟ್ಟೆ ಉದ್ಘಾಟನಾ ಕಾರ್ಯಕ್ರಮಕ್ಕೆ ಕೇಂದ್ರ ಸಚಿವರಾದ ಎಚ್ ಡಿ ಕುಮಾರಸ್ವಾಮಿ ಹಾಗೂ ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಆಗಮಿಸಿದ್ದಾರೆ. ಗ್ರಾಮಸ್ಥರು ಅದ್ದೂರಿ ಸ್ವಾಗತ ಕೋರಿದರು.

**ರಾಮನಗರ ಶಾಸಕರ ವಿರುದ್ಧ ಭೂಕಬಳಿಕೆ ಆರೋಪ ವಿಚಾರ ಉಳುವವನೇ ಭೂಮಿಯ ಒಡೆಯ ಎನ್ನುವ ಕಾನೂನು ಉಲ್ಲಂಘನೆ ಆಗಿದೆ. ರಾಮನಗರ ಶಾಸಕರು 67 ಎಕರೆ ಜಮೀನು ಲಪಟಾಯಿಸಿದ್ದಾರೆ ಎನ್ನುವುದು ಬೆಳಕಿಗೆ ಬಂದಿದೆ. ಅಲ್ಲಿನ ರೈತರು ಲೋಕಾಯುಕ್ತಕ್ಕೆ ದೂರು ಕೊಟ್ಟಿದ್ದಾರೆ. ರೈತರ ಹೆಸರಿನಲ್ಲಿ ಪ್ರಮಾಣವಚನ ಸ್ವೀಕರಿಸಿ ರೈತರಿಗೆ ದ್ರೋಹ ಮಾಡ್ತಿದ್ದಾರೆ. ಇದಕ್ಕೆ ಜನರೇ ಮುಂದಿನ ದಿನಗಳಲ್ಲಿ ಉತ್ತರ ಕೊಡ್ತಾರೆ ಎಂದರು.**

# ವಿರೋಧ ಪಕ್ಷಗಳನ್ನು ಅಸ್ಥಿರಗೊಳಿಸುವ ಕಾರ್ಯದಲ್ಲಿ ಕಾಂಗ್ರೆಸ್

## ಕಿರುಕುಳದಿಂದ ಹಲವರು ಪ್ರಾಣ ಕಳೆದುಕೊಂಡ ಮೇಲೆ, ಊರು ಬಿಟ್ಟ ಹೋದ ಮೇಲೆ ಸಭೆ ನಡೆಸಿ ಚರ್ಚಿಸಿದರೇನು ಪ್ರಯೋಜನ

• **ಉದಯವಾಹಿನಿ, ಮೈಸೂರು**

'ಕಾಂಗ್ರೆಸ್‌ನವರು ಉತ್ತಮವಾಗಿ ಸರ್ಕಾರ ನಡೆಸಿ, ಜನರ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸುವ ಬದಲಿಗೆ ವಿರೋಧ ಪಕ್ಷಗಳನ್ನು ಅಸ್ಥಿರಗೊಳಿಸುವ ಕಾರ್ಯದಲ್ಲಿ ತೊಡಗಿದ್ದಾರೆ' ಎಂದು ಕೇಂದ್ರ ಬೃಹತ್ ಕೈಗಾರಿಕೆ, ಉಕ್ಕು ಖಾತೆ ಸಚಿವ ಎಚ್.ಡಿ. ಕುಮಾರಸ್ವಾಮಿ ಟೀಕಿಸಿದರು. ಇಲ್ಲಿ ಪತ್ರಕರ್ತರೊಂದಿಗೆ ಶುಕ್ರವಾರ ಮಾತನಾಡಿದ ಅವರು, 'ಒಳ್ಳೆಯ ಕೆಲಸಗಳನ್ನು ಮಾಡಲೆಂದು ಜನರು ಅವರಿಗೆ ಆಶೀರ್ವದಿಸಿದರು. ಆದರೆ, ಈ ಸರ್ಕಾರದವರು ಮಾಡುತ್ತಿರುವುದೇನು? ಆಡಳಿತದ ವಿಷಯದಲ್ಲಿ ರಾಜ್ಯಕ್ಕೆ ಇದ್ದ ಹೆಸರು ಸರ್ವನಾಶಕ್ಕೆ ಹೊರಟಿದ್ದಾರೆ' ಎಂದು ಆರೋಪಿಸಿದರು. 'ನಾವೆಲ್ಲರೂ ಒಂದಾಗಿದ್ದೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳುತ್ತಲೇ ಇರುತ್ತಾರೆ. ಯಾರಿಗೋಸ್ಕರ ಒಂದಾಗಿದ್ದಾರೆ? ಅಧಿಕಾರಕ್ಕೆ ಮತ್ತು ಕುರ್ಚಿಗಾಗಿ ಮಾತ್ರವೇ ಒಂದಾಗುತ್ತಿದ್ದಾರೆ. ಕುರ್ಚಿ ಕೊಟ್ಟ ಜನರಿಗಾಗಿ ಏನು ಮಾಡುತ್ತಿದ್ದಾರೆ; ಏನು ಕೊಟ್ಟಿದ್ದಾರೆ?' ಎಂದು ಕೇಳಿದರು. 'ಫೈನಾನ್ಸ್ ಕಂಪನಿಗಳ ಹಾವಳಿ ಬಗ್ಗೆ ಒಂದು


ಉದಯವಾಹಿನಿ ಚಿತ್ರ

ತಿಂಗಳಿನಿಂದಲೂ ಚರ್ಚೆಯಾಗುತ್ತಿದೆ. ಅಲ್ಲಲ್ಲಿ ಬೇಸತ್ತ ಜನರು ಮನೆ- ಹಳ್ಳಿಗಳನ್ನೇ ಬಿಟ್ಟು ಹೋಗುತ್ತಿದ್ದಾರೆ. ಆದರೆ, ಇದರ ವಿರುದ್ಧ ಕ್ರಮ ಕೈಗೊಳ್ಳುವ ಕೆಲಸವನ್ನು ಈ ಸರ್ಕಾರ ಮಾಡಲೇ ಇಲ್ಲ. ನೊಂದವರಿಗೆ ಮಾನಸಿಕ ಸ್ಥೈರ್ಯವನ್ನೂ ತುಂಬಲಿಲ್ಲ. ಫೈನಾನ್ಸ್‌ಗಳು ಪರವಾನಗಿ ಇಲ್ಲದೇ ಅಣಬೆ ರೀತಿ ಹುಟ್ಟಿಕೊಂಡಿವೆ. ಕಿರುಕುಳದಿಂದ ಹಲವರು ಪ್ರಾಣ ಕಳೆದುಕೊಂಡ ಮೇಲೆ, ಊರು ಬಿಟ್ಟ ಹೋದ ಮೇಲೆ ಸಭೆ ನಡೆಸಿ ಚರ್ಚಿಸಿದರೇನು ಪ್ರಯೋಜನ' ಎಂದು ಪ್ರಶ್ನಿಸಿದರು. 'ಮಂಡ್ಯ ಜಿಲ್ಲೆಯಲ್ಲಿ 60 ಖಾಸಗಿ ಫೈನಾನ್ಸ್‌ಗಳಿದ್ದು ಅವುಗಳಲ್ಲಿ 14 ಮಾತ್ರ ಪರವಾನಗಿ ಪಡೆದವು. ಉಳಿದವು ಕಾನೂನು ಉಲ್ಲಂಘಿಸಿ ಕೆಲಸ ಮಾಡುತ್ತಿವೆ. ಅವರ ವಿರುದ್ಧ ಕ್ರಮ ಕೈಗೊಳ್ಳಲು ನಮಗೆ ಅಧಿಕಾರವಿಲ್ಲ ಎಂದು ಅಲ್ಲಿನ ಜಿಲ್ಲಾಧಿಕಾರಿಯೇ ನನಗೆ ಮಾಹಿತಿ ನೀಡಿದರು' ಎಂದರು.

**'ಬಾಣಂತಿಯರು ಸಾಯುತ್ತಿದ್ದರೂ, ಕಳಪೆ ಔಷಧಿ ಪೂರೈಕೆ ಆಗುತ್ತಿದ್ದರೂ ಈ ಸರ್ಕಾರದಲ್ಲಿ ಕೇವಲ ಕುರ್ಚಿಗಾಗಿ ಚರ್ಚೆಯಾಗುತ್ತಿದೆ. ಎಷ್ಟು ದಿನ ಅಧಿಕಾರದಲ್ಲಿ ಇರುತ್ತೀರಾ ಎನ್ನುವುದು ಮುಖ್ಯವಲ್ಲ. ಜನರಿಗೆ ಏನು ಮಾಡಿದಿರಿ ಎಂಬುದು ಮುಖ್ಯ. ಇನ್ನೂ ಐದು ವರ್ಷ ನೀವೇ ಅಧಿಕಾರದಲ್ಲಿರಿ, ಮುಂದೆಯೂ ನೀವೇ ಬನ್ನಿ. ಆದರೆ, ಜನರ ಮೇಲಿನ ಸಾಲದ ಹೊರೆಯನ್ನು ಕಡಿಮೆ ಮಾಡಿ. ಬಡವರನ್ನು ಆರ್ಥಿಕವಾಗಿ ಬೆಳಸುತ್ತೇವೆ ಎನ್ನುತ್ತೀರಲ್ಲಾ, ಇದೇನಾ ಅದು?' ಎಂದು ಕೇಳಿದರು. 'ಇತರ ರಾಜ್ಯದವರು ದಾವೂಸ್‌ಗೆ ಹೋಗಿ ಬಂಡವಾಳ ತರುತ್ತಿದ್ದಾರೆ. ಇಲ್ಲಿನ ಸರ್ಕಾರ ಏನು ಮಾಡುತ್ತಿದೆ?' ಎಂದರು.**

**ಬಿ.ಶ್ರೀರಾಮುಲು ಬಿಜೆಪಿ ಬಿಟ್ಟು ಕಾಂಗ್ರೆಸ್‌ಗೆ ಹೋಗಲಾರರು. ಹೋಗುತ್ತಾರೆ ಎನ್ನುವುದು ಊಹೆಯಷ್ಟೆ ಜನಾರ್ಧನ ರೆಡ್ಡಿ-ಶ್ರೀರಾಮಲು ಒಂದು ಕಾಲದಲ್ಲಿ ಆತ್ಮೀಯ ಸ್ನೇಹಿತರು; ಅಣ್ಣ-ತಮ್ಮನಂತೆ ಚೆನ್ನಾಗಿದ್ದವರು. ಅವರಿಬ್ಬರ ನಡುವಿನ ಜಗಳವನ್ನು ಬಿಜೆಪಿಯ ನಾಯಕರೇ ಬಿಡಿಸಬೇಕು' ಎಂದು ಪ್ರತಿಕ್ರಿಯಿಸಿದರು. 'ನನ್ನ ಮೇಲೆ ಕ್ರಮ ಕೈಗೊಳ್ಳಲು ಧಮ್ ಬೇಕು' ಎಂಬ ಶಾಸಕ ಜಿ.ಟಿ.ದೇವೇಗೌಡ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, 'ಅವರು ದೊಡ್ಡವರಿದ್ದಾರೆ. ಪಕ್ಷದಲ್ಲಿ ತೀರ್ಮಾನಿಸಿ, ನಮ್ಮ ಶಕ್ತಿ ಏನೆಂಬುದನ್ನು ತೋರಿಸುತ್ತೇವೆ' ಎಂದರು.**

# ಮಿನಿ ನ್ಯೂಸ್

## ನೀರು ಕಾಯಿಸಲು ಹಚ್ಚಿದ ಬೆಂಕಿಗೆ ಸುಟ್ಟು ಕರಕಲಾದ ಮನೆ!

• **ಉದಯವಾಹಿನಿ, ಚಾಮರಾಜನಗರ**

ಚಾಮರಾಜನಗರದಲ್ಲಿ ಭೀಕರವಾದ ಅಗ್ನಿ ದುರಂತ ಸಂಭವಿಸಿದ್ದು, ಸ್ನಾನಕ್ಕೆಂದು ನೀರು ಕಾಯಿಸಲು ಹಚ್ಚಿದ್ದ ಬೆಂಕಿಯು ತೆಂಗಿನ ಮಟ್ಟ ರಾಶಿಗೆ ವ್ಯಾಪಿಸಿ ಮನೆಯೇ ಹೊತ್ತಿ ಉರಿದ ಘಟನೆ ಗುಂಡ್ಲುಪೇಟೆ ತಾಲ್ಲೂಕಿನ ಕೊಡಗಾಪುರದಲ್ಲಿ ನಿನ್ನೆ ರಾತ್ರಿ ನಡೆದಿದೆ. ಹೌದು ಕೊಡಗಾಪುರ ಗ್ರಾಮದ ವಿನೋದ್ ಎಂಬುವವರ ಮನೆಯಲ್ಲಿ ಘಟನೆ ಸಂಭವಿಸಿದೆ. ನೀರು ಕಾಯಿಸಲು ಬೆಂಕಿ ಹಂಚಿದ್ದ ವೇಳೆ ಹತ್ತಿರದಲ್ಲೇ ಇದ್ದ ತೆಂಗಿನಕಾಯಿ ಮಟ್ಟೆ ರಾಶಿಗೂ ಬೆಂಕಿ ಹೊತ್ತಿಕೊಂಡು ಬಳಿಕ ಮನೆಯೇ ಹೊತ್ತಿ ಉರಿದಿದೆ. ಬೆಂಕಿ ಹತ್ತಿಕೊಳ್ಳುತ್ತಿದ್ದಂತೆ ಮನೆಯಲ್ಲಿದ್ದ ಕುಟುಂಬದ ಸದಸ್ಯರೆಲ್ಲರೂ ಮನೆಯಿಂದ ಹೊರಗೋಡಿ ಬಂದು ಪ್ರಾಣ ಉಳಿಸಿಕೊಂಡಿದ್ದಾರೆ. ಅದೃಷ್ಟವಶಾತ್ ಘಟನೆಯಲ್ಲಿ ಯಾವುದೇ ರೀತಿಯಾಗಿ ಸಾವು ನೋವು ಸಂಭವಿಸಿಲ್ಲ ಎಂದು ವರದಿಯಾಗಿದೆ ಘಟನಾ ಸ್ಥಳಕ್ಕೆ ಅಗ್ನಿ ಶಾಮಕ ಸಿಬ್ಬಂದಿ ಹಾಗೂ ಸ್ಥಳೀಯರು ಬೆಂಕಿ ನಂದಿಸಿ ಹೆಚ್ಚಿನ ಅನಾಹುತ ತಪ್ಪಿಸಿದ್ದಾರೆ. ಮನೆಯಲ್ಲಿದ್ದ ಸರಕುಗಳು ಬೆಂಕಿಗೆ ಆಹುತಿಯಾಗಿದೆ. ಬೇಗೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

## ಮೈಕ್ರೋ ಫೈನಾನ್ಸ್ ಕಿರುಕುಳ ವಿಚಾರ ಕಠಿಣ ಕಾನೂನು ಕ್ರಮ ಜಾರಿಗೆ ಚಿಂತನೆ

• **ಉದಯವಾಹಿನಿ, ಮಂಡ್ಯ**

ರಾಜ್ಯದಲ್ಲಿ ಮೈಕ್ರೋ ಫೈನಾನ್ಸ್ ಕಿರುಕುಳದಿಂದ ಬೇಸತ್ತು ಅದೆಷ್ಟೋ ಜನರು ಇದೀಗ ಮನೆ ತೊರೆದಿದ್ದಾರೆ. ಅಲ್ಲದೆ ಹಲವರು ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ. ಈ ವಿಚಾರವಾಗಿ ಮಂಡ್ಯದಲ್ಲಿ ಕೃಷಿ ಸಚಿವ ಚಲುವರಾಯಸ್ವಾಮಿ ಪ್ರತಿಕ್ರಿಯಿಸಿ ಜನರಿಗೆ ತೊಂದರೆ ನೀಡುವ ಮೈಕ್ರೋ ಫೈನಾನ್ಸ್ ಗಳ ವಿರುದ್ಧ ಕಠಿಣ ಕ್ರಮ ಜಾರಿ ಮಾಡಲು ಚಿಂತನೆ ನಡೆಸಲಾಗುತ್ತಿದೆ ಎಂದು ತಿಳಿಸಿದರು. ಮಂಡ್ಯದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಮೈಕ್ರೋ ಫೈನಾನ್ಸ್ ಕಿರುಕುಳ ಸಂಬಂಧ ಕಠಿಣ ಕಾನೂನು ಕ್ರಮ ಜಾರಿ ಮಾಡಲು ಚಿಂತನೆ ನಡೆಯುತ್ತಿದೆ. ಬಡ್ಡಿ ಹಾಕಿ ತೊಂದರೆ ಕೊಟ್ಟರೆ ಕ್ರಮ ಕೈಗೊಳ್ಳುತ್ತೇವೆ. ಮಂಡ್ಯದಲ್ಲೂ ಈ ಬಗ್ಗೆ ಎಸ್ಪಿಗೆ ನಿರ್ದೇಶನ ನೀಡಿದ್ದೇವೆ. ಜನ ಈ ಬಗ್ಗೆ ಜಾಗೃತರಾಗಬೇಕು. ನಾವು ಬಡ್ಡಿ ರಹಿತ ಸಾಲ ನೀಡುತ್ತಿದ್ದೇವೆ. PLD ಬ್ಯಾಂಕ್, ಸೊಸೈಟಿ, ಇತರೆ ಬ್ಯಾಂಕ್‌ಗಳ ಮೂಲಕ ಸಾಲ ನೀಡಲಾಗುತ್ತೆ. ಹಾಗಾಗಿ ಮೈಕ್ರೋ ಫೈನಾನ್ಸ್ ಗೆ ಹೋಗೋದನ್ನು ಜನರು ನಿಲ್ಲಿಸಬೇಕು ಎಂದು ಸಚಿವರು ತಿಳಿಸಿದರು.

## ಕನಿಷ್ಠ ವೇತನ ರೂ.31 ಸಾವಿರ ನಿಗದಿಗೆ ಆಗ್ರಹ

• **ಉದಯವಾಹಿನಿ, ಮಡಿಕೇರಿ**

ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಒತ್ತಾಯಿಸಿ ಕರ್ನಾಟಕ ರಾಜ್ಯ ಸರ್ಕಾರಿ ಹಾಸ್ಟೆಲ್ ಮತ್ತು ವಸತಿ ಶಾಲಾ ಹೊರಗುತ್ತಿಗೆ ನೌಕರರ ಸಂಘದ ಕೊಡಗು ಜಿಲ್ಲಾ ಸಮಿತಿ ನೇತೃತದಲ್ಲಿ ನೌಕರರು ಇಲ್ಲಿನ ಜಿಲ್ಲಾಧಿಕಾರಿ ಕಚೇರಿ ಮುಂಭಾಗ ಪ್ರತಿಭಟನೆ ನಡೆಸಿದರು. ಈ ವೇಳೆ ಮಾತನಾಡಿದ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಕೆ.ಹನುಮೇಗೌಡ, 'ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತ ಕಲ್ಯಾಣ ಇಲಾಖೆ, ಪರಿಶಿಷ್ಟ ಕಲ್ಯಾಣ ಇಲಾಖೆ ಹಾಗೂ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳಲ್ಲಿ ಕಳೆದ 15-20 ವರ್ಷಗಳಿಂದ ನೌಕರರು ಕಡಿಮೆ ಸಂಬಳಕ್ಕೆ ಯಾವುದೇ ಭದ್ರತೆ ಇಲ್ಲದೆ ದುಡಿಯುತ್ತಿದ್ದಾರೆ. ಇವರ ಸಮಸ್ಯೆಗಳಿಗೆ ಸರ್ಕಾರ ಸ್ಪಂದಿಸಿಲ್ಲ' ಎಂದು ಖಂಡಿಸಿದರು. ಕನಿಷ್ಠ ವೇತನ ರೂ. 31 ಸಾವಿರ ನಿಗದಿ ಮಾಡಬೇಕು, ನೇರವಾಗಿ ಇಲಾಖೆಯಿಂದ ವೇತನ ನೀಡಬೇಕು, ಸಮಾನ ಕೆಲಸಕ್ಕೆ ಸಮಾನ ವೇತನ ಬೇಕು, ಸಿಬ್ಬಂದಿಗಳ ಸಂಖ್ಯೆ ಕಡಿತ ಆದೇಶ ವಾಪಸ್ ಪಡೆಯಬೇಕು, ಬೀದರ್ ಮಾದರಿಯ ಸಹಕಾರ ಸಂಘವನ್ನು ಎಲ್ಲಾ ಜಿಲ್ಲೆಗಳಿಗೆ ವಿಸ್ತರಣೆ ಮಾಡಬೇಕು, ವಾರದ ರಜೆ, ಬಾಕಿ ಸಂಬಳ, ಹೆರಿಗೆ ರಜೆಯ ವೇತನವನ್ನು ನೀಡಬೇಕು, ಕೆಲಸದ ಸಮಯವನ್ನು ನಿಗದಿಪಡಿಸಬೇಕು, ಇಎಸ್‌ಐ ಮತ್ತು ಪಿಎಫ್ ನೀಡಬೇಕು ಸೇರಿದಂತೆ ವಿವಿಧ ಬೇಡಿಕೆಗಳನ್ನು ತಕ್ಷಣ ಈಡೇರಿಸಬೇಕು ಎಂದು ಅವರು ಒತ್ತಾಯಿಸಿದರು. ಒಂದು ವೇಳೆ ಸರ್ಕಾರ ನಿರ್ಲಕ್ಷ್ಯ ತೋರಿದರೆ, ಮುಂದಿನ ಬಜೆಟ್ ಅಧಿವೇಶನದ ವೇಳೆ ಬೆಂಗಳೂರಿನಲ್ಲಿ ಪ್ರತಿಭಟನೆ ಮಾಡಲಾಗುವುದು ಎಂದರು.

## ತಾಲ್ಲೂಕಿನ ನಂಗಲಿ ಪೊಲೀಸರಿಗೆ ಇಲ್ಲ ವಸತಿ ಸೌಕರ್ಯ

• **ಉದಯವಾಹಿನಿ, ಮುಳಬಾಗಿಲು**

ತಾಲ್ಲೂಕಿನ ನಂಗಲಿ ಪೊಲೀಸ್ ಠಾಣೆ ಸಿಬ್ಬಂದಿಗೆ ನೂತನ ವಸತಿ ಗೃಹಗಳ ಕಟ್ಟಡ ನಿರ್ಮಾಣಕ್ಕಾಗಿ ಮೂರು ವರ್ಷಗಳ ಹಿಂದೆಯೇ ಹಳೆಯ ಕಟ್ಟಡಗಳನ್ನು ತೆರವು ಮಾಡಿಸಲಾಗಿದೆ.

ಆದರೆ, ಈವರೆಗೆ ವಸತಿ ಗೃಹಗಳ ನಿರ್ಮಾಣವಿರಲಿ, ಕಾಮಗಾರಿಯೂ ಆರಂಭವಾಗಿಲ್ಲ.ನೆರೆಯ ಆಂಧ್ರ ಪ್ರದೇಶಕ್ಕೆ ಹೊಂದಿಕೊಂಡಂತಿರುವ ಹಾಗೂ ರಾಷ್ಟ್ರೀಯ ಹೆದ್ದಾರಿ 75ರ ಪಕ್ಕದಲ್ಲಿ 60 ವರ್ಷಗಳ ಹಿಂದೆ ನಂಗಲಿ ಪೊಲೀಸ್ ಠಾಣೆ ನಿರ್ಮಿಸಲಾಗಿತ್ತು. ಆಗಿನಿಂದಲೂ ಪೊಲೀಸ್ ಸಿಬ್ಬಂದಿ ವಾಸಿಸುತ್ತಿರುವ ವಸತಿಗೃಹಗಳ ಕಟ್ಟಡಗಳು ಬಿರುಕು ಬಿಟ್ಟಿದ್ದು, ಮಳೆ ಬಂದಾಗ ಅವು ಸೋರುತ್ತಿದ್ದವು.

ಇದರಿಂದಾಗಿ ಗೋಡೆಗಳ ಮೇಲೆ ಸಸಿ ಬರಲು ಆರಂಭವಾಗಿತ್ತು. ಹೀಗಾಗಿ, ಪೊಲೀಸ್ ಸಿಬ್ಬಂದಿ ವಾಸಕ್ಕಾಗಿ ಹೊಸದಾಗಿ ಕಟ್ಟಡ ನಿರ್ಮಾಣ ಮಾಡುವ ನಿಟ್ಟಿನಲ್ಲಿ ಮೂರು ವರ್ಷಗಳ ಹಿಂದೆಯೇ ಹಳೆಯ ಕಟ್ಟಡಗಳನ್ನು ಕೆಡವಿ ಹಾಕಲಾಯಿತು. ಆದರೆ, ಈವರೆಗೆ ಕಟ್ಟಡ ಕಾಮಗಾರಿ ಆರಂಭವಾಗಿಲ್ಲ. ಇದರಿಂದಾಗಿ ವಸತಿ ಗೃಹ ನಿರ್ಮಾಣವಾಗಬೇಕಿದ್ದ ಸ್ಥಳವನ್ನು ಗಿಡಗಂಟಿಗಳು ಆವರಿಸಿಕೊಂಡಿವೆ. ಇನ್ನು ನಂಗಲಿ ಪೊಲೀಸ್ ಠಾಣೆಯಲ್ಲಿ ಸಬ್ ಇನ್‌ಸ್ಪೆಕ್ಟರ್ ಸೇರಿದಂತೆ 30 ಸಿಬ್ಬಂದಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಆದರೆ, ಠಾಣೆಯಲ್ಲಿ ಪುರುಷ ಮತ್ತು ಮಹಿಳಾ ಸಿಬ್ಬಂದಿಗೆ ಪ್ರತ್ಯೇಕ ಶೌಚಾಲಯದ ವ್ಯವಸ್ಥೆ ಇಲ್ಲ. ಜೊತೆಗೆ ನೀರಿನ ಸಂಪರ್ಕ ಸೇರಿದಂತೆ ಇನ್ನಿತರ ಮೂಲ ಸೌಕರ್ಯಗಳಿಲ್ಲ. ಜೊತೆಗೆ ದೂರು ಸೇರಿದಂತೆ ಇನ್ನಿತರ ಕಾರಣಗಳಿಗಾಗಿ ಪೊಲೀಸ್ ಠಾಣೆಗೆ ಬರುವ ಸಾರ್ವಜನಿಕರು ಸಹ ಸಿಬ್ಬಂದಿ ಬಳಸುವ ಶೌಚಾಲಯವನ್ನೇ ಬಳಸುವ ಅನಿವಾರ್ಯತೆ ಎದುರಾಗಿದೆ ಎನ್ನುತ್ತಾರೆ ಠಾಣೆಗೆ ಭೇಟಿ ನೀಡುವ ಸಾರ್ವಜನಿಕರು.

ಸರ್ಕಾರದ ನಿಯಮದ ಪ್ರಕಾರ ಸರ್ಕಾರಿ ನೌಕರರು ತಾವು ಕರ್ತವ್ಯ ನಿರ್ವಹಿಸುವ ಸ್ಥಳದಲ್ಲೇ ವಾಸ ಮಾಡಬೇಕು ಎಂಬ ಕಾನೂನಿದೆ. ಆದರೆ, ನೂತನ ವಸತಿ ಗೃಹಗಳ ನಿರ್ಮಾಣಕ್ಕಾಗಿ

# ರೈಲ್ವೆ: 800 ಕಿ.ಮೀ ದೂರದ ವಿಶಾಖಪಟ್ಟಣಕ್ಕೆ ಯಾದಗಿರಿ ಸೇರ್ಪಡೆ

## 2 ಜಿಲ್ಲೆಗಳನ್ನು ಹುಬ್ಬಳ್ಳಿಯಲ್ಲಿರುವ ನೈರುತ್ಯ ರೈಲ್ವೆ ವಲಯಕ್ಕೆ ಸೇರಿಸಬೇಕು, ಕನ್ನಡಿಗರಿಗೆ ಆಗುತ್ತಿರುವ ಅನ್ಯಾಯ ಸರಿಪಡಿಸಬೇಕು

• ಉದಯವಾಹಿನಿ ಯಾದಗಿರಿ

ಪಕ್ಕದ ರಾಜ್ಯದ ಸಿಕಂದರಾಬಾದ್‌ನ ದಕ್ಷಿಣ ಮಧ್ಯ ರೈಲ್ವೆ ವಲಯದಲ್ಲಿದ್ದ ಗುಂತಕಲ್ ರೈಲ್ವೆ ವಿಭಾಗ ದಲ್ಲಿ ಯಾದಗಿರಿ, ರಾಯಚೂರು ಜಿಲ್ಲೆಗಳನ್ನು ವಿಶಾಖ ಪಟ್ಟಣಕ್ಕೆ ಸೇರ್ಪಡೆ ಮಾಡಿರುವುದಕ್ಕೆ ಜಿಲ್ಲೆಯಲ್ಲಿ ತೀವ್ರ ಆಕ್ಷೇಪ ವ್ಯಕ್ತವಾಗಿದೆ.

ಈವರೆಗೆ ಗುಂತಕಲ್ ವಿಭಾಗದಲ್ಲಿದ್ದ ಯಾದಗಿರಿ, ರಾಯಚೂರು ಜಿಲ್ಲೆಯನ್ನು ಈಗ ನೂತನ ಆಂಧ್ರ ಪ್ರದೇಶದ ದಕ್ಷಿಣ ಕರಾವಳಿ ರೈಲ್ವೆ ವಲಯಕ್ಕೆ ಸೇರಿಸಲಾಗಿದೆ. ಸುಮಾರು 800 ಕಿ.ಮೀ ದೂರದಲ್ಲಿರುವ ವಿಶಾಖಪಟ್ಟಣದಲ್ಲಿ ಕೇಂದ್ರ ಕಚೇರಿ ಹೊಂದಿರುವ ವಲಯಕ್ಕೆ ಸೇರಿಸಿರುವುದಕ್ಕೆ ಆಕ್ರೋಶ ವ್ಯಕ್ತವಾಗಿದೆ.'ಹೊಸದಾಗಿ ಆರಂಭವಾಗಿರುವ ಆಂಧ್ರಪ್ರದೇಶದ ವಿಶಾಖಪಟ್ಟಣದಲ್ಲಿ ಕಾರ್ಯಾಲಯ ಹೊಂದಿರುವ ದಕ್ಷಿಣ ಕರಾವಳಿ ರೈಲ್ವೆ ವಲಯಕ್ಕೆ ರಾಯಚೂರು, ಯಾದಗಿರಿಯನ್ನು ಸೇರಿಸಿ 30 ಲಕ್ಷ ಕನ್ನಡಿಗರಿಗೆ ಅನ್ಯಾಯ ಮಾಡಲಾಗಿದೆ' ಎಂದು ಸಂಸದ ಜಿ.ಕುಮಾ ರನಾಯಕ ಆಕ್ರೋಶ ವ್ಯಕ್ತಪಡಿಸಿದ್ದಾರೆ.

**ಜಿಲ್ಲೆಯಲ್ಲಿ ತೀವ್ರ ಆಕ್ಷೇಪ**

ಈ ಕುರಿತು ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ ಅವರಿಗೆ ಪತ್ರ ಬರೆದಿರುವ ಕುಮಾರನಾಯಕ, ಯಾದಗಿರಿ, ರಾಯಚೂರು ಎರಡೂ ಜಿಲ್ಲೆಗಳನ್ನು ಹುಬ್ಬಳ್ಳಿಯಲ್ಲಿರುವ ನೈರುತ್ಯ ರೈಲ್ವೆ ವಲಯಕ್ಕೆ ಸೇರಿಸಬೇಕು. ಈ ಮೂಲಕ ಕನ್ನಡಿಗರಿಗೆ ನಿರಂತರವಾಗಿ ಆಗುತ್ತಿರುವ ಅನ್ಯಾಯ ಸರಿಪಡಿಸಬೇಕು ಎಂದು ಅವರು ಒತ್ತಾಯಿಸಿದ್ದಾರೆ. ಕಲಬುರಗಿಯಲ್ಲಿ ಪ್ರತ್ಯೇಕ ರೈಲ್ವೆ ವಿಭಾಗ ಮಾಡಬೇಕು ಎನ್ನುವ ಬೇಡಿಕೆ ದಶಕಗಳಿಂದ ಇದ್ದರೂ ಅದನ್ನು ಕಡೆಗಣಿಸಿ ಈ ಅವೈಜ್ಞಾನಿಕ ನಿರ್ಧಾರ ಕೈಗೊಂಡಿರುವುದು ಎಷ್ಟು ಮಾತ್ರ ಸರಿ' ಎಂದು ಪ್ರಶ್ನಿಸಿದ್ದಾರೆ. ನನಸಾಗದ ಪ್ರತ್ಯೇಕ ರೈಲ್ವೆ ವಲಯ ಯುಪಿಎ ಅವಧಿಯಲ್ಲಿ ರೈಲ್ವೆ ಸಚಿವರಾಗಿದ್ದ ಮಲ್ಲಿಕಾರ್ಜುನ ಖರ್ಗೆ ಅವರ ಅವಧಿಯಲ್ಲಿ ಕಲಬುರಗಿ ರೈಲ್ವೆ ವಲಯ ಆಗುತ್ತದೆ ಎಂದು ಹಲವರು ನಿರೀಕ್ಷೆ ಇಟ್ಟುಕೊಂಡಿದ್ದರು. ಇದು ಪ್ರಸ್ತಾವನೆಗೆ ಸೀಮಿತವಾಗಿದೆ. ಹೀಗಾಗಿ ಕಲಬುರಗಿಯಲ್ಲಿ



ಉದಯವಾಹಿನಿ ಚಿತ್ರ

ಪ್ರತ್ಯೇಕ ರೈಲ್ವೆ ವಲಯ ಮಾಡಬೇಕು ಎನ್ನುವ ಬೇಡಿಕೆ ಇದ್ದರೂ ಅದನ್ನು ಕಡೆಗಣಿಸಿ ಅವೈಜ್ಞಾನಿಕ ನಿರ್ಧಾರ ಕೈಗೊಳ್ಳಲಾಗಿದೆ ಎಂಬ ಆರೋಪ ಕೇಳಿ ಬರುತ್ತಿದೆ. ಜಿ.ಕುಮಾರ ನಾಯಕ, ರಾಯಚೂರು ಸಂಸದಗುಂತಕಲ್ ವಲಯದಲ್ಲಿದ್ದ ರಾಯಚೂರು ಯಾದಗಿರಿಯನ್ನು ವಿಶಾಖಪಟ್ಟಣಕ್ಕೆ ಸೇರ್ಪಡೆ ಮಾಡಿದ್ದು ಸರಿಯಲ್ಲ. ಈಗಾಗಲೇ ಈ ಬಗ್ಗೆ ಸಚಿವರಿಗೆ ಮನವಿ ಸಲ್ಲಿಸಲಾಗಿದೆ. ಮುಂದಿನ ಕ್ರಮ ನೋಡಿಕೊಂಡು ಪರಿಶೀಲಿಸಲಾಗುವುದು ರಾಜಾ ಅಮರೇಶ ನಾಯಕ, ರಾಯಚೂರು ಮಾಜಿ ಸಂಸದಕಲಬುರಗಿ ರೈಲ್ವೆ ವಿಭಾಗ ಮಾಡಬೇಕಿತ್ತು. ಅದು ಬಿಟ್ಟು ದೂರದ

### ಅತಿ ಹೆಚ್ಚು ಆದಾಯ

ರಾಜಧಾನಿ ಎಕ್ಸ್‌ಪ್ರೆಸ್ ಪದ್ಮಾವತಿ ಎಕ್ಸ್‌ಪ್ರೆಸ್ ರಾಜ್ಕೋಟ್ ಎಕ್ಸ್‌ಪ್ರೆಸ್ ಡ್ರಾವಾಕಾ ಎಕ್ಸ್ ಪ್ರೆಸ್ ವಾಸ್ಕೋ ಎಕ್ಸ್ ಪ್ರೆಸ್ ಏಕತಾ ಎಕ್ಸ್‌ಪ್ರೆಸ್ ಸಾಯಿನಗರ ಎಕ್ಸ್‌ಪ್ರೆಸ್ ಮಧುರೈ ಎಕ್ಸ್‌ಪ್ರೆಸ್ ತಿರುಪತಿ ಹಮ್-ಶಫರ್ ಎಕ್ಸ್‌ಪ್ರೆಸ್ ಗೋರಖ್‌ಪುರ-ಅಹಮದಾಬಾದ್ ಹಮ್-ಶಫರ್ ಎಕ್ಸ್‌ಪ್ರೆಸ್ ರೈಲುಗಳು ಯಾದಗಿರಿ ರೈಲು ನಿಲ್ದಾಣದ ಮೂಲಕ ಸಾಗುತ್ತಿವೆ. ಸಾರ್ವಜನಿಕ ಬೇಡಿಕೆಯ ಮೇರೆಗೆ ಯಾದಗಿರಿಯಲ್ಲಿ ನಿಲುಗಡೆ ಮಾಡಬೇಕು ಎಂದು ಒತ್ತಾಯಿಸಿದ್ದಾರೆ. ಯಾದಗಿರಿ ರೈಲ್ವೆ ನಿಲ್ದಾಣದಿಂದ ಅತಿ ಹೆಚ್ಚು ಆದಾಯ ಬರುತ್ತಿದ್ದು ಕೂಡಲೇ ರೈಲುಗಳ ಸೌಲಭ್ಯಗಳನ್ನು ವ್ಯವಸ್ಥೆ ಮಾಡಲು ವಿನಂತಿಸಿದ್ದಾರೆ.

**800 ಕಿ.ಮೀ ದೂರದ ವಿಶಾಖಪಟ್ಟಣಕ್ಕೆ ಸೇರಿಸಿರುವುದಕ್ಕೆ ನಮ್ಮ ಆಕ್ಷೇಪವಿದೆ ರೈಲುಗಳು ನಿಲುಗಡೆ, ಮಾಜಿ ಸಂಸದ ಪತ್ರ, ಯಾದಗಿರಿ ರೈಲ್ವೆ ನಿಲ್ದಾಣ ಇದ್ದು ಹಲವು ವರ್ಷಗಳಿಂದ ಕೆಲ ರೈಲುಗಳು ನಿಲುಗಡೆಯಾಗುತ್ತಿಲ್ಲ. ಹೀಗಾಗಿ ಯಾದಗಿರಿಯಲ್ಲಿ ರೈಲುಗಳನ್ನು ನಿಲುಗಡೆ ಮಾಡಬೇಕು ಎಂದು ಒತ್ತಾಯಿಸಿ ರಾಯಚೂರು ಮಾಜಿ ಸಂಸದ ರಾಜಾ ಅಮರೇಶ ನಾಯಕ ಅವರು ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ ಮತ್ತು ರಾಜ್ಯ ರೈಲ್ವೆ ಸಚಿವ ವಿ.ಸೋಮಣ್ಣ ಅವರಿಗೆ ಪತ್ರ ಬರೆದಿದ್ದಾರೆ.**

ವಲಯಕ್ಕೆ ಸೇರಿಸಲಾಗಿದೆ. ಈಗಾಗಲೇ ಸಚಿವರಿಗೆ ಪತ್ರ ಬರೆದು ಮನವರಿಕೆ ಮಾಡಲಾಗಿದೆ.ಕದಿನೇಶ ಜೈನ್, ವಾಣಿಜ್ಯ ಮತ್ತು ಕೈಗಾರಿಕೆ ಸಮಿತಿ ಅಧ್ಯಕ್ಷ ಯಾದಗಿರಿ ಕಲಬುರಗಿ ರೈಲ್ವೆ ವಿಭಾಗ ಮಾಡಿ ಅಥವಾ ನಮಗೆ ಹತ್ತಿರದಲ್ಲಿರುವ ಸೊಲ್ಲಾಪುರಕ್ಕೆ ಸೇರಿಸಬೇಕು.

## ಹೆಣ್ಣು ಮಕ್ಕಳು ಹೊರೆಯಲ್ಲ ಕುಟುಂಬದ ಅಭಿವೃದ್ಧಿಯ ಅಡಿಪಾಯ
### ಆರೋಗ್ಯ ಶಿಕ್ಷಣಾಧಿಕಾರಿ ಎನ್‌ಎಸ್ ಮಂಜುನಾಥ್

• ಉದಯವಾಹಿನಿ ಚಿತ್ರದುರ್ಗ

ಚಿತ್ರದುರ್ಗ ನಗರದ ನೆಹರು ನಗರ ಆರೋಗ್ಯ ಕೇಂದ್ರ ವ್ಯಾಪ್ತಿಯ ಜ್ಞಾನ ವಿಕಾಸ ಆಂಗ್ಲ ಮಾಧ್ಯಮ ಪ್ರೌಢ ಶಾಲೆಯ ಆವರಣದಲ್ಲಿ ಶುಕ್ರವಾರ ರಾಷ್ಟ್ರೀಯ ಹೆಣ್ಣು ಮಕ್ಕಳ ದಿನಾಚರಣೆಯನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಶಿಕ್ಷಣ ಇಲಾಖೆ ಸಹಾಯಯೋಗದೊಂದಿಗೆ ನಡೆಸಲಾಯಿತು. ತಾಲ್ಲೂಕ ಆರೋಗ್ಯ ಶಿಕ್ಷಣಾಧಿಕಾರಿ ಎನ್‌ಎಸ್ ಮಂಜುನಾಥ್ ಮಾತನಾಡಿ ಭಾರತ ಸರ್ಕಾರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯವು 2008 ರಲ್ಲಿ ರಾಷ್ಟ್ರೀಯ ಹೆಣ್ಣು ಮಕ್ಕಳ ದಿನವನ್ನು ಸ್ಥಾಪಿಸಿತು, ಇದು ದಿನದ ಇತಿಹಾಸವನ್ನು ಪ್ರಾರಂಭಿಸಿತು. ಹೆಣ್ಣು ಮಕ್ಕಳು ಭಾರತೀಯ ಸಮಾಜದಲ್ಲಿ ನಿಯಮಿತವಾಗಿ ತಾರತಮ್ಯ ಮತ್ತು ಅನ್ಯಾಯವನ್ನು ಅನುಭವಿಸುತ್ತಾರೆ.

ಅವರು ತಮ್ಮ ಶಿಕ್ಷಣವನ್ನು ಮುಂದುವರಿಸಲು ಆಗಾಗ್ಗೆ ಅವಕಾಶವನ್ನು ನಿರಾಕರಿಸುತ್ತಾರೆ ಮತ್ತು ಚಿಕ್ಕ ವಯಸ್ಸಿನಿಂದಲೇ ಮನೆಯ ಸುತ್ತಲೂ ಸಹಾಯ ಮಾಡಬೇಕಾಗುತ್ತದೆ. ಹೆಣ್ಣು ಮಕ್ಕಳ ಉಳಿವಿಗಾಗಿ ಹೆಣ್ಣು ಮಕ್ಕಳ ರಕ್ಷಣೆಗಾಗಿ ಸರ್ಕಾರವು ಹಲವಾರು ಯೋಜನೆಗಳನ್ನ ಮುಖ್ಯವಾಗಿ ಚಿಕಿತ್ಸಾಲಯಗಳಲ್ಲಿ ಗರ್ಭಾವಸ್ಥೆಯಲ್ಲಿ ಲಿಂಗ ತಾರತಮ್ಯವನ್ನು ಸರ್ಕಾರವು ನಿಷೇಧಿಸಿದೆ. ಶಿಕ್ಷಣ ಮತ್ತು ಸಮಾನ ಅವಕಾಶವನ್ನು ಉತ್ತೇಜಿಸಲು ಸರ್ಕಾರವು 14 ವರ್ಷದವರೆಗೆ ಗಂಡು ಮತ್ತು ಹೆಣ್ಣು ಮಕ್ಕಳಿಗೆ ಉಚಿತ ಮತ್ತು ಅಗತ್ಯವಿರುವ



ಉದಯವಾಹಿನಿ ಚಿತ್ರ

**ರಾಷ್ಟ್ರೀಯ ಹೆಣ್ಣು ಮಕ್ಕಳ ದಿನಾಚರಣೆ**

ಶಿಕ್ಷಣವನ್ನು ನೀಡುತ್ತದೆ .

ದೌರ್ಜನ್ಯ ಮತ್ತು ಶೋಷಣೆಗೆ ಬಲಿಯಾದ ಯುವತಿಯರನ್ನು ರಕ್ಷಿಸಲು ಈ ದಿನವನ್ನು ಮೀಸಲಿಡಲಾಗಿದೆ. ಮಕ್ಕಳನ್ನು ಅನೈತಿಕ ಪದ್ಧತಿಗಳಿಂದ ರಕ್ಷಿಸಲು ಭಾರತ ಬಾಲ್ಯ ವಿವಾಹವನ್ನು ನಿಷೇಧಿಸಿದೆ. ಮಹಿಳೆಯರು ಮತ್ತು ಯುವತಿಯರನ್ನು ರಕ್ಷಿಸಲು ಸರ್ಕಾರವು ಸತಿ ವಿರೋಧಿ ಮತ್ತು ಎಂಟಿಪಿ ವಿರೋಧಿ ಕಾನೂನುಗಳನ್ನು ಜಾರಿಗೆ ತಂದಿದೆ.ಹೆಣ್ಣು ಮಕ್ಕಳ ಸುರಕ್ಷತೆ, ಆರೋಗ್ಯ ಮತ್ತು ಶಿಕ್ಷಣವನ್ನು ಉತ್ತೇಜಿಸುವುದು ರಾಷ್ಟ್ರೀಯ ಹೆಣ್ಣು ಮಕ್ಕಳ ದಿನದ ಗುರಿಯಾಗಿದೆ.

ಹೆಣ್ಣು ಮಕ್ಕಳು ಹೊರೆಯಲ್ಲ ಕುಟುಂಬದ ಅಭಿವೃದ್ಧಿಯ ಅಡಿಪಾಯ ಎಂದರು, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಮುಗಪ್ಪ ಮಾತನಾಡಿ ಬೇಟಿ ಪಡಾವೋ ಭೇಟಿ ಬಚಾವೋ ಕಾರ್ಯಕ್ರಮದ ಬಗ್ಗೆ ಸುಕನ್ಯಾ ಸಮೃದ್ಧಿ ಯೋಜನೆ ಪೋಸ್ಟ್ ಆಫೀಸ್ ಖಾತೆಯನ್ನು ತೆರೆಯುವುದರ ಬಗ್ಗೆ ಮಾಹಿತಿ ಶಿಕ್ಷಣ ನೀಡಿದರು.

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಮೇಲ್ವಿಚಾರಣಾ ಅಧಿಕಾರಿ ಮಂಜುಳಾರವರು ಮಕ್ಕಳಿಗೆ ಪ್ರತಿಜ್ಞಾ ವಿಧಿಯನ್ನು ಬೋಧಿಸಿದರು.

ಕಾರ್ಯಕ್ರಮದಲ್ಲಿ ಲಿಂಗ ಪತ್ತೆ ತಡೆ ಶಾಸನ ಲಿಂಗಾನುಪಾತದಲ್ಲಿ ಆಗಿರುವ ವ್ಯತ್ಯಾಸವನ್ನು ಕುರಿತು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಹನುಮಂತ ಗೌಡ ಪೂಜಾರ್ ತಿಳಿಸಿದರು. ಕಾರ್ಯಕ್ರಮದಲ್ಲಿ ನೆಹರು ನಗರ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾಕ್ಟರ್ ಬಿಲಾಲ್, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಗುರುಮೂರ್ತಿ ಗೋಪಾಲಕೃಷ್ಣ ಶ್ರೀನಿವಾಸ್ ಮೂರ್ತಿ ಜ್ಞಾನವಿಕಾಸ ಶಾಲೆಯ ಕಾರ್ಯದರ್ಶಿಗಳಾದ ಮನೋಜ್ ಎಂ ಮುಖ್ಯ ಶಿಕ್ಷಕರಾದ ಮಾರುತಿ ಬಿ ಎಸ್ ದೈಹಿಕ ಶಿಕ್ಷಕರು ರುದ್ರಪ್ಪ ಜಿಕೆ ಸಹ ಶಿಕ್ಷಕರು ಮಂಜುನಾಥ್ ಅಶೋಕ್ ಸುಮಿತ್ರ ಮಂಜುಳಾ ನಾಜಿಮಾ ಆರ್ಶಿಯ ಗೀತಾ ಪವಿತ್ರ ಮತ್ತು 200 ಕ್ಕೆ ಹೆಚ್ಚು ವಿದ್ಯಾರ್ಥಿನಿಯರು ಭಾಗವಹಿಸಿದ್ದರು. ಕೊನೆಯಲ್ಲಿ ವಿದ್ಯಾರ್ಥಿನಿಯರಿಗೆ ಸಿಹಿ ಹಂಚಲಾಯಿತು.

## 15 ವರ್ಷಗಳಿಂದ ನನೆಗುದಿಗೆ ಬಿದ್ದ 'ಗುರು ಸದನ'


ಉದಯವಾಹಿನಿ ಚಿತ್ರ

• ಉದಯವಾಹಿನಿ ಮುದಗಲ್

ಹೋಬಳಿಯಲ್ಲಿ ವಿವಿಧೆಡೆ ಗುರು ಸದನಗಳು ನಿರ್ಮಾಣ ಹಂತದಲ್ಲಿದ್ದು, 15 ವರ್ಷಗಳಿಂದ ನನೆಗುದಿಗೆ ಬಿದ್ದಿರುವುದರಿಂದ ನಿರ್ಮಾಣ ಹಂತದಲ್ಲಿಯೇ ಕಟ್ಟಡಗಳು ಹಾಳಾಗುತ್ತಿವೆ. ಮುದಗಲ್‌ನ ವೆಂಕಟರಾಯನ ಪೇಟೆಯಲ್ಲಿ ನಿರ್ಮಾಣವಾಗುತ್ತಿರುವ ಗುರು ಸದನ 15 ವರ್ಷಗಳಿಂದ ನನೆಗುದಿಗೆ ಬಿದ್ದಿದೆ.

ನಾಗರಾಳ ಗ್ರಾಮದಲ್ಲಿ ಇಳಕಲ್ ರಸ್ತೆಯಲ್ಲಿ ನಿರ್ಮಾಣವಾಗುತ್ತಿರುವ ಗುರು ಸದನ 16 ವರ್ಷಗಳಿಂದ ನನೆಗುದಿಗೆ ಬಿದ್ದಿದೆ. ಕಟ್ಟಡದಲ್ಲಿ ಹಾಗೂ ಕಟ್ಟಡದ ಹೊರ ಭಾಗದಲ್ಲಿ ಜಾಲಿ ಮುಳ್ಳು ಕಂಟಿ ಬೆಳೆದು ನಿಂತಿವೆ. ನಾಗರಾಳ ಗ್ರಾಮದ ಗುರು ಸದನದ ಕಟ್ಟಡ 2005-06ನೇ ಸಾಲಿನ ಎಸ್.ಎಸ್.ಎ ಯೋಜನೆಯಡಿಯಲ್ಲಿ 18 ಲಕ್ಷದಲ್ಲಿ ನಿರ್ಮಿಸುತ್ತಿರುವ ಗುರು ಸದನ ಕಟ್ಟಡ 19 ವರ್ಷ ಕಳೆದರೂ ಕಾಮಗಾರಿ ಪೂರ್ಣಗೊಂಡಿಲ್ಲ. ನಿರ್ಮಾಣ ಹಂತದಲ್ಲಿಯೇ ಸಿಮೆಂಟ್, ಇಟ್ಟಂಗಿ ಉದುರಿ ಬೀಳುತ್ತಿವೆ.ಕಬ್ಬಿಣದ ಕಂಬಿಗಳು ಹೊರ ಬಿದ್ದಿವೆ. ಕಟ್ಟಡದ ಸುತ್ತಲೂ ಮಳ್ಳು ಕಂಟಿ ಬೆಳೆದು ನಿಂತಿವೆ.ಶೈಕ್ಷಣಿಕ ಪ್ರಗತಿಯಲ್ಲಿ ಲಿಂಗಸುಗೂರು ತಾಲ್ಲೂಕು ಜಿಲ್ಲೆಯಲ್ಲಿ ಪ್ರಥಮ ಸ್ಥಾನದಲ್ಲಿದೆ. ಆದರೆ, ಗುರು ಸದನ ಇಲ್ಲದ್ದರಿಂದ ಶಿಕ್ಷಕರು ದುಬಾರಿ ಬಾಡಿಗೆ ನೀಡಿ ಖಾಸಗಿ ವ್ಯಕ್ತಿಗಳ ಮನೆಯಲ್ಲಿ ವಾಸ ಮಾಡುವಂತಾಗಿದೆ ಎಂದು ಹೋಬಳಿಯಲ್ಲಿನ ಹಲವು ಶಿಕ್ಷಕರ ನೋವಿನ ನುಡಿ. ಮುದಗಲ್ ವೆಂಕಟರಾಯನ ಪೇಟೆಯ ಹಿರಿಯ ಪ್ರಾಥಮಿಕ ಶಾಲೆ ಹಿಂಭಾಗದಲ್ಲಿ ನಿರ್ಮಾಣವಾಗುತ್ತಿರುವ ಗುರು ಸದನ ಈವರೆಗೂ ಚಾವಣಿ ಹಂತ ತಲುಪಿಲ್ಲ.

ಈ ಗುರು ಸದನದ ಕಟ್ಟಡದ ನಿರ್ಮಾಣದ ಜವಾಬ್ದಾರಿ ನಿರ್ಮಿತಿ ಕೇಂದ್ರಕ್ಕೆ ನೀಡಲಾಗಿತ್ತು. ಸರ್ಕಾರದಿಂದ ಬಿಡುಗಡೆಯಾದ ಅನುದಾನ ನೀರಿನಲ್ಲಿ ಹೋಮ ಮಾಡಿದಂತಾಗಿದೆ. ಹೊಸದಾಗಿ ವಿವಿಧೆಡೆ ಗುರು ಸದನ ನಿರ್ಮಾಣಕ್ಕೆ ಸರ್ಕಾರ ಮುಂದೆ ಬಂದಿಲ್ಲ. ನಿರ್ಮಾಣ ಹಂತದಲ್ಲಿರುವ ಕಟ್ಟಡಗಳನ್ನು ಪೂರ್ಣಗೊಳಿಸಬೇಕೆಂಬ ಆಲೋಚನೆ ಸರ್ಕಾರದ ಮುಂದೆ ಇಲ್ಲ ಎನ್ನುವಂತ ಕಾಣುತ್ತಿದೆ ಎಂದು ಶಿಕ್ಷಕರು ಹೇಳುತ್ತಿದ್ದಾರೆ.

## 2.3 ಕೋಟಿ ರೂ. ಎಗರಿಸಿದ ಸೈಬರ್ ವಂಚಕರು

• ಉದಯವಾಹಿನಿ, ವಿಜಯನಗರ

ವಿಜಯನಗರ ಮತ್ತು ಬಳ್ಳಾರಿ ಅವಳಿ ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬಳ್ಳಾರಿ ಜಿಲ್ಲಾ ಸಹಕಾರ ಕೇಂದ್ರ, (ಬಿಡಿಸಿಸಿ) ಬ್ಯಾಂಕ್ನ ಕೆಲವು ಶಾಖೆಗಳಲ್ಲಿ ಗ್ರಾಹಕರು ತಮ್ಮ ಖಾತೆಗೆ ಹಣ ಜಮೆ ಆಗುತ್ತಿಲ್ಲ ಎಂದು ದೂರುಗಳನ್ನು ಸಲ್ಲಿಸಿದ ನಂತರ ದೊಡ್ಡ ಮೊತ್ತದ ಹಣ ದರೋಡೆಯಾಗಿರುವುದು ಪತ್ತೆಯಾಗಿದೆ.

ಪೊಲೀಸರು ನೀಡಿದ ಮಾಹಿತಿ ಪ್ರಕಾರ, ಅಪರಾಧಿಯು ಬ್ಯಾಂಕ್ ಆರ್ ಟಿಜಿಎಸ್ /ನೆಫ್ಟ್ ವಹಿವಾಟು ವ್ಯವಸ್ಥೆಯನ್ನು ಗುರಿಯಾಗಿಸಿಕೊಂಡಿದ್ದಾನೆ. ಬಿಡಿಸಿಸಿ ಬ್ಯಾಂಕ್‌ನಿಂದ ಐಡಿಬಿಐ ಬ್ಯಾಂಕ್‌ಗೆ ವಾಡಿಕೆಯಂತೆ ಹಣ ವರ್ಗಾವಣೆಯ ಸಮಯದಲ್ಲಿ, 2025 ರ ಜನವರಿ 10 ರಂದು ಹ್ಯಾಕರ್‌ಗಳು ಎಕ್ಸ್‌ಎಂಎಲ್ ಫೈಲ್‌ಗಳಲ್ಲಿನ ಖಾತೆ ಸಂಖ್ಯೆಗಳು ಮತ್ತು ಐಎಫ್‌ಎಸ್‌ಸಿ ಕೋಡ್‌ಗಳನ್ನು ಬದಲಾಯಿಸುವಲ್ಲಿ ಯಶಸ್ವಿಯಾಗಿದ್ದರು ಎಂಬುದು ಪ್ರಾಥಮಿಕ ತನಿಖೆಗಳಿಂದ ತಿಳಿದು ಬಂದಿದೆ ಎಂದು ಪೊಲೀಸರು ತಿಳಿಸಿರುವುದಾಗಿ ವರದಿಯಾಗಿದೆ. ಉತ್ತರದ ರಾಜ್ಯಗಳ ಬ್ಯಾಂಕ್ ಖಾತೆಗಳಿಗೆ ಹಣ ವರ್ಗಾವಣೆ! ಫಲಾನುಭವಿಗಳ ಹೆಸರುಗಳು ಬದಲಾಗದೆ ಉಳಿದಿದ್ದರೂ, ಯಾರ ಖಾತೆಗೆ ಹಣ ವರ್ಗಾವಣೆಯಾಗಬೇಕಿತ್ತೋ ಅವುಗಳ ಬದಲಿಗೆ ಉತ್ತರ ಭಾರತದ ವಿವಿಧ ರಾಜ್ಯಗಳಲ್ಲಿನ 25 ವಿಭಿನ್ನ ಖಾತೆಗಳಿಗೆ ಹಣ ಜಮೆ ಆಗಿರುವುದು ಗೊತ್ತಾಗಿದೆ.

**ದೊಡ್ಡ ಮೊತ್ತದ ಹಣ ದರೋಡೆ**

ತಡವಾಗಿ ಬೆಳಕಿಗೆ ಬಂದ ಆನ್‌ಲೈನ್ ದರೋಡೆ ಜನವರಿ 10 ರಿಂದ ಆನ್‌ಲೈನ್ ಹಣ ವರ್ಗಾವಣೆಗಳು ಉದ್ದೇಶಿತ ಗ್ರಾಹಕರ ಖಾತೆಗಳಿಗೆ ಜಮೆಯಾಗಿಲ್ಲ ಎಂಬ ಬಗ್ಗೆ, ಹಲವು ಶಾಖೆಗಳು ವರದಿ ಮಾಡಿದ ನಂತರ ಜನವರಿ 13ರಂದು ಆನ್‌ಲೈನ್ ದರೋಡೆ ಪ್ರಕರಣ ಬೆಳಕಿಗೆ ಬಂದಿದೆ.

5 ಲಕ್ಷ ರೂಪಾಯಿಗಿಂತ ಹೆಚ್ಚಿನ ಮೊತ್ತದ ವಹಿವಾಟುಗಳು ಇತರ ಖಾತೆಗಳಿಗೆ ಜಮೆ ಆಗಿರುವುದು ಬ್ಯಾಂಕ್ ತನಿಖೆಯಿಂದ ತಿಳಿದು ಬಂದಿದೆ.


ಘಟನೆ ಬೆಳಕಿಗೆ ಬಂದ ತಕ್ಷಣವೇ ಬ್ಯಾಂಕ್ ತನ್ನ ಆರ್‌ಟಿಜಿಎಸ್ /ನೆಫ್ಟ್ ಸೇವೆಗಳನ್ನು ಸ್ಥಗಿತಗೊಳಿಸಿದೆ ಮತ್ತು ಹೊಸಪೇಟೆ ಟೌನ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದೆ. ನಂತರ ಅವರು ಪ್ರಕರಣವನ್ನು ಬಳ್ಳಾರಿ ಸಿಇಎನ್ ಪೊಲೀಸ್ ಠಾಣೆಗೆ ವರ್ಗಾಯಿಸಿದ್ದಾರೆ.

## ಅಂಗವಿಕಲರ ವಿವಾಹ ಪ್ರೋತ್ಸಾಹ ಧನ: 35 ಫಲಾನುಭವಿಗಳಿಗೆ ಸಿಗದ ಸೌಲಭ್ಯ

• ಉದಯವಾಹಿನಿ ಹಾಸನ

ಹಲವು ವರ್ಷಗಳಿಂದ ಸಮರ್ಪಕವಾಗಿ ವಿತರಣೆಯಾಗುತ್ತಿದ್ದ ಅಂಗವಿಕಲರ ವಿವಾಹ ಪ್ರೋತ್ಸಾಹ ಧನ ಒಂದು ವರ್ಷದಿಂದ ವಿಳಂಬವಾಗಿದ್ದು ಫಲಾನುಭವಿಗಳು ನಿತ್ಯ ಕಚೇರಿಗೆ ಅಲೆಯುವಂತಾಗಿದೆ.2014-15ರಿಂದ ಜಾರಿಯಾದ ಯೋಜನೆ, ಈವರೆಗೆ ಸುಸೂತ್ರವಾಗಿ ನಡೆದುಕೊಂಡು ಬಂದಿದೆ. ಆದರೆ 2023-24ನೇ ಸಾಲಿನಿಂದ ಅನುದಾನ ದೊರೆಯದೇ ಅಧಿಕಾರಿಗಳೂ ಇಕ್ಕಟ್ಟಿಗೆ ಸಿಲುಕಿದ್ದಾರೆ.'ಫಲಾನುಭವಿಗಳು ನಿತ್ಯ ಕಚೇರಿಗೆ ಬಂದು, ಹಣ ಬಾರದಿರುವ ಕುರಿತು ವಿಚಾರಿಸುತ್ತಿದ್ದಾರೆ. ಸರ್ಕಾರಕ್ಕೆ ಪ್ರಸ್ತಾವ ಸಲ್ಲಿಸಿದ್ದೇವೆ. ಮಂಜೂರಾದ ತಕ್ಷಣ ಖಾತೆಗೆ ಜಮೆ ಮಾಡುತ್ತೇವೆ ಎಂಬ ಸಬೂಬು ಹೇಳಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ' ಎಂದು ಅಂಗವಿಕಲರ ಕಲ್ಯಾಣ ಇಲಾಖೆ ಸಿಬ್ಬಂದಿಯೊಬ್ಬರು ಅಳಲು ತೋಡಿಕೊಂಡರು. 2024-25ರಲ್ಲಿ ಜಿಲ್ಲೆಯಲ್ಲಿ ಒಟ್ಟು 42 ಫಲಾನುಭವಿಗಳು ಅರ್ಜಿಸಲ್ಲಿಸಿದ್ದು, ಕೇವಲ 7 ಫಲಾನುಭವಿಗಳಿಗೆ 3.50 ಲಕ್ಷ ವಿತರಿಸಲಾಗಿದೆ. ಇನ್ನೂ 35 ಫಲಾನುಭವಿಗಳಿಗೆ ಹಣ ದೊರೆಯಬೇಕಿದೆ.

**50 ಸಾವಿರ ಪ್ರೋತ್ಸಾಹ ಧನ:** ಅಂಗವಿಕಲ ಯುವತಿಯನ್ನು ಯುವಕ ಮದುವೆಯಾದರೆ ಅಥವಾ ಅಂಗವಿಕಲ ಯುವಕನನ್ನು ಯುವತಿ ಮದುವೆಯಾದರೆ ಪ್ರೋತ್ಸಾಹ ರೂಪದಲ್ಲಿ 50 ಸಾವಿರ


ಉದಯವಾಹಿನಿ ಚಿತ್ರ

ನೀಡಲಾಗುತ್ತದೆ. ಆ ಹಣದಿಂದ ಅವರು ಕೌಟುಂಬಿಕ ಜೀವನ ಕಟ್ಟಿಕೊಳ್ಳಬೇಕು.'ಅಂಗವಿಕಲರು ದಾಂಪತ್ಯ ಜೀವನದಿಂದ ವಂಚಿತರಾಗಬಾರದು ಎಂಬ ಉದ್ದೇಶದಿಂದ ಸರ್ಕಾರ ರೂಪಿಸಿದ ಯೋಜನೆಗೂ ಈಗ ಅನುದಾನ ಇಲ್ಲದಂತಾಗಿದೆ. ಸರ್ಕಾರವೇ ಗಮನ ನೀಡದಿದ್ದರೆ, ನಮ್ಮನ್ನು ನೋಡುವವರು ಯಾರು' ಎನ್ನುತ್ತಾರೆ ಫಲಾನುಭವಿಯೊಬ್ಬರು.

2014-15ನೇ ಸಾಲಿನಿಂದ ಅಂಗವಿಕಲರ ವಿವಾಹ ಪ್ರೋತ್ಸಾಹ ಧನ ಯೋಜನೆ ಜಾರಿಯಲ್ಲಿದ್ದು ಜಿಲ್ಲೆಯಲ್ಲಿ ಇಲ್ಲಿಯವರೆಗೂ 197 ಮಂದಿ ಫಲಾನುಭವಿಗಳಿಗೆ ಪ್ರೋತ್ಸಾಹ ಧನ ವಿತರಿಸಲಾಗಿದೆ' ಎಂದು ಅಂಗವಿಕಲರ ಕಲ್ಯಾಣ ಇಲಾಖೆ ಉಪ ನಿರ್ದೇಶಕಿ ಅನುಪಮಾ 2014-15005 B 2024-250 98.50 ಸರ್ಕಾರದಿಂದ ಬಿಡುಗಡೆಯಾಗಿದ್ದು ಅದನ್ನು 197 ಫಲಾನುಭವಿಗಳ ಖಾತೆಗೆ ಜಮೆ ಮಾಡಲಾಗಿದೆ' ಎಂದು ತಿಳಿಸಿದರು.

**ಈ ಯೋಜನೆಯಡಿ ಅರ್ಜಿ ಸಲ್ಲಿಸುವವರು ಹೊರ ಜಿಲ್ಲೆಯವರಾಗಿದ್ದರೆ ಒಂದು ಕಡೆ ಮಾತ್ರ ಅರ್ಜಿ ಸಲ್ಲಿಸಬೇಕು. ಯುವಕ ಸ್ಥಳೀಯ ಜಿಲ್ಲೆಯವರಾಗಿ, ಯುವತಿ ಹೊರ ಜಿಲ್ಲೆಯವರಾಗಿದ್ದರೆ ಆ ಸಂಬಂಧ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಿಂದ ಪ್ರಮಾಣಪತ್ರ, ಸಲ್ಲಿಸಬೇಕು. ಮದುವೆ ಪ್ರಮಾಣಪತ್ರ, ವಾಸಸ್ಥಳ ದೃಢೀಕರಣ ಪತ್ರ ಹಾಗೂ ಇಬ್ಬರ ಆಧಾರ್ ಕಾರ್ಡ್ ಸಲ್ಲಿಸಿದರೆ ಅಂಥವರಿಗೆ ಪ್ರೋತ್ಸಾಹ ಧನ ದೊರೆಯುತ್ತದೆ. ದಂಪತಿ ಹೆಸರಿನಲ್ಲಿ ಜಂಟಿ ಬ್ಯಾಂಕ್ ಖಾತೆ ತೆರೆದು ಹಣ ಪಾವತಿಸಲಾಗುತ್ತದೆ -ಅನುಪಮಾ, ಅಂಗವಿಕಲರ ಕಲ್ಯಾಣ ಇಲಾಖೆ ಉಪ ನಿರ್ದೇಶಕಿ**

ಆಯಾ ವರ್ಷದಲ್ಲಿ ಸರ್ಕಾರದಿಂದ ಅನುದಾನ ಬಿಡುಗಡೆ ಅನುಸಾರ ಪ್ರೋತ್ಸಾಹ ಧನ ವಿತರಿಸಲಾಗುತ್ತಿದೆ. ಪ್ರಸಕ್ತ ಸಾಲಿನಲ್ಲಿ 35 ಅರ್ಜಿಗಳು ಬಾಕಿ ಇವೆ' ಎಂದು ಹೇಳಿದರು.

## ರಾಜಕಾರಣದಲ್ಲಿ ವಿಶ್ವಾಸಾರ್ಹತೆ ಬಹಳ ಮುಖ್ಯ

• ಉದಯವಾಹಿನಿ, ಬಳ್ಳಾರಿ

ರಾಜಕಾರಣದಲ್ಲಿ ವಿಶ್ವಾಸಾರ್ಹತೆ ಬಹಳ ಮುಖ್ಯ. ಸ್ವಾಭಿಮಾನಕ್ಕೆ ಧಕ್ಕೆ ತರಬೇಡಿ ಎಂದು ಹೈಕಮಾಂಡ್ ನಾಯಕರ ಮುಂದೆ ಕೇಳಿಕೊಳ್ಳುತ್ತೇನೆ. ಹೈಕಮಾಂಡ್ ಇಟ್ಟ ನಂಬಿಕೆಗೆ ಚ್ಯುತಿ ಬಾರದಂತೆ ನಡೆದುಕೊಳ್ಳುತ್ತೇನೆ ಎಂದು ಮಾಜಿ ಸಚಿವ ಬಿ. ಶ್ರೀರಾಮುಲು ಹೇಳಿದರು. ಪಕ್ಷದ ನಾಯಕರ ವಿರುದ್ಧ ಅಸಮಾಧಾನಗೊಂಡಿರುವ ಮಾಜಿ ಸಚಿವ ಶ್ರೀರಾಮುಲು ಪಕ್ಷದ ಮೇಲೆ ಸಾಫ್ಟ್ ಕಾರ್ನರ್ ತೋರಿಸಿದ್ದಾರೆ. ಅಸಮಾಧಾನದ ಕುರಿತು ಬಳ್ಳಾರಿಯ ಮನೆಯಲ್ಲಿ ಶುಕ್ರವಾರ ಮಾತನಾಡಿದ ಶ್ರೀರಾಮುಲು, ಗುರುವಾರ ಜೆಪಿ ನಡ್ಡಾ ಅವರು ದೂರವಾಣಿ ಮೂಲಕ ಮಾತಾಡಿದರು. ಏನಾಗಿದೆ ಎನ್ನುವ ಮಾಹಿತಿ ಎಲ್ಲವನ್ನೂ ವಿವರಿಸಿದ್ದೇನೆ. ಕೋರ್ ಕಮಿಟಿಯಲ್ಲಿ ರಾಧಾಮೋಹನ್ ಅಗರವಾಲ್ ನಡೆದುಕೊಂಡ ಬಗ್ಗೆಯೂ ಹೇಳಿದ್ದೇನೆ. ರಾಮುಲು ನಿನ್ನ ಪರವಾಗಿ ನಾನಿದ್ದೇನೆ, ಯಾವುದೇ ಯೋಚನೆ ಮಾಡಬೇಡಿ. ಮುಂದೆ ದೆಹಲಿಗೆ ಬರುವುದಾಗಿದ್ದರೆ ಬನ್ನಿ ಎಂದು ನಡ್ಡಾ ಹೇಳಿದ್ದಾರೆ. ನಾನು ಸಹಾಯಕರಿಂದ ಅಪಾಯಿಟೆಂಟ್ ತಗೊಂಡು ಬರುತ್ತೇನೆ ಎಂದು ಹೇಳಿದ್ದೇನೆ ಎಂದರು.



ನರೇಂದ್ರ ಮೋದಿ, ಅಮಿತ್ ಶಾ ಅವರಿಗೆ ಸುದ್ದಿ ಮುಟ್ಟಿಸಿದ್ದೇವೆ, ನಿಮ್ಮ ಪರವಾಗಿ ನಾವಿದ್ದೇವೆ ಎಂದು ನಡ್ಡಾ ಹೇಳಿದ್ದಾರೆ. ಜೋಶಿಯವರೂ ಕರೆ ಮಾಡಿ, ನಾ ಜೊತೆ ಮಾತನಾಡುವಂತೆ ಹೇಳಿದ್ದರು. ನಿಮಗೆ ನೋವಾಗಿದೆ ಎನ್ನುವುದು ಗೊತ್ತಾಗಿದೆ. ಅಗರವಾಲ್ ಸಹಿತ ತಮ್ಮ ಮಾತು ಹಿಂದಕ್ಕೆ ತಗೊಳ್ಳುವುದಾಗಿ ಹೇಳಿದ್ದಾರೆ. ನೀವು ಪಾರ್ಟಿ ಬಿಡುವ ಬಗ್ಗೆ ಯೋಚನೆ ಮಾಡಬೇಡಿ ಎಂದು ಜೋಶಿ ಹೇಳಿದ್ದರು.

ವಿಜಯೇಂದ್ರ ನನ್ನ ಜೊತೆ ಮಾತಾಡಿದ್ದಾರೆ. ನಿಮಗೆ ಈ ರೀತಿ ಆಗಿರುವುದು ನೋವಾಗಿದೆ ಎಂದು ತಿಳಿಸಿದ್ದಾರೆ. ವಿರೋಧ ಪಕ್ಷದ ನಾಯಕ ಅಶೋಕ್, ಮಾಜಿ ಮುಖ್ಯಮಂತ್ರಿಗಳಾದ ಬೊಮ್ಮಾಯಿ, ಸದಾನಂದ ಗೌಡ ಸಹ ಮಾತಾಡಿದ್ದಾರೆ. ಎಲ್ಲರಿಗೂ ನನ್ನ ಮೇಲೆ ವಿಶ್ವಾಸವಿದೆ. ನನ್ನ ಸುಧೀರ್ಘ ರಾಜಕೀಯ ಇತಿಹಾಸದಲ್ಲಿ ಬಿಜೆಪಿಗೆ ಸಾಧ್ಯವಾದಷ್ಟು ಅಳಿಲು ಸೇವೆ ಸಲ್ಲಿಸಿದ್ದೀನೆ. ಹೀಗಾಗಿ ಅದನ್ನ ಗುರುತಿಸಿ ಮಾತನಾಡ್ತಿದ್ದಾರೆ. ನನ್ನ ಕಳೆದುಕೊಳ್ಳಬಾರದು ಎಂದು ಹೇಳಿದ್ದಾರೆ. ಎಲ್ಲವನ್ನೂ ಪಾರ್ಟಿಯವರಿಗೆ ತಿಳಿಸಿದ್ದೇನೆ.

ಇನ್ಮೇಲೆ ಏನೇ ಇದ್ದರೂ ನಾಲ್ಕು ಗೋಡೆಗಳ ಮಧ್ಯೆ ಮಾತಾಡೋಣ ಎಂದಿದ್ದಾರೆ ಎಂದರು. ರಾಜಕಾರಣದಲ್ಲಿ ಕ್ರೆಡಿಬಿಲಿಟಿ ಬಹಳ ಮುಖ್ಯ ಅದನ್ನು ನಾವು ಕಳೆದುಕೊಳ್ಳಬಾರದು. ಸ್ವಾಭಿಮಾನಕ್ಕೆ ತೊಂದರೆಯಾಗಿದ್ದರಿಂದ ನಾನು ಮಾತನಾಡಿದೆ. ಇದೀಗ ನನಗೆ ಎಲ್ಲರೂ ಸಹಕಾರ ಕೊಟ್ಟಿದ್ದಾರೆ. ಅವರಿಟ್ಟಂತ ವಿಶ್ವಾಸಕ್ಕೆ ಚ್ಯುತಿ ಬಾರದಂತೆ ನಡೆದುಕೊಳ್ಳುತ್ತೇನೆ. ಒಂದು ದಿನ ನಿಗದಿ ಮಾಡಿಕೊಂಡು ದೆಹಲಿಗೆ ಹೋಗುತ್ತೇನೆ. ಕಷ್ಟಕ್ಕೆ ಕೂಲಿ ಕೊಡಿ, ಅಗೌರವ ಮಾಡಬೇಡಿ, ಅಪಮಾನ ಮಾಡಬೇಡಿ, ಸ್ವಾಭಿಮಾನಕ್ಕೆ ಧಕ್ಕೆ ತರಬೇಡಿ ಎಂದು ಕೇಳಿದ್ದೇನೆ, ಇದನ್ನೇ ನಾಯಕರ ಮುಂದೆಯೂ ಹೇಳುತ್ತೇನೆ ಎಂದು ಶ್ರೀರಾಮುಲು ಹೇಳಿದ್ದಾರೆ.

## ಸೊಳ್ಳೆಗಳಿಂದ ರೋಗ ಹರಡುವ ಭೀತಿಯಲ್ಲಿ ಯರಡೋಣ ಶಾಲಾ ಮಕ್ಕಳು

### ★ ನಿಂತ ನೀರಿನಿಂದ ಸಾಂಕ್ರಾಮಿಕ ರೋಗಗಳ ಹರಡುವ ಸೊಳ್ಳೆಗಳು ಉತ್ಪತ್ತಿಯಾಗಿ ಶಾಲಾ ಮಕ್ಕಳಿಗೆ ಕಚ್ಚುವ ಭೀತಿ

• ಉದಯವಾಹಿನಿ, ಕಾರಟಗಿ

ಸರ್ಕಾರಿ ಶಾಲೆಗಳನ್ನು ಉಳಿಸಿ ಸರ್ಕಾರಿ ಶಾಲೆಗಳನ್ನು ಬೆಳೆಸಿ ಸರ್ಕಾರಿ ಶಾಲೆಗೆ ಬರುವ ಮಕ್ಕಳನ್ನು ಪ್ರೋತ್ಸಾಹಿಸಿ ಎಂದು ಸರ್ಕಾರ ಪದೇ ಪದೇ ಒತ್ತಿ ಹೇಳುತ್ತದೆ, ಇಲಾಖೆ ಸರ್ಕಾರಿ ಶಾಲೆಗಳಿಗೆ ಸಿಗಬೇಕಾದ ಅಗತ್ಯ ಸೌಲಭ್ಯಗಳನ್ನು ನೀಡಲು ಕೆಲವು ಬಾರಿ ಪರ್ಯಾಯ ಇಲಾಖೆಯಾದ ಪಂಚಾಯತ್ ರಾಜ್ ಇಲಾಖೆ ವತಿಯಿಂದ ಸ್ಥಳೀಯ ಗ್ರಾಮೀಣ ಮಟ್ಟದಲ್ಲಿ ಶಾಲೆಗಳಿಗೆ ಸಿಗಬೇಕಾದ ಅಗತ್ಯ ಸೌಲಭ್ಯಗಳು ಕಲ್ಪಿಸಿಕೊಡಲು ಸರ್ಕಾರ ಮಾರ್ಗ ಸೂಚಿಗಳನ್ನು ಅಳವಡಿಸಿ ಅಗತ್ಯ ಕ್ರಮ ಕೈಗೊಳ್ಳುವಂತೆ ಪಂಚಾಯತ್ ರಾಜ್ ಇಲಾಖೆಗೆ ಸರ್ಕಾರ ನಿರ್ದೇಶನವು ನೀಡಿರುತ್ತದೆ.

ಅದೇ ರೀತಿ ಗ್ರಾಮ ನೈರ್ಮಲ್ಯ ಕುರಿತಂತೆಯೂ ಆರೋಗ್ಯ ಇಲಾಖೆಯ ಜೊತೆಗೂಡಿ ಕಾರ್ಯ ನಿರ್ವಹಿಸಿ ಅಗತ್ಯ ಕ್ರಮ ಕೈಗೊಳ್ಳಲು ಮಾರ್ಗ ಸೂಚಿಗಳನ್ನು ನೀಡಿರುತ್ತದೆ. ಆದರೆ ಗ್ರಾಮ ನೈರ್ಮಲ್ಯ


ಉದಯವಾಹಿನಿ ಚಿತ್ರ

**ಪಂಚಾಯಿತಿ ಅಧಿಕಾರಿಗಳ ನಿರ್ಲಕ್ಷ್ಯ**

ಮತ್ತು ಗ್ರಾಮದ ಶಾಲೆಗಳ ಬಗ್ಗೆ ನಿರ್ಲಕ್ಷ ಧೋರಣೆ ಅನುಸರಿಸುತ್ತಿರುವ ತಾಲ್ಲೂಕಿನ ಯರಡೋಣ ಗ್ರಾಮ ಪಂಚಾಯತಿ ಬಗ್ಗೆ ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಶಾಲೆಗೆ ಹೊಂದಿಕೊಂಡಿರುವ ಚರಂಡಿಯನ್ನು ಶುಚಿಗೊಳಿಸಲು ಬೇಜವಾಬ್ದಾರಿತನ ತೋರುತ್ತಿದ್ದಾರೆ. ಚರಂಡಿಯ ನೀರು ಸರಾಗವಾಗಿ ಚಲಿಸದೆ ನೀರು ನಿಂತಲ್ಲೇ ನಿಲ್ಲುತ್ತಿದೆ ಹೀಗಾಗಿ ನಿಂತ ನೀರಿನಿಂದ ಸಾಂಕ್ರಾಮಿಕ ರೋಗಗಳ ಹರಡುವ ಸೊಳ್ಳೆಗಳು ಉತ್ಪತ್ತಿಯಾಗಿ ಶಾಲಾ ಮಕ್ಕಳಿಗೆ ಕಚ್ಚುವುದರಿಂದ ಶಾಲಾ ಮಕ್ಕಳ ಪಾಲಕರು ಭೀತಿಯಲ್ಲಿದ್ದಾರೆ




ಉದಯವಾಹಿನಿ ಚಿತ್ರ

### ಹೆಚ್ಚುವರಿ ಶೌಚಾಲಯ ಕಟ್ಟಡ ನಿರ್ಮಿಸುವಲ್ಲಿ ಅಧಿಕಾರಿಗಳು ವಿಫಲ

**ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಅಗತ್ಯ ಸೌಲಭ್ಯಗಳು ಮತ್ತು ನೈರ್ಮಲ್ಯ ಕಾಪಾಡುವಲ್ಲಿ ಶಾಲೆಯ ಎಸ್ ಡಿ ಎಂ ಸಿ ಸದಸ್ಯರುಗಳು ಮತ್ತು ಸಾರ್ವಜನಿಕರು ಸಲ್ಲಿಸಿರುವ ಮನವಿಯ ಬಗ್ಗೆ ಗ್ರಾಮ ಪಂಚಾಯಿತಿ ಅಧಿಕಾರಿಗಳು ನಿರ್ಲಕ್ಷ ವಹಿಸಿದ್ದಾರೆ, ಶಾಲೆಯಲ್ಲಿ ಸುಮಾರು 390 ಶಾಲಾ ಮಕ್ಕಳಿದ್ದು ಹೆಚ್ಚುವರಿ ಶೌಚಾಲಯ ಕಟ್ಟಡ ನಿರ್ಮಾಣಕ್ಕೆ ಮನವಿ ಸಲ್ಲಿಸಿ ಸುಮಾರು ವರ್ಷಗಳ ಕಳೆದಿವೆ ಆದರೆ ಇಲ್ಲಿಯವರೆಗೆ ಹೆಚ್ಚುವರಿ ಶೌಚಾಲಯ ಕಟ್ಟಡ ನಿರ್ಮಿಸುವಲ್ಲಿ ಅಧಿಕಾರಿಗಳು ವಿಫಲರಾಗಿದ್ದಾರೆ.**

ಸೊಳ್ಳೆಗಳು ಹರಡದಂತೆ ಚರಂಡಿ ಶುಚಿಗೊಳಿಸಲು ಹಲವು ಬಾರಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಮನವಿಯ ಮೂಲಕ ಗಮನಕ್ಕೆ ತರಲಾಗಿದೆ ಆದರೆ ಅಧಿಕಾರಿಗಳು ಚರಂಡಿಯನ್ನು ಸ್ವಚ್ಛಗೊಳಿಸಿ ಸೊಳ್ಳೆಗಳು ಹರಡದಂತೆ ಮುಂಜಾಗ್ರತಾ ಕ್ರಮ ಕೈಗೊಳ್ಳದೆ ಕರ್ತವ್ಯ ಲೋಪವೆಸಗಿರುವುದು ಸ್ಪಷ್ಟವಾಗಿದೆ, ಈಗಾಗಲೇ ಸೊಳ್ಳೆಗಳಿಂದ ಕೆಲವು ಮಕ್ಕಳಿಗೆ ಚರ್ಮ ಅಲರ್ಜಿ ಉಂಟಾಗಿದೆ ಎಂದು ಶಾಲಾ ಮೇಲುಸ್ತುವಾರಿ ಸದಸ್ಯರು ಆರೋಪಿಸಿದರು. ಈ ಕೂಡಲೇ ಶಾಲೆಗೆ ಅಗತ್ಯ ಸೌಲಭ್ಯಗಳನ್ನು ಒದಗಿಸಿ ಶಾಲಾ ಸುತ್ತ ಮುತ್ತಲಿನ ಪರಿಸರ ಮತ್ತು ಚರಂಡಿಯನ್ನು ಸ್ವಚ್ಛಗೊಳಿಸಿ ರೋಗಾಣು ಹರಡದಂತೆ ಗ್ರಾಮ ಪಂಚಾಯತಿ ಅಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳಬೇಕು ಒಂದು ವೇಳೆ ಸೊಳ್ಳೆಗಳಿಂದ ಮಕ್ಕಳಿಗೆ ತೊಂದರೆಯಾದರೆ ಅದಕ್ಕೆ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ನೇರಹೊಣೆ ಎಂದು ಎಸ್ ಡಿ ಎಮ್ ಸಿ ಅಧ್ಯಕ್ಷರು ಸದಸ್ಯರು ಆರೋಪಿಸಲಾಯಿತು.

## ಮಿನಿ ನ್ಯೂಸ್

### ಮತದಾರ ಪ್ರತಿಜ್ಞಾ ವಿಧಿ ಬೋಧನೆ


ಉದಯವಾಹಿನಿ ಚಿತ್ರ

• ಉದಯವಾಹಿನಿ ಚಿತ್ರದುರ್ಗ

ರಾಷ್ಟ್ರೀಯ ಮತದಾರ ಹಿನ್ನಲೆಯಲ್ಲಿ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಮತದಾರ ಪ್ರತಿಜ್ಞಾ ವಿಧಿಯನ್ನು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಬೋಧಿಸಿದರು. ಉಪವಿಭಾಗಾಧಿಕಾರಿ ವೆಂಕಟೇಶ್, ಎಲೆಕ್ಷನ್ ತಹಶೀಲ್ದಾರ್ ಮಲ್ಲಿಕಾರ್ಜುನ್ ಸೇರಿದಂತೆ ಜಿಲ್ಲಾಧಿಕಾರಿ ಕಚೇರಿ, ಅಪರ ಜಿಲ್ಲಾಧಿಕಾರಿ ಕಚೇರಿ, ಉಪವಿಭಾಗಾಧಿಕಾರಿ ಕಚೇರಿ ಸಿಬ್ಬಂದಿ ಉಪಸ್ಥಿತರಿದ್ದರು.

### ಪಠ್ಯ ಪುಸ್ತಕದಲ್ಲಿ ರಾಮಲಿಂಗಪ್ಪ ಬೇಗೂರ ಲೇಖನ ಕೈಬಿಡುವಂತೆ ಆಗ್ರಹ

• ಉದಯವಾಹಿನಿ ಧಾರವಾಡ

ಕರ್ನಾಟಕ ವಿಶ್ವವಿದ್ಯಾಲಯದ ಬಿ.ಎ ಪ್ರಥಮ ಸೆಮಿಸ್ಟರ್ ಕನ್ನಡ ಭಾಷಾ ಪಠ್ಯ ಪುಸ್ತಕದಲ್ಲಿ ರಾಮಲಿಂಗಪ್ಪ ಟಿ.ಬೇಗೂರ ಅವರ ಲೇಖನ ಸಂವಿಧಾನ ವಿರೋಧಿ ಮತ್ತು ರಾಷ್ಟ್ರ ವಿರೋಧಿಯಾಗಿವೆ ಎಂದು ಆರೋಪಿಸಿ ಅಖಿಲ ಭಾರತ ವಿದ್ಯಾರ್ಥಿ ಪರಿಷತ್‌ನವರು (ಎಬಿವಿಪಿ) ಪ್ರತಿಭಟನೆ ನಡೆಸಿದರು. ಪ್ರತಿಭಟನಾಕಾರರು ವಿಶ್ವವಿದ್ಯಾಲಯದ ಆಡಳಿತ ಕಚೇರಿ ಎದುರು ಸಮಾವೇಶಗೊಂಡು ಆಕ್ರೋಶ ವ್ಯಕ್ತಪಡಿಸಿದರು. ರಾಮಲಿಂಗಪ್ಪ ಟಿ ಬೇಗೂರ ಅವರ ಲೇಖನ ಕೈಬಿಡಬೇಕು. ಪಠ್ಯ ಪುಸ್ತಕ ಸಮಿತಿ ವಿರುದ್ಧ ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದರು. ಶಾಸಕ ಅರವಿಂದ ಬೆಲ್ಲದ, ಶಿವು ಹಿರೇಮಠ, ಮೋಹನ ರಾಮದುರ್ಗ ಪಾಲ್ಗೊಂಡಿದ್ದರು.

### ಕರೆಮ್ಮ ನಿವಾಸಕ್ಕೆ ನುಗ್ಗಿದ ಅಪರಿಚಿತರು ಆಗಂತುಕರ ಎಂಟ್ರಿಯಿಂದ ಕಂಗಾಲು

• ಉದಯವಾಹಿನಿ ದೇವದುರ್ಗ

ಜೆಡಿಎಸ್ ಶಾಸಕಿ ಕರೆಮ್ಮ ನಿವಾಸಕ್ಕೆ ಅಪರಿಚಿತರ ಗುಂಪು ನುಗ್ಗಿದ ಘಟನೆ ರಾಯಚೂರಿನ ದೇವದುರ್ಗದ ಶಾಸಕರ ನಿವಾಸದಲ್ಲಿ ನಡೆದಿದೆ. ನಿನ್ನೆ ತಡರಾತ್ರಿ ಅಪರಿಚಿತರ ಗುಂಪೊಂದು ಕೂಗಳತೆ ದೂರದಲ್ಲಿ ಬೈಕ್ ಗಳನ್ನು ನಿಲ್ಲಿಸಿ ಮನೆಗೆ ನುಗ್ಗಿದೆ ಎಂದು ತಿಳಿದು ಬಂದಿದೆ. ಶಾಸಕಿ ಕರೆಮ್ಮ ಮನೆಯ ಮಹಡಿಯಲ್ಲಿ ಮಲಗಿದ್ದ ವೇಳೆ ಆಗಂತುಕರ ಗ್ಯಾಂಗ್ ಮನೆಗೆ ನುಗ್ಗಿದ್ದು, ಇದನ್ನು ಕಂಡ ನೆರೆಹೊರೆಯವರು ಜೋರಾಗಿ ಕೂಗಿಕೊಂಡಿದ್ದಾರೆ. ಅಕ್ಕಪಕ್ಕದವರು ಕೂಗಿಕೊಳ್ಳುತ್ತಿದ್ದಂತೆ ಗ್ಯಾಂಗ್ ಸ್ಥಳದಿಂದ ಕಾಲ್ಕಿತ್ತಿದೆ.ತಡ ರಾತ್ರಿ ಮನೆಗೆ ನುಗ್ಗಿರುವ ಅಪರಿಚಿತ ಗ್ಯಾಂಗ್ ನಿಂದ ಆತಂಕಕ್ಕೀಡಾಗಿರುವ ಶಾಸಕಿ ಕರೆಮ್ಮ ಈ ಬಗ್ಗೆ ತನಿಖೆ ನಡೆಸುವಂತೆ ದೇವದುರ್ಗ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದಾರೆ.

### ಹಿಟ್ ಆ್ಯಂಡ್ ರನ್: ಇಬ್ಬರು ಬೈಕ್ ಸವಾರರು ದುರ್ಮರಣ

• ಉದಯವಾಹಿನಿ ಬೀದರ್

ಹಿಟ್ ಆ್ಯಂಡ್ ರನ್ ದುರಂತದಲ್ಲಿ ಇಬ್ಬರು ಬೈಕ್ ಸವಾರರು ಸ್ಥಳದಲ್ಲಿಯೇ ಸಾವನ್ನಪ್ಪಿರುವ ಘಟನೆ ಬೀದರ್ ಜಿಲ್ಲೆಯ ಭಾಲ್ಕಿ ತಾಲ್ಲೂಕಿನ ಪಾಂಡ್ರಿ ಗ್ರಾಮದ ಬಳಿ ನಡೆದಿದೆ. ಮೃತರನ್ನು ಮೂಲತಃ ಮಹಾರಾಷ್ಟ್ರದ ನಾಂದೇಡ್ ಗ್ರಾಮದ ನಾಗೂರಾವ್ (40) ಹಾಗೂ ಭಾನುದಾಸ್ (42) ಎಂದು ಗುರುತಿಸಲಾಗಿದೆ. ಮೂವರು ಸೇರಿ ಒಂದು ಬೈಕ್‌ನಲ್ಲಿ ಔರಾದ್‌ನಿಂದ ನಾಂದೇಡ್‌ಗೆ ಹೋಗುತ್ತಿದ್ದರು. ಪಾಂಡ್ರಿ ಬಸ್ ನಿಲ್ದಾಣದ ಬಳಿ ಅಪರಿಚಿತ ವಾಹನವೊಂದು ಬೈಕ್‌ಗೆ ಡಿಕ್ಕಿ ಹೊಡೆದು ಹೋಗಿದೆ. ಪರಿಣಾಮ ಇಬ್ಬರು ಸ್ಥಳದಲ್ಲಿಯೇ ಸಾವನ್ನಪ್ಪಿದ್ದು, ಇನ್ನೋರ್ವ ಗಂಭೀರವಾಗಿ ಗಾಯಗೊಂಡಿದ್ದಾರೆ. ಅವರನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಚಿಕಿತ್ಸೆ ಪಡೆಯುತ್ತಿದ್ದಾರೆ. ಸದ್ಯ ಈ ಕುರಿತು ಮೆಹಕರ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಶ್ರೀರಾಮಲು ಕಾಂಗ್ರೆಸ್ ಸೇರ್ಪಡೆ ಬಗ್ಗೆ ಸ್ಪಷ್ಟವಾದ ಮಾಹಿತಿ ಇಲ್ಲ

• ಉದಯವಾಹಿನಿ ಬೆಳಗಾವಿ

ಶ್ರೀರಾಮಲು ಕಾಂಗ್ರೆಸ್ ಸೇರ್ಪಡೆ ಬಗ್ಗೆ ಈ ವಿಚಾರ ಚರ್ಚೆಯಲ್ಲಿ ಇದೆ. ನಮಗೂ ಅದರ ಬಗ್ಗೆ ಸ್ಪಷ್ಟವಾದ ಮಾಹಿತಿ ಇಲ್ಲ ಎಂದು ಲೋಕೋಪಯೋಗಿ ಇಲಾಖೆ ಸಚಿವ ಸತೀಶ ಜಾರಕಿಹೊಳಿ ಹೇಳಿದರು.

ಬೆಳಗಾವಿಯಲ್ಲಿ ಮಾಧ್ಯಮಗಳ ಜೊತೆಗೆ ಮಾತನಾಡಿದ ಅವರು, ಬೆಂಗಳೂರಿಗೆ ಹೋಗಿ ಸಂಪೂರ್ಣ ಮಾಹಿತಿ ಪಡೆಯುವೆ. ಪೂರ್ಣ ಪ್ರಮಾಣದಲ್ಲಿ ಏನು ಬೆಳವಣಿಗೆ ಆಗಿದೆ ಗೊತ್ತಿಲ್ಲ. ಟಿವಿಯಲ್ಲಿ ನೋಡಿದ್ದೇನಷ್ಟೆ. ಪೂರ್ಣ ಮಾಹಿತಿ ಪಡೆದು ಮಾತನಾಡುತ್ತೇನೆ ಎಂದರು. ರಾಜ್ಯದಲ್ಲಿ ಫೈನಾನ್ಸ್ ಕಿರುಕುಳ ಆರೋಪಕ್ಕೆ ಇದೇ ವೇಳೆ ಪ್ರತಿಕ್ರಿಯಿಸಿದ ಸತೀಶ ಜಾರಕಿಹೊಳಿ ಅವರು, ಸುಮಾರು ಕಡೆ ಕಿರುಕುಳ ಕೊಡುವ ವರದಿಗಳು ಬರುತ್ತಿವೆ. ತೊಂದರೆ ಕೊಟ್ಟರೆ ದೂರು ದಾಖಲು ಮಾಡುವಂತೆ ತಿಳಿಸಿದ್ದೇವೆ. ಫೈನಾನ್ಸ್ ಕಿರುಕುಳದ ಬಗ್ಗೆ ಗೊಂದಲ ಇದೆ, ಸಾಲ ಪಡೆಯೋದು, ಕಿರುಕುಳ ಕೋಡೊದು ಬೇರೆ ವಿಚಾರ. ಆದರೆ, ಸಬ್ಸಿಡಿ ಹೆಸರಿನಲ್ಲಿ ಸಾವಿರಾರು ಜನರಿಗೆ ಸಾಲ ಕೊಟ್ಟಿದ್ದಾರೆ. ಹಣ ತುಂಬುವ ವಿಚಾರದಲ್ಲಿ ಈಗ ಸಂಘರ್ಷ ಆರಂಭವಾಗಿದೆ. ಈಗಾಗಲೇ ಡಿಸಿ ನೇತೃತ್ವದಲ್ಲಿ ಒಂದು ಸಭೆ ನಡೆಸಿದ್ದೇನೆ. ಎರಡು ತಿಂಗಳ ಸಮಯ ಕೇಳಿದ್ದೇವೆ, ಏನಾದರೂ ಅದಕ್ಕೆ ಪರಿಹಾರ ಹುಡುಕುತ್ತೇವೆ ಎಂದರು.



ಒಂದು ತಿಂಗಳಲ್ಲಿ ಏನು ಸಾಧ್ಯವೋ ಅದಕ್ಕೆ ಪರಿಹಾರಕ್ಕೆ ಮಾಡುತ್ತೇವೆ. ಶಿರೂರಿನಲ್ಲಿ ಕೂಡ ಮಹಿಳೆ ಆತ್ಮಹತ್ಯೆ ಪ್ರಕರಣ ನಡೆದಿದೆ. ದೂರು ದಾಖಲು ಮಾಡಲು ತಿಳಿಸಿರುವೆ ಎಂದ ಅವರು, ಮಧ್ಯವರ್ತಿಗಳ ಜತೆಗೆ ಫೈನಾನ್ಸ್‌ನವರು ಭಾಗಿಯಾಗಿದ್ದಾರೆ ಎಂಬ ಆರೋಪಕ್ಕೆ ಮಧ್ಯವರ್ತಿಗಳಿಗೆ ಹಣ ಕೊಟ್ಟಿದ್ದಾರೆ. ಈ ಕುರಿತು ಪೊಲೀಸ್ ತನಿಖೆಗೆ ಸೂಚನೆ ಕೊಟ್ಟಿದ್ದೇನೆ. ವರದಿ ಬಂದ ಮೇಲೆ ಕ್ರಮ ಕೈಗೊಳ್ಳುತ್ತೇವೆ ಎಂದು ಸ್ಪಷ್ಟಪಡಿಸಿದರು.

# ಪಾರ್ಟ್‌ಟೈಮ್ ಜಾಬ್ ಬಿಡುತ್ತಿರುವ ಭಾರತೀಯ ವಿದ್ಯಾರ್ಥಿಗಳು

## ★ ಅಮೆರಿಕದಲ್ಲಿ ಡೊನಾಲ್ಡ್ ಟ್ರಂಪ್ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ಬೆನ್ನಲ್ಲೆ ಅಮೆರಿಕಾ ವಿದ್ಯಾರ್ಥಿಗಳಿಗೆ ಆತಂಕ



**ಅಮೆರಿಕ ಹೊಸ ವಲಸೆ ನೀತಿಯ ಭಯ**

**ಹೊಸದಿಲ್ಲಿ:** ಅಮೆರಿಕದಲ್ಲಿ ಡೊನಾಲ್ಡ್ ಟ್ರಂಪ್ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ಬೆನ್ನಲ್ಲೆ ಆ ದೇಶದಲ್ಲಿ ಓದುತ್ತಿರುವ ಹಲವು ಭಾರತೀಯ ಮೂಲದ ವಿದ್ಯಾರ್ಥಿಗಳು ತಮ್ಮ ಪಾರ್ಟ್ ಟೈಮ್ ಕೆಲಸವನ್ನು ತೊರೆಯುತ್ತಿದ್ದಾರೆ. ಇದಕ್ಕೆ ಕಾರಣ, ಡೊನಾಲ್ಡ್ ಟ್ರಂಪ್ ಅವರು ಮುಂದಿನ ದಿನಗಳಲ್ಲಿ ಜಾರಿಗೆ ತರುವ ವಲಸೆ ನೀತಿಗಳ ಬಗೆಗಿನ ಆತಂಕ!

ಅಮೆರಿಕದಲ್ಲಿ ವಿದ್ಯಾಭ್ಯಾಸಕ್ಕೆಂದು ತೆರಳಿರುವ ಸಾಕಷ್ಟು ಭಾರತೀಯ ವಿದ್ಯಾರ್ಥಿಗಳು ತನ್ನ ಖರ್ಚು ವೆಚ್ಚ ನಿಭಾಯಿಸಿಕೊಳ್ಳಲು ಪಾರ್ಟ್ ಟೈಮ್ ಕೆಲಸಕ್ಕೆ ಹೋಗುತ್ತಾರೆ.


ಈ-1 ವೀಸಾದಲ್ಲಿರುವ ವಿದ್ಯಾರ್ಥಿಗಳು ವಾರಕ್ಕೆ 20 ಗಂಟೆ ಕೆಲಸ ಮಾಡುವ ಅವಕಾಶವೂ ಇದೆ. ಆದಾಗಿಯೂ ಹೆಚ್ಚಿನ ಸಮಯ ಕೆಲಸ ಮಾಡಿ ಅಲ್ಲಿನ ಭಾರೀ ಖರ್ಚುಗಳನ್ನು ನಿರ್ವಹಣೆ ಮಾಡುತ್ತಾರೆ. ಪ್ರಮುಖವಾಗಿ ಪೆಟ್ರೋಲ್ ಬಂಕ್, ಗ್ಯಾಸ್ ಸ್ಟೇಷನ್‌ಗಳು, ಕೆಫೆಗಳು ಸೇರಿದಂತೆ ಇತರೆ ಮಳಿಗೆಗಳಲ್ಲಿ ಕೆಲಸ ಮಾಡುತ್ತಿದ್ದಾರೆ. ಹೊಸ ಆಡಳಿತದ ವಲಸೆ ನೀತಿಗಳು ಕಠಿಣವಾಗುವ ಸಾಧ್ಯತೆ ಇರುವುದರಿಂದ, ಗಡೀಪಾರು ಭೀತಿಯಿಂದ ವಿದ್ಯಾರ್ಥಿಗಳು ಈ ಹೆಚ್ಚುವರಿ ಕೆಲಸಗಳನ್ನು ತ್ಯಜಿಸುತ್ತಿದ್ದಾರೆ.

ಅದರಲ್ಲೂ ಮುಖ್ಯವಾಗಿ ಹೈದರಾಬಾದ್ ಮೂಲದವರು ಡೊನಾಲ್ಡ್ ಟ್ರಂಪ್ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ನಂತರ ಜಾರಿಗೆ ಬರುವ ವಲಸೆ ನೀತಿಗಳ ಬಗ್ಗೆ ಆತಂಕಗೊಂಡಿದ್ದಾರೆ.

ಕೆಲವು ತಿಂಗಳ ನಂತರ ಪರಿಸ್ಥಿತಿಯನ್ನು ಅವಲೋಕನ ಮಾಡಿ ಕೆಲಸವನ್ನು ಮುಂದುವರಿಸಬೇಕೆ ಅಥವಾ ಬೇಡವೇ ಎಂದು ನಿರ್ಧರಿಸುವುದಾಗಿ ಅಲ್ಲಿನ ಭಾರತೀಯ ಮೂಲದ ವಿದ್ಯಾರ್ಥಿಗಳು ಹೇಳಿದ್ದಾರೆ. ಈ ಮಧ್ಯೆ, ಜೀವನ ನಿರ್ವಹಣೆಗೆ ಅವರು ತಮ್ಮ

### ಮುಂದಿನ ಭವಿಷ್ಯದ ಚಿಂತೆ

**ಇನ್ನು ಪಾರ್ಟ್‌ಟೈಮ್ ಕೆಲಸ ತೊರೆದ ಬಳಿಕ ಅಲ್ಲಿನ ಖರ್ಚು ವೆಚ್ಚ ನಿರ್ವಹಣೆ ಕಷ್ಟವಾಗುತ್ತಿದೆ. ಭಾರತದಿಂದ ಹೋಗುವಾಗಲೇ ಬ್ಯಾಂಕ್‌ಗಳಲ್ಲಿ ಭಾರೀ ಸಾಲ ಮಾಡಿಕೊಂಡು ಹಲವು ವಿದ್ಯಾರ್ಥಿಗಳು ಹೋಗಿದ್ದು, ಮುಂದಿನ ಭವಿಷ್ಯದ ಬಗ್ಗೆ ಗಡಿಪಾರು ಮಾಡುವ ಬಗ್ಗೆ ಚಿಂತೆಗೀಡಾಗಿದ್ದಾರೆ.**



ಉಳಿತಾಯದ ಮೇಲೆ ಅಥವಾ ಭಾರತದಲ್ಲಿರುವ ಸ್ನೇಹಿತರು ಮತ್ತು ಕುಟುಂಬದಿಂದ ಸಾಲ ಪಡೆಯುತ್ತಿದ್ದಾರೆ ಎಂದು ತಿಳಿದುಬಂದಿದೆ.

ಈ ಬಗ್ಗೆ ನಾನು ಪ್ರತಿ ದಿನ ಆರು ಗಂಟೆಗಳ ಕಾಲ ಒಂದು ಸಣ್ಣ ಕೆಫೆಯಲ್ಲಿ ಕೆಲಸ ಮಾಡುತ್ತಿದ್ದೆ. ಗಂಟೆಗೆ 7 ಡಾಲರ್ ಗಳಿಸುತ್ತಿದ್ದೆ.

ಇದರಿಂದ ನನ್ನ ಮಾಸಿಕ ಖರ್ಚುಗಳನ್ನು ನಿಭಾಯಿಸಲು ಸಾಧ್ಯವಾಗುತ್ತಿತ್ತು.

ಆದರೆ, ವಲಸೆ ಅಧಿಕಾರಿಗಳು ಅನಧಿಕೃತ ಕೆಲಸಗಳ ಮೇಲೆ ಕ್ರಮ ಕೈಗೊಳ್ಳಬಹುದು ಎಂಬ ಮಾಹಿತಿಯಿಂದ ಕಳೆದ ವಾರ ನಾನು ಕೆಲಸ ಬಿಟ್ಟಿದ್ದೇನೆ. 50,000 ಸಾವಿರ ಡಾಲರ್ (ಸುಮಾರು 42.5 ಲಕ್ಷ ರೂ.) ಸಾಲ ಮಾಡಿ ಅಮೆರಿಕದಲ್ಲಿ ಓಡುತ್ತಿದ್ದಾರೆ. ಇಲ್ಲಿನ ಯಾವುದೇ ಅಪಾಯ ತೆಗೆದುಕೊಳ್ಳಲು ಸಾಧ್ಯವಿಲ್ಲ ಇಲಿನಾಯ್ಸ್‌ನಲ್ಲಿ ಪದವಿ ವಿದ್ಯಾರ್ಥಿಯಾಗಿರುವ ಅರ್ಜುನ್ ಹೇಳಿತ್ತಾರೆ. ನಾನು ಈಗಾಗಲೇ ನನ್ನ ಹೆಚ್ಚಿನ ಉಳಿತಾಯವನ್ನು ಬಳಸಿಕೊಂಡಿದ್ದೇನೆ ಮತ್ತು ನನ್ನ ರೂಮ್ ಮೇಟ್‌ನಿಂದ ಸಣ್ಣ ಮೊತ್ತವನ್ನು ಸಾಲ ಪಡೆಯಲು ಪ್ರಾರಂಭಿಸಿದ್ದೇನೆ.

ನಾನು ಎಷ್ಟು ಕಾಲ ಹೀಗೆ ಮುಂದುವರಿಯಬಲ್ಲೆ ಎಂದು ನನಗೆ ತಿಳಿದಿಲ್ಲ. ತಮ್ಮ ಪೋಷಕರು ಈಗಾಗಲೇ

- **ಅಮೆರಿಕದಲ್ಲಿ ಡೊನಾಲ್ಡ್ ಟ್ರಂಪ್ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ಬೆನ್ನಲ್ಲೆ ಅಮೆರಿಕಾ ವಿದ್ಯಾರ್ಥಿಗಳಿಗೆ ಆತಂಕ.**
- **ಭಾರತೀಯ ಮೂಲದ ವಿದ್ಯಾರ್ಥಿಗಳು ತಮ್ಮ ಪಾರ್ಟ್ ಟೈಮ್ ಕೆಲಸವನ್ನು ತೊರೆಯುತ್ತಿದ್ದಾರೆ.**
- **ಡೊನಾಲ್ಡ್ ಟ್ರಂಪ್ ಅವರು ಮುಂದಿನ ದಿನಗಳಲ್ಲಿ ಜಾರಿಗೆ ತರುವ ವಲಸೆ ನೀತಿಗಳ ಬಗೆಗಿನ ಆತಂಕ ಇದಕ್ಕೆ ಕಾರಣವಾಗಿದೆ.**

ಆರ್ಥಿಕವಾಗಿ ಸಂಕಷ್ಟದಲ್ಲಿರುವುದರಿಂದ ಅವರಿಂದ ಸಹಾಯ ಕೇಳಲು ತನಗೆ ಮುಜುಗರವಾಗುತ್ತಿದೆ ಎಂದು ರೋಹನ್ ಹೇಳಿದ್ದಾರೆ. ಈ ಅನಿಶ್ಚಿತತೆಯು ಕೆಲವು ವಿದ್ಯಾರ್ಥಿಗಳಲ್ಲಿ ಮಾನಸಿಕ ಆರೋಗ್ಯ ಸಮಸ್ಯೆಗಳನ್ನು ಉಂಟುಮಾಡಿದೆ. ಆರ್ಥಿಕ ಮತ್ತು ಭಾವನಾತ್ಮಕ ಒತ್ತಡದಿಂದ ಅವರು ಭಾರೀ ಒತ್ತಡಕ್ಕೆ ಒಳಗಾಗಿದ್ದಾರೆ ಎನ್ನಲಾಗಿದೆ.

# ಗುಜರಾತ್‌ನಲ್ಲಿ ವಿಶ್ವದ ಅತಿದೊಡ್ಡ ರಿಲಯನ್ಸ್ ಡೇಟಾ ಸೆಂಟರ್..?



**ಮುಂಬೈ:** ರಿಲಯನ್ಸ್ ಇಂಡಸ್ಟ್ರೀಸ್ ಅಧ್ಯಕ್ಷ ಮುಖೇಶ್ ಅಂಬಾನಿ ಅವರು ಗುಜರಾತ್‌ನ ಜಾಮ್ ನಗರದಲ್ಲಿ ವಿಶ್ವದ ಅತಿದೊಡ್ಡ ಡೇಟಾ ಕೇಂದ್ರವನ್ನು ನಿರ್ಮಿಸಲು ಸಿದ್ಧರಾಗಿದ್ದಾರೆ ಎಂದು ಸುದ್ದಿ ಸಂಸ್ಥೆ ಬ್ಲೂಮ್‌ಬರ್ಗ್ ವರದಿ ಮಾಡಿದೆ.

ಈ ಮಹತ್ವಾಕಾಂಕ್ಷೆಯ ಯೋಜನೆಯು ಭಾರತದ ವೇಗವಾಗಿ ಬೆಳೆಯುತ್ತಿರುವ ಕೃತಕ ಬುದ್ಧಿಮತ್ತೆ ಸಾಮರ್ಥ್ಯಗಳಿಗೆ ದೃಢವಾದ ತಳ್ಳುವಿಕೆಯನ್ನು ನೀಡುತ್ತದೆ ಎಂದು ನಿರೀಕ್ಷಿಸಲಾಗಿದೆ. ಡೇಟಾ ಸೆಂಟರ್ ದೇಶದ ಡಿಜಿಟಲ್ ಮೂಲಸೌಕರ್ಯ ನಿರ್ಮಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ ಮತ್ತು ಅದೇ ಸಮಯದಲ್ಲಿ, ಜಾಗತಿಕ ಎಐ ರೇಸ್‌ನಲ್ಲಿ ಭಾರತವು ಹೆಚ್ಚು ಸ್ಪರ್ಧಾತ್ಮಕವಾಗಲು ಸಹಾಯ ಮಾಡುತ್ತದೆ. ಈ ಉಪಕ್ರಮದ ದೃಷ್ಟಿಯಿಂದ, ಮುಖೇಶ್ ಅಂಬಾನಿ ನೇತೃತ್ವದ ರಿಯಲನ್ಸ್ ಪ್ರಮುಖ ಎಐ ತಂತ್ರಜ್ಞಾನ ಡೆವಲಪರ್ ಎನ್‌ವಿಡಿಐಎನಿಂದ ವಿಶ್ವದ ಸುಧಾರಿತ ಸೆಮಿಕಂಡಕ್ಟರ್‌ಗಳನ್ನು ಖರೀದಿಸುವ ಮೂಲಕ ಎಐ ತಂತ್ರಜ್ಞಾನಗಳಲ್ಲಿ ಕಾರ್ಯತಂತ್ರವಾಗಿ ಹೂಡಿಕೆ ಮಾಡುತ್ತಿದೆ.

ಅಕ್ಟೋಬರ್ 2024ರಲ್ಲಿ, ಎನ್‌ವಿಡಿಐಎ ಎಐ ಶೃಂಗಸಭೆಯ ಸಮಯದಲ್ಲಿ ಭಾರತದಲ್ಲಿ ಎಐ ಮೂಲಸೌಕರ್ಯವನ್ನು ಸ್ಥಾಪಿಸಲು ರಿಯಲನ್ಸ್ ಮತ್ತು ಎನ್‌ವಿಡಿಐಎ ಪಾಲುದಾರಿಕೆ ಹೊಂದಿವೆ ಎಂದು ಘೋಷಿಸಲಾಯಿತು. ಈ ಸಹಕಾರದ ಭಾಗವಾಗಿ, ಎನ್‌ವಿಡಿಐಎ ತನ್ನ ಒಂದು ಗಿಗಾವ್ಯಾಟ್ ಡೇಟಾ ಸೆಂಟರ್‌ಗಾಗಿ ತನ್ನ ಅತ್ಯಾಧುನಿಕ ಬ್ಲ್ಯಾಕ್‌ವೆಲ್ ಎಐ ಪ್ರೊಸೆಸರ್‌ಗಳೊಂದಿಗೆ ರಿಲಯನ್ಸ್ ಅನ್ನು ಸಜ್ಜುಗೊಳಿಸಲು ಹೊರಟಿದೆ.

### ಜಾಮ್‌ನಗರದ ಅತಿದೊಡ್ಡ ಡೇಟಾ ಸೆಂಟರ್‌ನಲ್ಲಿ ಏನೇನಿದೆ

- **ಗುಜರಾತ್‌ನ ಜಾಮ್‌ನಗರದಲ್ಲಿ ರಿಲಯನ್ಸ್ ಡೇಟಾ ಕೇಂದ್ರವನ್ನು ನಿರ್ಮಿಸಲಿದೆ. ಇದು ಭಾರತದ ಡಿಜಿಟಲ್ ರೂಪಾಂತರದ ಪ್ರಮುಖ ಹಂತಗಳಲ್ಲಿ ಒಂದಾಗಿದೆ.**
- **ಇದು ಒಂದು ಗಿಗಾವ್ಯಾಟ್‌ನ ಯೋಜಿತ ಸಾಮರ್ಥ್ಯದೊಂದಿಗೆ ವಿಶ್ವದ ಅತಿ ದೊಡ್ಡ ಕೇಂದ್ರವಾಗಿರುತ್ತದೆ.**
- **ರಿಲಯನ್ಸ್‌ನ ಒಂದು-ಗಿಗಾವ್ಯಾಟ್ ಡೇಟಾ ಸೆಂಟರ್‌ಗಾಗಿ ತನ್ನ ಅತ್ಯಾಧುನಿಕ ಬ್ಲ್ಯಾಕ್‌ವೆಲ್ ಎಐ ಪ್ರೊಸೆಸರ್‌ಗಳನ್ನು ಒದಗಿಸಲು ಎನ್‌ವಿಡಿಐಎನೊಂದಿಗೆ ರಿಲಯನ್ಸ್ ಸಹಕರಿಸಿದೆ.**
- **ಡೇಟಾ ಸೆಂಟರ್‌ನ ನಿರ್ಮಾಣವು ಗಣನೀಯ ಹೂಡಿಕೆಗಳಿಂದ ಬೆಂಬಲಿತವಾಗಿರುವ ದೇಶದ ಡಿಜಿಟಲ್ ಮತ್ತು ಎಐ ಸಾಮರ್ಥ್ಯಗಳನ್ನು ಅಭಿವೃದ್ಧಿಪಡಿಸಲು ಹೊಂದಿಕೆಯಾಗುತ್ತದೆ.**

# ಪೌರತ್ವ ಕುರಿತ ಆದೇಶಕ್ಕೆ ಫೆಡರಲ್ ಕೋರ್ಟ್ ತಡೆ

**ವಾಷಿಂಗ್ಟನ್:** ಜನಸಿದ್ಧ ಪೌರತ್ವದ ಹಕ್ಕು ಕುರಿತಂತೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೊರಡಿಸಿರುವ ಆದೇಶಕ್ಕೆ ಯುಎಸ್ ಫೆಡರಲ್ ನ್ಯಾಯಾಲಯ ತಡೆ ನೀಡಿದೆ. ಯುಎಸ್ ಫೆಡರಲ್ ನ್ಯಾಯಾಧೀಶರು ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ದೇಶದಲ್ಲಿ ಸ್ವಯಂಚಾಲಿತ ಜನಸಿದ್ಧ ಪೌರತ್ವದ ಹಕ್ಕನ್ನು ನಿರಾಕರಿಸುವ ಕಾರ್ಯಕಾರಿ ಆದೇಶವನ್ನು ಜಾರಿಗೊಳಿಸದಂತೆ ನಿರ್ಬಂಧಿಸಿದ್ದಾರೆ ಎಂದು ಸುದ್ದಿ ಸಂಸ್ಥೆ ರಾಯಿಟರ್ಸ್ ವರದಿ ಮಾಡಿದೆ.



ನಾಲ್ಕು ಡೆಮಾಕ್ರಟಿಕ್ ನೇತತ್ವದ ರಾಜ್ಯಗಳ ಮನವಿಯನ್ನು ಗೌರವಿಸಿ, ಯುಎಸ್ ಜಿಲ್ಲಾ ನ್ಯಾಯಾಧೀಶ ಜಾನ್ ಕೊಫೆನರ್ ಅವರು ಆದೇಶವನ್ನು ಜಾರಿಗೊಳಿಸದಂತೆ ಟ್ರಂಪ್ ಆಡಳಿತವನ್ನು ನಿರ್ಬಂಧಿಸುವ ತಾತ್ಕಾಲಿಕ ಆದೇಶವನ್ನು ನೀಡಿದರು.

ಜನವರಿ 20 ರಂದು ಎರಡನೇ ಬಾರಿಗೆ ಅಧಿಕಾರ ವಹಿಸಿಕೊಂಡ ಟ್ರಂಪ್, ತಮ ಅಧಿಕಾರದ ಮೊದಲ ದಿನವಾದ ಆದೇಶಕ್ಕೆ ಸಹಿ ಹಾಕಿದ್ದರು. ಟ್ರಂಪ್ ಅವರ ಕಾರ್ಯನಿರ್ವಾಹಕ ಆದೇಶದ ಅಡಿಯಲ್ಲಿ ಜನಸಿದ್ಧ ಪೌರತ್ವವನ್ನು ಮುಕ್ತಾಯಗೊಳಿಸಲು ಫೆಬ್ರವರಿ 20 ಅಂತಿಮ ದಿನಾಂಕವಾಗಿದೆ.

ಫೆಡರಲ್ ನ್ಯಾಯಾಧೀಶರ ಆದೇಶವು ಡೆಮಾಕ್ರಟಿಕ್ ನೇತತ್ವದ ರಾಜ್ಯಗಳು ಮತ್ತು ನಾಗರಿಕ ಹಕ್ಕುಗಳ ಗುಂಪುಗಳು ನ್ಯಾಯಾಲಯದಲ್ಲಿ ಅವರ ಅಜೆಂಡಾವನ್ನು ತಡೆಯುವ ಅವರ ವಿರೋಧಿಗಳ ಆರಂಭಿಕ ಪ್ರಯತ್ನದಲ್ಲಿ ಜನ ಹಕ್ಕು ಪೌರತ್ವವನ್ನು ಹಿಂದಕ್ಕೆ ಪಡೆಯುವ ಟ್ರಂಪ್ ಅವರ ಪ್ರಯತ್ನವನ್ನು ಪ್ರಶ್ನಿಸಿ ಮೊಕದ್ದಮೆಗಳ ಗುಂಪನ್ನು ಸಲ್ಲಿಸಿದ ಕೇವಲ ಒಂದು ದಿನದ ನಂತರ ಈ ತೀರ್ಪು ಬಂದಿದೆ.

ನಾನು ನಾಲ್ಕು ದಶಕಗಳಿಂದ ಬೆಂಚ್‌ನಲ್ಲಿದ್ದೇನೆ. ಪ್ರಸ್ತುತಪಡಿಸಿದ ಪ್ರಶ್ನೆಯು ಈ ಪ್ರಶ್ನೆಯಂತೆ ಸ್ಪಷ್ಟವಾಗಿರುವ ಇನ್ನೊಂದು ಪ್ರಕರಣವನ್ನು ನಾನು ನೆನಪಿಸಿಕೊಳ್ಳುವುದಿಲ್ಲ, ಎಂದು ಯುಎಸ್ ಜಿಲ್ಲಾ ನ್ಯಾಯಾಧೀಶ ಜಾನ್ ಕೊಫೆನರ್ ನ್ಯಾಯಾಂಗ ಇಲಾಖೆಯ ವಕೀಲರಿಗೆ ತಿಳಿಸಿದರು.

ಇದು ಅಸಂವಿಧಾನಿಕ ಆದೇಶ ಎಂದು ನ್ಯಾಯಾಧೀಶರು ಸೇರಿಸಿದರು.


# ವಿಶ್ವಸಂಸ್ಥೆಯ ಹವಾಮಾನ ಶೃಂಗಸಭೆ, ಬ್ರೆಜಿಲ್ ಸಜ್ಜು

**ಬ್ರೆಸಿಲಿಯಾ:** ಮುಂದಿನ ವಿಶ್ವಸಂಸ್ಥೆಯ ಹವಾಮಾನ ಶೃಂಗಸಭೆಯ ಅಧ್ಯಕ್ಷತೆಯನ್ನು ಬ್ರೆಜಿಲ್ ವಹಿಸಲು ಸಜ್ಜಾಗಿದೆ. ಸಿದ್ಧತೆ ಆರಂಬಿಸಿದೆ. ನವೆಂಬರ್‌ನಲ್ಲಿ ಅಮೆಜಾನ್ ನಗರದ ಬೆಲೆಮ್‌ನಲ್ಲಿ ನಡೆಯಲಿರುವ ಕಾಪ್ ಸಭೆಯಲ್ಲಿ, ಅಭಿವೃದ್ಧಿಶೀಲ ರಾಷ್ಟ್ರಗಳು ಅಭಿವೃದ್ಧಿಶೀಲ ರಾಷ್ಟ್ರಗಳ ಇಂಧನ ಪರಿವರ್ತನೆಗೆ ತಮ್ಮ ಬೆಂಬಲವನ್ನು ಹೆಚ್ಚಿಸಲು ಬ್ರೆಜಿಲ್ ಒತ್ತಾಯಿಸುತ್ತದೆ. ಬ್ರೆಜಿಲ್ ಅಧ್ಯಕ್ಷ ಲೂಯಿಜ್ ಇನಾಸಿಯೊ ಲುಲಾ ಡ ಸಿಲ್ವಾ 2023ರಲ್ಲಿ ಅಧಿಕಾರಕ್ಕೆ ಮರಳಿದ ನಂತರ ಕೊರಿಯಾ ಡೊ ಲಾಗೊ ಪ್ರತಿ ಅಂತರರಾಷ್ಟ್ರೀಯ ಹವಾಮಾನ ಶೃಂಗಸಭೆಯಲ್ಲಿ ಬ್ರೆಜಿಲ್ ಅನ್ನು ಪ್ರತಿನಿಧಿಸಿದ್ದಾರೆ.

ಹವಾಮಾನ ಬದಲಾವಣೆಯ ವಿರುದ್ಧದ ಹೋರಾಟದಲ್ಲಿ ಚೀನಾವನ್ನು ಒಂದು ಉದಾಹರಣೆಯಾಗಿದೆ. ಶ್ರೀಮಂತ ರಾಷ್ಟ್ರಗಳು ತಮ್ಮ ಜವಾಬ್ದಾರಿಗಳಿಂದ ನುಣುಚಿಕೊಳ್ಳುವ ಪ್ರವೃತ್ತಿ ಸರಿಯಲ್ಲ ಎನ್ನುವ ಆರೋಪವೂ ಕೇಳಿ ಬಂದಿದೆ.

ನವೆಂಬರ್‌ನಲ್ಲಿ ಅಮೆಜಾನ್ ಮಳೆಕಾಡಿನಲ್ಲಿ ನಡೆಯಲಿರುವ ಮೊದಲ ಹವಾಮಾನ ಸಮ್ಮೇಳನದ ಅಧ್ಯಕ್ಷತೆ ವಹಿಸಲಿರುವ ಆಂಡ್ರೆ ಕೊರಿಯಾ ಡೊ ಲಾಗೊ, ಹವಾಮಾನ ಬದಲಾವಣೆ ಎದುರಿಸುವಲ್ಲಿ ಚೀನಾದ ''ಅಸಾಧಾರಣ ಪ್ರಗತಿಯ ಬಗ್ಗೆ ಮೆಚ್ಚುಗೆ ವ್ಯಕ್ತವಾಗಿದೆ. ಹವಾಮಾನ ತಾಪಮಾನ ಏರಿಕೆಯ ವಿರುದ್ಧದ ಜಾಗತಿಕ ಹೋರಾಟಕ್ಕೆ ಶ್ರೀಮಂತ ರಾಷ್ಟ್ರಗಳು ತಮ್ಮ ಹಣಕಾಸಿನ ಕೊಡುಗೆಗಳನ್ನು ಕಡಿಮೆ ಮಾಡಲು ಪ್ರಯತ್ನಿಸುತ್ತಿವೆ ಎಂದು ಕೊರಿಯಾ ಡೊ ಲಾಗೊ ಆರೋಪಿಸಿದ್ದಾರೆ. 2015 ರ ಪ್ಯಾರಿಸ್ ಒಪ್ಪಂದದ ಅಡಿಯಲ್ಲಿ ಅವರ ಬದ್ಧತೆಗಳ ದೃಷ್ಟಿಯಿಂದ ''ಆಳವಾಗಿ ತಪ್ಪು'' ಎಂದು ಹೇಳಿದ ಅವರು ''ಐತಿಹಾಸಿಕ ಜವಾಬ್ದಾರಿಗಳನ್ನು ಹೊಂದಿರುವ ದೇಶಗಳು ಹಣಕಾಸಿನ ಅಂಶದಲ್ಲಿ ಹೆಚ್ಚಿನ ಪಾತ್ರವನ್ನು ವಹಿಸುವಂತೆ ನಾವು ಕೆಲಸ ಮಾಡಬೇಕು'' ಎಂದು ಅವರು ಹೇಳಿದ್ದಾರೆ.

ಅಮೇರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ದೇಶವನ್ನು ಎರಡನೇ ಬಾರಿಗೆ ಪ್ಯಾರಿಸ್ ಒಪ್ಪಂದದಿಂದ ಹೊರತೆಗೆದ ಮತ್ತು ಪಳೆಯುಳಿಕೆ ಇಂಧನಗಳ ಬಳಕೆಯನ್ನು ದ್ವಿಗುಣಗೊಳಿಸಿದೆ.



> **ಸೌರ ಫಲಕಗಳು ಮತ್ತು ಎಲೆಕ್ಟ್ರಿಕ್ ಕಾರುಗಳ ಬೆಲೆಯನ್ನು ಕಡಿಮೆ ಮಾಡುವ ಮೂಲಕ, ಚೀನಾ ಅಭಿವೃದ್ಧಿಶೀಲ ರಾಷ್ಟ್ರಗಳಿಗೆ ಕೇವಲ ಸಾಂಕೇತಿಕ ಮೊತ್ತವನ್ನು ನೀಡುವುದಕ್ಕಿಂತ ಹೆಚ್ಚಿನ ಬೆಂಬಲ ನೀಡುತ್ತಿದೆ, ಇದು ಅಭಿವೃದ್ಧಿ ಹೊಂದಿದ ದೇಶಗಳು ಬಯಸುತ್ತದೆ'' ಎಂದು ಅನುಭವಿ ಹವಾಮಾನ ತಜ್ಞರು ಹೇಳಿದ್ದಾರೆ.**

# ಧ್ವನಿವರ್ಧಕ ಬಳಕೆ ಯಾವುದೇ ಧರ್ಮದ ಅವಿಭಾಜ್ಯ ಅಂಗವಲ್ಲ

**ಮುಂಬೈ:** ಧ್ವನಿವರ್ಧಕ ಬಳಕೆ ಮಾಡುವುದು ಯಾವುದೇ ಧರ್ಮದ ಅವಿಭಾಜ್ಯ ಅಂಗವಲ್ಲ ಎಂದು ಬಾಂಬೆ ಹೈಕೋರ್ಟ್ ಹೇಳಿದೆ. ಶಬ್ದ ಮಾಲಿನ್ಯದ ನಿಯಮಗಳನ್ನು ಉಲ್ಲಂಘಿಸುವ ಧ್ವನಿವರ್ಧಕಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ಕಾನೂನು ಜಾರಿ ಸಂಸ್ಥೆಗಳಿಗೆ ನ್ಯಾಯಾಲಯ ಸೂಚಿಸಿದೆ. ನ್ಯಾಯಮೂರ್ತಿ ಎಎಸ್ ಗಡ್ಕರಿ ಮತ್ತು ನ್ಯಾಯಮೂರ್ತಿ ಎಸ್‌ಸಿ ಚಂದಕ್ ಅವರ ವಿಭಾಗೀಯ ಪೀಠವು ಶಬ್ದವು ಆರೋಗ್ಯಕ್ಕೆ ದೊಡ್ಡ ಅಪಾಯವಾಗಿದೆ ಎಂದು ಹೇಳಿದೆ.

ಧ್ವನಿವರ್ಧಕವನ್ನು ಬಳಸಲು ಅವಕಾಶ ನೀಡದಿದ್ದರೆ ಅವರ ಹಕ್ಕುಗಳಿಗೆ ಯಾವುದೇ ರೀತಿಯಲ್ಲಿ ಧಕ್ಕೆಯಾಗುತ್ತದೆ ಎಂದು ಯಾರೂ ಹೇಳಿಕೊಳ್ಳುವುದಿಲ್ಲ. ಸ್ವಯಂ-ಡೆಸಿಬಲ್ ಮಿತಿಗಳನ್ನು ಹೊಂದಿರುವ ಮಾಪನಾಂಕ ಧ್ವನಿ ವ್ಯವಸ್ಥೆಗಳನ್ನು ಒಳಗೊಂಡಂತೆ ಶಬ್ದ ಮಟ್ಟವನ್ನು ನಿಯಂತ್ರಿಸಲು ಕಾರ್ಯವಿಧಾನಗಳನ್ನು ಅಳವಡಿಸಿಕೊಳ್ಳಲು ಧಾರ್ಮಿಕ ಸಂಸ್ಥೆಗಳಿಗೆ ನಿರ್ದೇಶನ ನೀಡುವಂತೆ ಹೈಕೋರ್ಟ್ ರಾಜ್ಯ ಸರ್ಕಾರವನ್ನು ಕೇಳಿದೆ.

ಉಪನಗರ ಕುರ್ಲಾ ಜಾಗೋ ನೆಹರು ನಗರ ನಿವಾಸಿಗಳ ಕಲ್ಯಾಣ ಸಂಘ ಮತ್ತು ಶಿವಸೃಷ್ಟಿ ಸಹಕಾರ ಹೌಸಿಂಗ್ ಸೊಸೈಟೀಸ್ ಅಸೋಸಿಯೇಷನ್ ಲಿಮಿಟೆಡ್‌ನಲ್ಲಿ ಎರಡು ವಸತಿ ಸಂಘಗಳು ಸಲ್ಲಿಸಿದ ಮನವಿಯನ್ನು ನ್ಯಾಯಾಲಯವು ವಿಚಾರಣೆ ನಡೆಸುತ್ತಿದೆ.

ಆ ಪ್ರದೇಶದಲ್ಲಿನ ಮಸೀದಿಗಳಲ್ಲಿ ಅಳವಡಿಸಲಾಗಿರುವ ಧ್ವನಿವರ್ಧಕಗಳಿಂದ ಉಂಟಾಗುವ ಶಬ್ದ ಮಾಲಿನ್ಯದ ವಿರುದ್ಧ ಪೊಲೀಸರು ನಿಷ್ಕ್ರಿಯರಾಗಿದ್ದಾರೆ ಎಂದು ಅರ್ಜಿಯಲ್ಲಿ ಆರೋಪಿಸಲಾಗಿದೆ. ಧ್ವನಿ ವರ್ಧಕದ ಬಳಕೆ ಯಾವುದೇ ಧರ್ಮದ ಅವಿಭಾಜ್ಯ ಅಂಗವಲ್ಲ ಎಂದಿರುವ ಪೀಠವು ಮುಂಬೈ ಮಹಾನಗರವಾಗಿದೆ ಮತ್ತು ನಗರದ ಪ್ರತಿಯೊಂದು ಭಾಗದಲ್ಲೂ ವಿವಿಧ ಧರ್ಮಗಳ ಜನರು ವಾಸಿಸುತ್ತಿದ್ದಾರೆ ಎಂಬುದು ಸ್ಪಷ್ಟವಾಗಿದೆ. ಸಾರ್ವಜನಿಕ ಹಿತದೃಷ್ಟಿಯಿಂದ ಇಂತಹ ಅನುಮತಿ ನೀಡಬಾರದು.

ಅಂತಹ ಅನುಮತಿಯನ್ನು ನೀಡದಿರುವುದು ಭಾರತೀಯ ಸಂವಿಧಾನದ ಆರ್ಟಿಕಲ್ 19 ಅಥವಾ 25 ರ ಅಡಿಯಲ್ಲಿ ಹಕ್ಕುಗಳನ್ನು ಉಲ್ಲಂಘಿಸುವುದಿಲ್ಲ. ಧ್ವನಿವರ್ಧಕದ ಬಳಕೆ ಯಾವುದೇ ಧರ್ಮದ ಅವಿಭಾಜ್ಯ ಅಂಗವಲ್ಲ.

### ಸರ್ಕಾರ ಮತ್ತು ಅಧಿಕಾರಿಗಳ ಕರ್ತವ್ಯ

**ಕಾನೂನಿನ ನಿಬಂಧನೆಗಳ ಅಡಿಯಲ್ಲಿ ಸೂಚಿಸಲಾದ ಎಲ್ಲಾ ಅಗತ್ಯ ಕ್ರಮಗಳನ್ನು ಅಳವಡಿಸಿಕೊಂಡು ಕಾನೂನನ್ನು ಜಾರಿಗೊಳಿಸುವುದು ರಾಜ್ಯ ಸರ್ಕಾರ ಮತ್ತು ಇತರ ಅಧಿಕಾರಿಗಳ ಕರ್ತವ್ಯವಾಗಿದೆ ಎಂದು ನ್ಯಾಯಾಲಯ ಹೇಳಿದೆ. ಯಾವುದೇ ವ್ಯಕ್ತಿ/ವ್ಯಕ್ತಿಗಳ ಗುಂಪು/ವ್ಯಕ್ತಿಗಳ ಸಂಘಟನೆಯು ದೇಶದ ಕಾನೂನನ್ನು ಅನುಸರಿಸುವುದಿಲ್ಲ ಎಂದು ಹೇಳುವ ಮತ್ತು ಕಾನೂನು ಜಾರಿ ಅಧಿಕಾರಿಗಳು ಮೂಕ ಪ್ರೇಕ್ಷಕರಾಗಿ ಉಳಿಯುವಂತಹ ಪರಿಸ್ಥಿತಿ ಪ್ರಜಾಸತ್ತಾತ್ಮಕ ರಾಜ್ಯದಲ್ಲಿ ಇರಲು ಸಾಧ್ಯವಿಲ್ಲ ಎಂದು ತೀರ್ಪು ಹೇಳಿದೆ.**



# ಹತ್ತು ಕೋಟಿಗೂ ಹೆಚ್ಚು ಜನರು ಪವಿತ್ರ ಸ್ನಾನ

**ಪ್ರಯಾಗ ರಾಜ್:** ತ್ರಿವೇಣಿ ಸಂಗಮದಲ್ಲಿ ಪುಣ್ಯಸ್ನಾನಕ್ಕಾಗಿ ಭಕ್ತರು ನೆರೆದಿದ್ದಾರೆ. ಮಹಾಕುಂಭದ 12 ನೇ ದಿನವಾಗಿದೆ ಮತ್ತು ಇದುವರೆಗೆ ಹತ್ತು ಕೋಟಿಗೂ ಹೆಚ್ಚು ಜನರು ಪವಿತ್ರ ಸ್ನಾನ ಮಾಡಿದ್ದಾರೆ. ಶುಕ್ರವಾರ ಮುಂಜಾನೆಯಿಂದಲೇ ಸಂಗಮದಲ್ಲಿ ಜನಸಂದಣಿ ಸೇರಲಾರಂಭಿಸಿದೆ. ಗುರುವಾರ ಸಂಜೆ 4 ಗಂಟೆವರೆಗೆ 53 ಲಕ್ಷ ಮಂದಿ ಸ್ನಾನ ಮಾಡಿದ್ದಾರೆ. 2500 ಡ್ರೋನ್‌ಗಳೊಂದಿಗೆ ಪ್ರಯಾಗ್‌ರಾಜ್‌ನಲ್ಲಿ ವಿಶೇಷ ಮಹಾಡ್ರೋನ್ ಪ್ರದರ್ಶನವನ್ನು ಆಯೋಜಿಸಲಾಗಿದೆ.

ಯುದ್ಧದ ಭೀಕರತೆಯನ್ನು ಎದುರಿಸುತ್ತಿರುವ ರಷ್ಯಾ ಮತ್ತು ಉಕ್ರೇನ್‌ನ ಭಕ್ತರು ಸಹ ಪ್ರಯಾಗರಾಜ್‌ಗೆ ಆಗಮಿಸಿ ಸಂಗಮದ ಮರಳಿನಲ್ಲಿ ಭಜನೆ ಮತ್ತು ಭಕ್ತಿಯಲ್ಲಿ ಮುಳುಗಿದ್ದಾರೆ.



ಯಾತ್ರಾ ನಗರಿ ಪ್ರಯಾಗ್‌ರಾಜ್‌ನಲ್ಲಿ ಹನ್ನೆರಡನೇ ದಿನದಂದು ಭಕ್ತರು ಭಕ್ತಿ ಮತ್ತು ನಂಬಿಕೆಯಿಂದ ಸಂಗಮದಲ್ಲಿ ಸ್ನಾನ ಮಾಡುತ್ತಿದ್ದಾರೆ.

ಶುಕ್ರವಾರದಿಂದ ಮಹಾಕುಂಭದಲ್ಲಿ ಹೊರಗಿನ ವಾಹನಗಳ ಪ್ರವೇಶವನ್ನು ನಿಷೇಧಿಸಲಾಗಿದೆ. ಶನಿವಾರ ಮತ್ತು ಭಾನುವಾರ ಗಣರಾಜ್ಯೋತ್ಸವದ ರಜೆಯನ್ನು ಗಮನದಲ್ಲಿಟ್ಟುಕೊಂಡು ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ಸಂಚಾರ ಉಸ್ತುವಾರಿ ಅಮಿತ್ ತಿಳಿಸಿದ್ದಾರೆ. ಸಿಎಂ ಯೋಗಿ ಮತ್ತೊಮ್ಮೆ ಮಹಾಕುಂಭಕ್ಕೆ ಭೇಟಿ ನೀಡಲಿದ್ದಾರೆ. ಇಲ್ಲಿ ಮೌನಿ ಅಮಾವಾಸ್ಯೆ ಸ್ನಾನದ ಸಿದ್ಧತೆ ಮತ್ತು ಪ್ರಧಾನಿ ಮೋದಿ ಆಗಮನದ ಬಗ್ಗೆ ಪರಿಶೀಲಿಸಲಿದ್ದಾರೆ.

### ವಿಶೇಷ ಡ್ರೋನ್ ಪ್ರದರ್ಶನ


ಮಹಾಕುಂಭದಲ್ಲಿ, ಪ್ರವಾಸೋದ್ಯಮ ಇಲಾಖೆಯು 2500 ಡ್ರೋನ್‌ಗಳೊಂದಿಗೆ ವಿಶೇಷ ಮಹಾಡ್ರೋನ್ ಪ್ರದರ್ಶನವನ್ನು ಆಯೋಜಿಸಲಾಗಿದೆ. ಮೇಕ್-ಇನ್-ಇಂಡಿಯಾ ಡ್ರೋನ್‌ಗಳು ತ್ರಿವೇಣಿ ಸಂಗಮದ ಆಕಾಶದಲ್ಲಿ ಸಂಪ್ರದಾಯ ಮತ್ತು ತಂತ್ರಜ್ಞಾನದ ವಿಶಿಷ್ಟ ಸಂಗಮವನ್ನು ಪ್ರಸ್ತುತಪಡಿಸುತ್ತವೆ.

ಈ ಡ್ರೋನ್ ಶೋ ಜನವರಿ 24, 25 ಮತ್ತು 26 ರಂದು ಸೆಕ್ಟರ್ 7 ರಲ್ಲಿ ಸಂಜೆ 7 ಗಂಟೆಗೆ ನಡೆಯಲಿದೆ. ಇದಕ್ಕಾಗಿ ವಿವಿಧ ಥೀಮ್‌ಗಳನ್ನು ಆಯ್ಕೆ ಮಾಡಲಾಗಿದೆ.

# ಕೇರಳದಲ್ಲೂ ಕೋವಿಡ್ ಕಾಲದಲ್ಲಿ ಅಕ್ರಮ : 3 ಪಟ್ಟು ಹೆಚ್ಚು ಹಣಕ್ಕೆ ಪಿಪಿಇ ಕಿಟ್ ಖರೀದಿ

## ಸಾರ್ವಜನಿಕ ಮಾರುಕಟ್ಟೆ ಬೆಲೆಗಿಂತ ಮೂರು ಪಟ್ಟು ಹೆಚ್ಚು ಬೆಲೆಗೆ ಪಿಪಿಇ ಕಿಟ್ ಖರೀದಿಸಲಾಗಿದೆ ಎಂದು ವರದಿ ತಿಳಿಸಿದೆ

**ತಿರುವನಂತಪುರಂ:** ಕೋವಿಡ್ ಅವಧಿಯ ಪಿಪಿಇ ಕಿಟ್ ವಹಿವಾಟಿನಲ್ಲಿ ಭಾರಿ ಅಕ್ರಮ ನಡೆದಿದೆ ಎಂದು ಸಿಎಜಿ ವರದಿ ಹೇಳಿದೆ. ಪಿಪಿಇ ಕಿಟ್ ಖರೀದಿ ಸಂಬಂಧ ಪ್ರತಿ ಪಕ್ಷದ ಆರೋಪಗಳನ್ನು ಸಿಎಜಿ ಪುರಸ್ಕರಿಸಿದೆ. ವರದಿಯಲ್ಲಿ ಅಕ್ರಮಗಳನ್ನು ಇಂಚಿಂಚಾಗಿ ಬೊಟ್ಟು ಮಾಡಿ ತೋರಿಸಲಾಗಿದೆ. ಪಿಪಿಇ ಕಿಟ್ ಅಕ್ರಮಗಳು ಕೇರಳ ಸರಕಾರಕ್ಕೆ 10.23 ಕೋಟಿ ರೂ.ಗಳ ಹೆಚ್ಚುವರಿ ಹೊರೆಗೆ ಕಾರಣವಾಗಿದೆ. ಸಾರ್ವಜನಿಕ ಮಾರುಕಟ್ಟೆ ಬೆಲೆಗಿಂತ ಮೂರು ಪಟ್ಟು ಹೆಚ್ಚು ಬೆಲೆಗೆ ಪಿಪಿಇ ಕಿಟ್



2020ರ ಮಾರ್ಚ್ 28ರಂದು 550 ರೂ.ಗಳಿಗೆ ಪಿಪಿಇ ಕಿಟ್ ಖರೀದಿಸಲಾಗಿದೆ. ಮಾರ್ಚ್ 30ರಂದು ಇನ್ನೊಂದು ಕಂಪನಿಯಿಂದ 1,550 ರೂ.ಗೆ ಪಿಪಿಇ ಕಿಟ್ ಖರೀದಿಸಲಾಗಿದೆ. ಕೇವಲ ಎರಡು ದಿನಗಳಲ್ಲಿ ಸಾವಿರ ರೂ. ಹೆಚ್ಚು ನೀಡಲಾಗಿದೆ. ಕಡಿಮೆ ಬೆಲೆಗೆ ಪಿಪಿಇ ಕಿಟ್‌ಗಳನ್ನು ಒದಗಿಸುವುದಾಗಿ ಭರವಸೆ ನೀಡಿದ ಕಂಪನಿಗೆ ವಂಚನೆ ಮಾಡಲಾಗಿದೆ. ಸ್ಯಾನ್ ಫಾರ್ಮಾ ಕಂಪನಿಗೆ ಮುಂಗಡವಾಗಿ ಪೂರ್ಣ ಹಣವನ್ನು ಪಾವತಿಸಲಾಗಿದೆ ಎಂದು ಸಿಎಜಿ ಬಹಿರಂಗಪಡಿಸಿದೆ.

ವಿಧಾನಸಭೆಗೆ ಸಲ್ಲಿಸಲಾದ ಸಿಎಜಿ ವರದಿಯಲ್ಲಿ ರಾಜ್ಯದ ಸಾರ್ವಜನಿಕ ಆರೋಗ್ಯ ಕ್ಷೇತ್ರದ ಕಳಪೆ ಗುಣಮಟ್ಟವನ್ನು ತೀವ್ರವಾಗಿ ಟೀಕಿಸಲಾಗಿದೆ. ಸಾರ್ವಜನಿಕ ಆರೋಗ್ಯ ವಲಯದಲ್ಲಿ ಗುಣಮಟ್ಟದ ಕೊರತೆಯಿದೆ ಮತ್ತು ರಾಜ್ಯ ದಲ್ಲಿ ತಜ್ಞ ವೈದ್ಯರು ಮತ್ತು ಆರೋಗ್ಯ ಕಾರ್ಯಕರ್ತರ ಕೊರತೆ ಇದೆ ಎಂದು ಸಿಎಜಿ ವರದಿ ಉಲ್ಲೇಖಿಸಿದೆ.

ಕೇರಳ ವೈದ್ಯಕೀಯ ಸೇವೆಗಳ ಕ್ರಮವನ್ನೂ ವರದಿಯಲ್ಲಿ ತೀವ್ರವಾಗಿ ಟೀಕಿಸಲಾಗಿದೆ. ಅಗತ್ಯದ ಔಷಧಗಳನ್ನು ಸಾಕಷ್ಟು ಪ್ರಮಾಣದಲ್ಲಿ ಪೂರೈಸಲು ಸಾಧ್ಯವಾಗುತ್ತಿಲ್ಲ. ಔಷಧಗಳ ಗುಣಮಟ್ಟವನ್ನು ಖಚಿತಪಡಿಸಿಕೊಳ್ಳಲು ಯಾವುದೇ ಕ್ರಮಗಳನ್ನು ತೆಗೆದುಕೊಳ್ಳಲಾಗಿಲ್ಲ ಎಂದು ವರದಿಯಲ್ಲಿ ಹೇಳಲಾಗಿದೆ. ಆದ್ರಮ್ ಮಿಷನ್ ತನ್ನ ನೈಜ ಉದ್ದೇಶಗಳನ್ನು ಈಡೇರಿಸುತ್ತಿಲ್ಲ.

ವೈದ್ಯಕೀಯ ಕಾಲೇಜುಗಳಲ್ಲಿ ಶೈಕ್ಷಣಿಕ ಚಟುವಟಿಕೆಗಳನ್ನು ಪ್ರಾರಂಭಿಸುವಲ್ಲಿ ಅಸಾಮಾನ್ಯ ವಿಳಂಬ ಆಗಿದೆ ಎಂದು ವರದಿಯಲ್ಲಿ ಆರೋಪಿಸಿದೆ. ಟೆಂಡರ್ ಮಾನದಂಡಗಳಲ್ಲಿ ಗಂಭೀರ ಲೋಪ ಆಗಿದೆ. ಸಾಕಷ್ಟು ಔಷಧ ಲಭಿಸದ ಬಗ್ಗೆ ವ್ಯಾಪಕ ದೂರುಗಳು ಇವೆ. ಔಷಧ ಕಂಪನಿಗಳಿಂದ 1.64 ಕೋಟಿ ರೂ. ದಂಡ ವಸೂಲಿ ಬಾಕಿ ಇದೆ. ಇದನ್ನು ಸಂಗ್ರಹಿಸುತ್ತಿಲ್ಲ ಎಂದು ವರದಿ ಆರೋಪಿಸಿದೆ.



### 90 ಕೋಟಿ ರೂ. ಪಾವತಿ ಬಾಕಿ

**ಕೋಝಿಕ್ಕೋಡ್ ಮೆಡಿಕಲ್ ಕಾಲೇಜಿನಲ್ಲಿ ಔಷಧಗಳ ತೀವ್ರ ಕೊರತೆಯಿಂದಾಗಿ ಆಸ್ಪತ್ರೆ ನಿರ್ವಹಣೆ ಅಸ್ತವ್ಯಸ್ತಗೊಂಡಿದೆ. ಆಸ್ಪತ್ರೆ ಅಧಿಕಾರಿಗಳು ರೋಗಿಗಳಿಗೆ ಡಯಾಲಿಸಿಸ್ ಸೇರಿದಂತೆ ಔಷಧಗಳನ್ನು ಹೊರಗಿನಿಂದ ಖರೀದಿಸುವಂತೆ ಸೂಚಿಸುತ್ತಿದ್ದಾರೆ. ಔಷಧದ ಕೊರತೆಯಿಂದಾಗಿ ರೋಗಿಗಳು ಮತ್ತು ಕುಟುಂಬಗಳು ತೀವ್ರ ತೊಂದರೆ ಅನುಭವಿಸುತ್ತಿವೆ. ಔಷಧ ವಿತರಣೆಯಲ್ಲಿ 90 ಕೋಟಿ ರೂ. ಪಾವತಿ ಬಾಕಿ ಇದೆ. ಜ. 10ರಿಂದ ಕಂಪನಿಗಳು ಔಷಧ ವಿತರಣೆ ನಿಲ್ಲಿಸಿವೆ. ಬಾಕಿ ಮೊತ್ತದ ಕನಿಷ್ಠ ಶೇ. 60 ಪಾವತಿಸುವಂತೆ ಕಂಪನಿಗಳು ಬೇಡಿಕೆ ಇರಿಸಿವೆ.**

**ಸಿಎಜಿ ವರದಿ ಹೇಳಿಕೆ**

- **ಕೋವಿಡ್ ಅವಧಿಯ ಪಿಪಿಇ ಕಿಟ್ ಖರೀದಿ ವಹಿವಾಟಿನಲ್ಲಿ ಭಾರಿ ಅಕ್ರಮ ಕೇರಳ ಸಿಎಜಿ ವರದಿ ಹೇಳಿದೆ.**
- **ಪಿಪಿಇ ಕಿಟ್ ಅಕ್ರಮಗಳು ಕೇರಳ ಸರಕಾರಕ್ಕೆ 10.23 ಕೋಟಿ ರೂ.ಗಳ ಹೆಚ್ಚುವರಿ ಹೊರೆಗೆ ಕಾರಣವಾಗಿದೆ.**
- **ಸಾರ್ವಜನಿಕ ಮಾರುಕಟ್ಟೆ ಬೆಲೆಗಿಂತ ಮೂರು ಪಟ್ಟು ಹೆಚ್ಚು ಬೆಲೆಗೆ ಪಿಪಿಇ ಕಿಟ್ ಖರೀದಿಸಲಾಗಿದೆ ಎಂದು ವರದಿ ತಿಳಿಸಿದೆ.**

# ಮಿನಿ ನ್ಯೂಸ್

## ಮಣಿಪುರದಲ್ಲಿ ನಿಷೇಧಿತ ಸಂಘಟನೆಯ ಮೂವರು ಉಗ್ರರ ಸೆರೆ

**ಇಂಫಾಲ್:** ಮಣಿಪುರದ ತೌಬಾಲ್ ಮತ್ತು ಇಂಫಾಲ್ ಪಶ್ಚಿಮ ಜಿಲ್ಲೆಗಳಲ್ಲಿ ಪ್ರತ್ಯೇಕ ಕಾರ್ಯಾಚರಣೆಯಲ್ಲಿ ಭದ್ರತಾ ಪಡೆಗಳು ನಿಷೇಧಿತ ಸಂಘಟನೆಗಳ ಮೂರು ಕೇಡರ್‌ಗಳನ್ನು ಬಂಧಿಸಿವೆ ಎಂದು ಪೊಲೀಸರು ತಿಳಿಸಿದ್ದಾರೆ. ನಿಷೇಧಿತ ಕಂಗ್ಲೀಪಕ್ ಕಮ್ಯುನಿಸ್ಟ್ ಪಾರ್ಟಿ (ಪಿಡಬ್ಲ್ಯುಜಿ) ಯ ಇಬ್ಬರು ಸಕ್ರಿಯ ಸದಸ್ಯರನ್ನು ತೌಬಲ್‌ನ ಉನಿಂಗ್ ಕಾಂಗ್‌ನಿಂದ ನಡೆಸಲಾಯಿತು ಎಂದು ಅವರು ಹೇಳಿದರು. ಅವರ ಬಳಿಯಿದ್ದ ಪಿಸ್ತೂಲ್, ಮದ್ದುಗುಂಡು, ನಗದು ಮತ್ತಿತರ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ. ಮತ್ತೊಂದು ಕಾರ್ಯಾಚರಣೆಯಲ್ಲಿ, ಇಂಫಾಲ್ ವೆಸ್ಟ್‌ನ ಲಾಂಗೋಲ್ ಟೈಪ್ 111 ನಿಂದ ಕಾನೂನುಬಾಹಿರವಾದ ಕಂಗ್ಲೇಯಾವೋಲ್ ಕನ್ನಾ ಲುಪ್ (ಕೆವೈಕೆಎಲ್) ಸದಸ್ಯನನ್ನು ಬಂಧಿಸಲಾಗಿದೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ತನಿಖೆ ನಡೆಯುತ್ತಿದೆ

## ಪತಿ ಹತ್ಯೆ, ಪತ್ನಿಗೆ ಜೀವಾವಧಿ ಶಿಕ್ಷೆ

**ಅಮ್ರೋಹಾ:** ಉತ್ತರ ಪ್ರದೇಶದ ಅಮ್ರೋಹಾ ಜಿಲ್ಲೆಯ ಹಸನ್‌ಪುರದಲ್ಲಿ ಪತಿಯನ್ನು ಹತ್ಯೆಗೈದ ಪತ್ನಿ, ಆಕೆಯ ಪ್ರಿಯಕರ ಮತ್ತು ಸಹಚರನಿಗೆ ಜೀವಾವಧಿ ಶಿಕ್ಷೆ ವಿಧಿಸಲಾಗಿದೆ.

ಮಹಿಳೆ ತನ್ನ ಪ್ರಿಯಕರನ ಜೊತೆ ಸೇರಿ ಆರು ವರ್ಷಗಳ ಹಿಂದೆ ಕೊಲೆ ಮಾಡಿ ಆತ್ಮಹತ್ಯೆ ಎಂದು ಬಿಂಬಿಸಲು ಯತ್ನಿಸಿದ್ದಾಳೆ. ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶ ಶಾಕಿರ್ ಹಸನ್ ಅವರು ಬಬಿತಾ ರಾಣಿ, ಆಕೆಯ ಪ್ರಿಯಕರ ಪಪ್ಪು ಮತ್ತು ರವಿಕುಮಾರ್ ಅಲಿಯಾಸ್ ಮಿಂಟುಗೆ ತಲಾ 14,000 ರೂ. ದಂಡ ವಿಧಿಸಿದೆ.

ಅ. 29, 2018 ರಂದು ಗುತ್ತಿಗೆ ಆಧಾರದ ಶಿಕ್ಷಕ ಪ್ರೇಮ್ ಕುಮಾರ್ (32) ಹಸನ್‌ಪುರ ಪ್ರದೇಶದ ಜೈತೌಲಿ ಗ್ರಾಮದ ತನ್ನ ಮನೆಯಲ್ಲಿ ನೇಣು ಬಿಗಿದ ಸ್ಥಿತಿಯಲ್ಲಿ ಪತ್ತೆಯಾಗಿದ್ದಾರೆ. ಅವರ ಪತ್ನಿ ಬಬಿತಾ ಆರಂಭದಲ್ಲಿ ಇದು ಆತ್ಮಹತ್ಯೆ ಎಂದು ಹೇಳಿದ್ದಾರೆ. ಶವಸಂಸ್ಕಾರಕ್ಕೆ ಸಿದ್ಧತೆಯೂ ಆರಂಭಗೊಂಡಾಗ, ಪೊಲೀಸರು ಅನುಮಾನಗೊಂಡು ಅಂತ್ಯಕ್ರಿಯೆಯನ್ನು ಮಧ್ಯದಲ್ಲಿಯೇ ನಿಲ್ಲಿಸಿದ್ದಾರೆ. ಪ್ರೇಮ್ ಕುಮಾರ್ ಕತ್ತು ಹಿಸುಕಿ ಕೊಲೆ ಮಾಡಿರುವುದು ಮರಣೋತ್ತರ ಪರೀಕ್ಷೆಯ ವರದಿಯಿಂದ ತಿಳಿದುಬಂದಿದೆ.

## ಮಹಾರಾಷ್ಟ್ರದಲ್ಲಿ 10 ಕೋಟಿ ಮೌಲ್ಯದ ಅಪಾಯಕಾರಿ ರಾಸಾಯನಿಕ ವಶ

**ಥಾಣೆ:** ಮಹಾರಾಷ್ಟ್ರದ ಥಾಣೆ ಜಿಲ್ಲೆಯಲ್ಲಿ ಪೊಲೀಸರು 30 ಗೋದಾಮುಗಳ ಮೇಲೆ ದಾಳಿ ನಡೆಸಿ 10 ಕೋಟಿ ರೂಪಾಯಿ ಮೌಲ್ಯದ ಅಪಾಯಕಾರಿ ರಾಸಾಯನಿಕಗಳನ್ನು ವಶಪಡಿಸಿಕೊಂಡಿದ್ದಾರೆ.

ಈ ಗೋದಾಮುಗಳ ಮಾಲೀಕರ ವಿರುದ್ಧ ಭಾರತೀಯ ನ್ಯಾಯ ಸಂಹಿತೆ, ಪರಿಸರ ಸಂರಕ್ಷಣಾ ಕಾಯ್ದೆ, ಅಪಾಯಕಾರಿ ರಾಸಾಯನಿಕಗಳ ತಯಾರಿಕೆ, ಸಂಗ್ರಹಣೆ ಮತ್ತು ಆಮದು ನಿಯಮಗಳು ಮತ್ತು ಪೆಟ್ರೋಕೆಮಿಕಲ್ ಕಾಯಿದೆಗಳ ಸಂಬಂಧಿತ ನಿಬಂಧನೆಗಳ ಅಡಿಯಲ್ಲಿ ಪ್ರಕರಣವನ್ನು ದಾಖಲಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಭಿವಂಡಿ ಪಟ್ಟಣದ ಪೂರ್ಣಾ ಪ್ರದೇಶದಲ್ಲಿನ ಗೋದಾಮುಗಳ ಮೇಲೆ ಪೊಲೀಸರು ದಾಳಿ ನಡೆಸಿದ್ದು, ಸುರಕ್ಷತಾ ನಿಯಮಗಳನ್ನು ಉಲ್ಲಂಘಿಸಿ ಆವರಣದಲ್ಲಿ ಅನುಚಿತವಾಗಿ ಮತ್ತು ಅಕ್ರಮವಾಗಿ ಸಂಗ್ರಹಿಸಿಟ್ಟಿದ್ದ ವಿವಿಧ ಬ್ರಾಂಡ್‌ಗಳ ಹೆಚ್ಚಿನ ಪ್ರಮಾಣದ ರಾಸಾಯನಿಕಗಳನ್ನು ಪತ್ತೆ ಹಚ್ಚಿದ್ದಾರೆ. ಈ ಅಪಾಯಕಾರಿ ರಾಸಾಯನಿಕಗಳಿಂದ ಉಂಟಾಗುವ ಅಪಾಯದ ಬಗ್ಗೆ ಮಾಲೀಕರು ಸಂಪೂರ್ಣವಾಗಿ ತಿಳಿದಿದ್ದರು ಆದರೆ ಯಾವುದೇ ಮುನ್ನೆಚ್ಚರಿಕೆಗಳು ಅಥವಾ ಅನುಮತಿಗಳಿಲ್ಲದೆ ಅವುಗಳನ್ನು ಒಟ್ಟಿಗೆ ಸಂಗ್ರಹಿಸಿದರು ಎಂದು ಅಧಿಕಾರಿ ಹೇಳಿದರು. ಗೋದಾಮು ಮಾಲೀಕ ಬಾಜಿರಾವ್ ಚಿಕ್ನೆ ಅವರಿಗೆ ನೋಟಿಸ್ ಜಾರಿ ಮಾಡಲಾಗಿದೆ ಎಂದರು.

## ಮಹಿಳೆ ಮೇಲೆ ಸಾಮೂಹಿಕ ಅತ್ಯಾಚಾರ

**ಲಖಿಸರಾಯ್:** ಬಿಹಾರದ ಲಖಿಸರಾಯ್ ಜಿಲ್ಲೆಯಲ್ಲಿ ಸಿಗರೇಟ್ ಕೊಡಲು ನಿರಾಕರಿಸಿದ್ದಕ್ಕಾಗಿ 65 ವರ್ಷದ ಮಹಿಳೆಯ ಮೇಲೆ ನಾಲ್ವರು ಸಾಮೂಹಿಕ ಅತ್ಯಾಚಾರ ಎಸಗಿದ್ದಾರೆ ಎಂದು ಪೊಲೀಸರು ಶುಕ್ರವಾರ ತಿಳಿಸಿದ್ದಾರೆ. ಇಬ್ಬರು ಆರೋಪಿಗಳನ್ನು ಬಂಧಿಸಲಾಗಿದ್ದು, ಉಳಿದವರನ್ನು ಬಂಧಿಸಲು ಶೋಧ ನಡೆಸಲಾಗುತ್ತಿದೆ ಎಂದು ಅವರು ಹೇಳಿದ್ದಾರೆ.

ಬುಧವಾರ ಮತ್ತು ಗುರುವಾರ ಮಧ್ಯರಾತ್ರಿ ನವಾಬ್‌ಗಂಜ್ ಪ್ರದೇಶದ ಮಹಿಳೆಯ ಮನೆಗೆ ನಾಲ್ವರು ವ್ಯಕ್ತಿಗಳು ಸಿಗರೇಟ್ ಕೇಳಿಕೊಂಡು ಹೋದಾಗ ಈ ಘಟನೆ ನಡೆದಿದೆ. ಆಕೆ ಸಿಗರೇಟ್ ಕೊಡಲು ನಿರಾಕರಿಸಿದಾಗ, ಆಕೆಯನ್ನು ಹತ್ತಿರದ ಹೊಲಕ್ಕೆ ಎಳೆದುಕೊಂಡು ಹೋಗಿ ಅತ್ಯಾಚಾರ ಎಸಗಿದ್ದಾರೆ ಎಂದು ಆರೋಪಿಸಲಾಗಿದೆ ಎಂದು ಎಸ್‌ಪಿ ಅಜಯ್ ಕುಮಾರ್ ಪಿಟಿಐಗೆ ತಿಳಿಸಿದ್ದಾರೆ.

## ಉತ್ತರಕಾಶಿಯಲ್ಲಿ 2 ಬಾರಿ ಕಂಪಿಸಿದ ಭೂಮಿ, ನಿವಾಸಿಗಳಲ್ಲಿ ಹೆಚ್ಚಿದ ಆತಂಕ

**ಡೆಹ್ರಾಡೂನ್:** ಉತ್ತರಾಖಂಡದ ಉತ್ತರಕಾಶಿ ಜಿಲ್ಲೆಯಲ್ಲಿ ಶುಕ್ರವಾರ ಬೆಳಗ್ಗೆ ಎರಡು ಬಾರಿ ಭೂಮಿ ಕಂಪಿಸಿದ್ದು, ನಿವಾಸಿಗಳು ಭಯಭೀತರಾಗಿ ತಮ್ಮ ಮನೆಗಳಿಂದ ಹೊರಗೆ ಓಡಿಬಂದರು. ವಿಪತ್ತು ನಿರ್ವಹಣಾ ಕಚೇರಿಯ ಪ್ರಕಾರ, ಭೂಕಂಪದ ನಂತರ ವರುಣವ್ರತ ಪರ್ವತದಲ್ಲಿ ಸಂಭವಿಸಿದ ಭೂಕುಸಿತವನ್ನು ಹೊರತುಪಡಿಸಿ ಜಿಲ್ಲೆಯಲ್ಲಿ ಯಾವುದೇ ಸಾವುನೋವು ಅಥವಾ ಆಸ್ತಿಪಾಸ್ತಿ ಹಾನಿಯ ವರದಿಯಾಗಿಲ್ಲ. ಉತ್ತರಕಾಶಿಯ ನಿವಾಸಿಗಳಿಗೆ ಶುಕ್ರವಾರ ಬೆಳಗ್ಗೆ ಎರಡು ಗಮನಾರ್ಹ ಭೂಕಂಪದ ಅನುಭವವಾಗಿದೆ ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಅಧಿಕಾರಿ ಜೈ ಪ್ರಕಾಶ್ ಸಿಂಗ್ ಪನ್ವಾರ್ ಅವರು ತಿಳಿಸಿದ್ದಾರೆ.

ಮೊದಲ ಭೂಕಂಪವು ಬೆಳಗ್ಗೆ ಸರಿಸುಮಾರು 7:41 ಕ್ಕೆ ಸಂಭವಿಸಿದ್ದು, ರಿಕ್ಟರ್ ಮಾಪಕದಲ್ಲಿ 2.7 ತೀವ್ರತೆ ದಾಖಲಾಗಿದೆ ಮತ್ತು ಭೂಕಂಪದ ಕೇಂದ್ರ ಬಿಂದು ಜಿಲ್ಲಾ ಕೇಂದ್ರ ಕಚೇರಿಯ ಬಳಿ ಕೇಂದ್ರೀಕೃತವಾಗಿದೆ ಎಂದು ಅವರು ವಿವರಿಸಿದರು.

ಆರಂಭಿಕ ಭೂಕಂಪವು ಪ್ರದೇಶದಾದ್ಯಂತ ನಿವಾಸಿಗಳು ತಮ್ಮ ಮನೆಗಳಿಂದ ಹೊರಗೆ ಓಡಿಹೋಗುವಂತೆ ಮಾಡಿತು. ಅರ್ಧ ಗಂಟೆಯೊಳಗೆ, ಅಂದರೆ ಬೆಳಗ್ಗೆ 8:29 ಕ್ಕೆ ಎರಡನೇ ಭೂಕಂಪ ಸಂಭವಿಸಿದ್ದು, ಅದರ ತೀವ್ರತೆ 3.5 ರಷ್ಟಿತ್ತು. ಈ ಎರಡನೇ ಭೂಕಂಪದ ಕೇಂದ್ರಬಿಂದುವು ಗಂಗೋತ್ರಿ, ಭಟ್ವರಿ ಬ್ಲಾಕ್‌ನಲ್ಲಿರುವ ಬರ್ಸು ಕಾಡುಗಳಲ್ಲಿದೆ ಎಂದು ಡಿಡಿಎಂಒ ಪನ್ವಾರ್ ಹೇಳಿದ್ದಾರೆ. ಅಧಿಕಾರಿಗಳು ಪರಿಸ್ಥಿತಿಯನ್ನು ಸೂಕ್ಷ್ಮವಾಗಿ ಗಮನಿಸುತ್ತಿದ್ದು, ಸುರಕ್ಷತಾ ಶಿಷ್ಟಾಚಾರಗಳು ಜಾರಿಯಲ್ಲಿವೆಯೆ ಎಂದು ಖಚಿತಪಡಿಸಿಕೊಳ್ಳುತ್ತಿದ್ದಾರೆ.



# ಯಶ್ ಟಾಕ್ಸಿಕ್ ಸಿನಿಮಾದಲ್ಲಿ ಈ ಸ್ಟಾರ್ ಹೀರೋಯಿನ್

ಕೆಜಿಎಫ್-2 ನಂತರ ನಟ ಯಶ್ ಕೆಲ ವರ್ಷಗಳ ಗ್ಯಾಪ್ ಬಳಿಕ ಮತ್ತೆ ತೆರೆ ಮೇಲೆ ಬರಲು ರೆಡಿಯಾಗಿದ್ದಾರೆ. ಟಾಕ್ಸಿಕ್ ಸಿನಿಮಾ ಮೂಲಕ ಗ್ಲೋಬಲ್ ಸ್ಟಾರ್ ಆಗಲು ಪ್ಲಾನ್ ಮಾಡಿದ್ದಾರೆ. ಯಶ್ ಸಿನಿಮಾದಲ್ಲಿ ಈ ಸ್ಟಾರ್ ನಟಿ ಕೂಡ ಕಾಣಿಸಿಕೊಳ್ಳೋದು ಪಕ್ಕಾ ಎನ್ನಲಾಗ್ತಿದೆ. ಈ ಬಗ್ಗೆ ನಟ ಬಿಗ್ ಅಪ್ಡೇಟ್ ನೀಡಿದ್ದಾರೆ.

ಮಲಯಾಳಂ ನಿರ್ದೇಶಕಿ ಗೀತು ಮೋಹನ್ ದಾಸ್ ಅವರ ಟಾಕ್ಸಿಕ್ ಸಿನಿಮಾದಲ್ಲಿ ಯಶ್ ನಾಯಕನಾಗಿ ನಟಿಸುತ್ತಿದ್ದಾರೆ. ನಾಯಕ ಯಶ್ ಅನ್ನೋದನ್ನು ಬಿಟ್ಟು ಸಿನಿಮಾ ಸ್ಟಾರ್ ಕಾಸ್ಟ್ ಬಗ್ಗೆ ಚಿತ್ರತಂಡ ಯಾವುದೇ ಮಾಹಿತಿ ನೀಡಿಲ್ಲ. ಸಣ್ಣ ಸುಳಿವು ಕೂಡ ಬಿಟ್ಟುಕೊಟ್ಟಿಲ್ಲ. ಇದೀಗ ಸ್ಟಾರ್ ನಟಿಯ ಪಾತ್ರದ ಬಗ್ಗೆ ಬಾಲಿವುಡ್ ನಟ ಬಾಯ್ಬಿಟ್ಟಿದ್ದಾರೆ. ಕೆವಿಎನ್ ಪ್ರೊಡಕ್ಷನ್ ಬ್ಯಾನರ್ ಅಡಿ ಟಾಕ್ಸಿಕ್ ಸಿನಿಮಾವನ್ನು ಅದ್ಧೂರಿ ಬಜೆಟ್ ನಲ್ಲಿ ನಿರ್ಮಿಸಲಾಗ್ತಿದೆ. ಈ ಚಿತ್ರದಲ್ಲಿ ಬಾಲಿವುಡ್ ನಟ ಅಕ್ಷಯ್ ಒಬೆರಾಯ್ ಕೂಡ ಒಂದು ಪಾತ್ರದಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಸದ್ಯ ಶರವೇಗದಲ್ಲಿ ಚಿತ್ರೀಕರಣ ಕೂಡ ನಡೆಯುತ್ತಿದೆ.

ಇತ್ತೀಚೆಗಷ್ಟೇ ಯಶ್ ಹುಟ್ಟುಹಬ್ಬದ ಸಂದರ್ಭದಲ್ಲಿ ಚಿತ್ರತಂಡ 'ಟಾಕ್ಸಿಕ್' ಚಿತ್ರದ ಗ್ಲಿಂಪ್ಸ್ ವಿಡಿಯೋ ಬಿಡುಗಡೆ ಮಾಡಿತ್ತು. ಈ ಸಣ್ಣ ಟೀಸರ್ ಚಿತ್ರದ ನಿರೀಕ್ಷೆಯನ್ನು ದುಪ್ಪಟ್ಟಾಗಿಸಿದೆ. ಆದರೆ ಇಲ್ಲಿಯವರೆಗೂ ಈ ಚಿತ್ರದಲ್ಲಿ ನಟಿಸುತ್ತಿರುವ ನಾಯಕಿಯರ ಬಗ್ಗೆ ಯಾವುದೇ ಮಾಹಿತಿ ಹೊರಬಿದ್ದಿಲ್ಲ. ಟಾಕ್ಸಿಕ್ ಗ್ಲಿಂಪ್ಸ್ ವಿಡಿಯೋದಲ್ಲಿ ಯಶ್ ಜೊತೆ ಯಾವುದೇ ಹೀರೋಯಿನ್ ಕಾಣಿಸಿಕೊಂಡಿಲ್ಲ. ಟಾಕ್ಸಿಕ್ ಚಿತ್ರದಲ್ಲಿ ಕರೀನಾ ಕಪೂರ್, ಕಿಯಾರಾ ಅಡ್ವಾಣಿ, ನಯನತಾರಾ ಕಾಣಿಸಿಕೊಳ್ಳಲಿದ್ದಾರೆ ಎನ್ನುವ ಸುದ್ದಿ ಹಬ್ಬಿದೆ. ಸ್ಟಾರ್ ಹೀರೋಯಿನ್ ಗಳ ಹೆಸರು ಕೇಳಿ ಬರ್ತಿದೆ.

ಸೌತ್ ಲೇಡಿ ಸೂಪರ್ ಸ್ಟಾರ್ ನಟಿ ನಯನತಾರಾ ಟಾಕ್ಸಿಕ್ ನಲ್ಲಿ ನಟಿಸುತ್ತಿದ್ದಾರೆ ಎಂದು ನಟ ಅಕ್ಷಯ್ ಖಚಿತಪಡಿಸಿದ್ದಾರೆ. ಸಂದರ್ಶನವೊಂದರಲ್ಲಿ ಮಾತಾಡಿದ ಅಕ್ಷಯ್ ಒಬೆರಾಯ್, ಯಶ್ ಜೊತೆ ನಯನತಾರಾ ಕೂಡ ಸಿನಿಮಾದಲ್ಲಿ ಕಾಣಿಸಿಕೊಳ್ಳಲಿದ್ದಾರೆ ಎಂದಿದ್ದಾರೆ.

# ರಾಜ್ಯ ಪ್ರಶಸ್ತಿ ನಿರಾಕರಣೆಯ ಹಿಂದಿದೆ ನೋವಿನ ಕಥೆ

ಕಿಚ್ಚ ಸುದೀಪ್ ಅವರು ಚಲನಚಿತ್ರ ರಾಜ್ಯ ಪ್ರಶಸ್ತಿಯನ್ನು ನಿರಾಕರಿಸಿದ್ದು, ಈ ವಿಚಾರವು ಚರ್ಚೆಗೆ ಗ್ರಾಸವಾಗಿದೆ. 'ಪೈಲ್ವಾನ್' ನಟನೆಗೆ ಅತ್ಯುತ್ತಮ ನಟ ಎಂದು ಸರ್ಕಾರ ಘೋಷಿಸಿದ್ದ ರಾಜ್ಯ ಪ್ರಶಸ್ತಿಯನ್ನು ನಿರಾಕರಿಸಿರುವ ಸುದೀಪ್ ನಿರ್ಧಾರದ ಬಗ್ಗೆ ಅಭಿಮಾನಿಗಳಲ್ಲಿ ನಾನಾ ರೀತಿಯ ಪ್ರಶ್ನೆ ಮೂಡಿದೆ. ಆದರೆ ರಾಜ್ಯ ಪ್ರಶಸ್ತಿ ನಿರಾಕರಣೆಯ ಹಿಂದಿದೆ ಸುದೀಪ್ ನೋವಿನ ಅಸಲಿ ಕಥೆ. ಕೆಲ ವರ್ಷಗಳಿಂದ ಪ್ರಶಸ್ತಿಗಳನ್ನು ಸುದೀಪ್ ನಿರಾಕರಿಸುತ್ತಾ ಬಂದಿದ್ದಾರೆ. ಈ ನಿರಾಕರಣೆಯ ಹಿಂದೆ ಅದರದ್ದೇ ಆದ ನೋವಿದೆ. ಪ್ರಶಸ್ತಿಗಳನ್ನು ಸುದೀಪ್ ನಿರಾಕರಿಸಲು ಕಾರಣ ನಡೆದ ಆ ಎರಡು ಘಟನೆ. 2004ರ ವೇಳೆ, 'ರಂಗ ಎಸ್.ಎಸ್.ಎಲ್.ಸಿ' ಮತ್ತು 'ಮುಸ್ಸಂಜೆ ಮಾತು' ಸಿನಿಮಾ ಮಾಡಿದಾಗ ಪ್ರಶಸ್ತಿ ಕಮಿಟಿಯಲ್ಲಿದ್ದವರೇ ಸುದೀಪ್‌ಗೆ ಕರೆ ಮಾಡಿ ನಿಮಗೆ ಅತ್ಯುತ್ತಮ ನಟ ಪ್ರಶಸ್ತಿ ಬಂದಿದೆ ಅಂತ ಹೇಳಿದ್ದರು. ಸಹಜವಾಗಿಯೇ ಸುದೀಪ್ ಸಂಭ್ರಮಿಸಿದ್ದರು. ಆದರೆ, ರಾಜ್ಯ ಪ್ರಶಸ್ತಿ ಘೋಷಣೆ ಆದಾಗ ಅಲ್ಲಿ ಬೇರೆ ನಟರ ಪಾಲಾಗಿತ್ತು. ಈ ಎರಡು ಘಟನೆಯಿಂದಾಗಿ ಅವರು ಪ್ರಶಸ್ತಿಗಳನ್ನು ನಿರಾಕರಿಸುತ್ತಲೇ ಬಂದಿದ್ದಾರೆ. ಕೆಲ ವರ್ಷಗಳಿಂದ ಅವರು ಪ್ರಶಸ್ತಿ ಸಮಾರಂಭಗಳಿಗೂ ಹೋಗುವುದನ್ನು ಕೂಡ ನಿಲ್ಲಿಸಿದ್ದಾರೆ. ಇನ್ನೂ ಆಗಸ್ಟ್ 2024ನಲ್ಲಿ ತುಮಕೂರು ವಿಶ್ವವಿದ್ಯಾಲಯವು ಸುದೀಪ್‌ಗೆ ಗೌರವ ಡಾಕ್ಟರೇಟ್ ಘೋಷಿಸಿತ್ತು. ಆ ಗೌರವವನ್ನು ನಯವಾಗಿಯೇ ನಿರಾಕರಿಸಿದ್ದರು.





# ಮದುವೆಯಾಗಿ ತಿರುಮಲದಲ್ಲಿ ಪತಿಯೊಂದಿಗೆ ಸೆಟಲ್ ಆಗ್ತೀನಿ

ಬಾಲಿವುಡ್ ಬೆಡಗಿ ಜಾನ್ವಿ ಕಪೂರ್‌ಅವರು ತಿರುಮಲದಲ್ಲಿ ಮದುವೆಯಾಗುವ ಪ್ಲ್ಯಾನ್ ಬಗ್ಗೆ ಮಾತನಾಡಿದ್ದಾರೆ. ಇತ್ತೀಚಿನ ಸಂದರ್ಶನವೊಂದರಲ್ಲಿ ನಟಿ ಮಾತನಾಡಿ, ಮದುವೆಯ ಬಳಿಕ 3 ಮಕ್ಕಳೊಂದಿಗೆ ತಿರುಮಲದಲ್ಲಿ ಸೆಟಲ್ ಆಗುವ ಆಸೆ ಇದೆ ಎಂದು ಮಾತನಾಡಿದ್ದಾರೆ. ಹಿರಿಯ ನಟಿ ಶ್ರೀದೇವಿ ಪುತ್ರಿ ಜಾನ್ವಿ ಕಪೂರ್ ಅವರು ಕೂಡ ತಿರುಮಲ ತಿಮ್ಮಪ್ಪನ ಭಕ್ತೆಯಾಗಿದ್ದಾರೆ. ತಿಮ್ಮಪ್ಪ ದೇವರಲ್ಲಿ ಅಪಾರ ನಂಬಿಕೆ ಹೊಂದಿದ್ದಾರೆ. ಆಗಾಗ ನಟಿ ತಿರುಪತಿಗೆ ಭೇಟಿ ನೀಡುತ್ತಲೇ ಇರುತ್ತಾರೆ. ಇದೀಗ ಜಾನ್ವಿ ಮದುವೆಯಾಗಿ ತಿರುಪತಿಯಲ್ಲೇ ನೆಲೆಸುವ ಆಸೆಯಿದೆ ಎಂದಿದ್ದಾರೆ.

ಮದುವೆಯಾಗಿ ತಿರುಮಲದಲ್ಲಿ ಪತಿಯೊಂದಿಗೆ ಸೆಟಲ್ ಆಗ್ತೀನಿ ಎಂದಿದ್ದಾರೆ. ಮದುವೆ ಬಳಿಕ 3 ಮಕ್ಕಳೊಂದಿಗೆ ನೆಮ್ಮದಿಯಿಂದ ಬದುಕುವಾಸೆ ಇದೆ. ತಿರುಪತಿ ತಿರುಮಲದಲ್ಲಿ ಸೆಟಲ್ ಆಗಿ ದಿನವೂ ಬಾಳೆ ಎಲೆ ಊಟ ಮಾಡಬೇಕು ಎಂದು ಮನದಾಳದ ಆಸೆಯನ್ನು ವ್ಯಕ್ತಪಡಿಸಿದ್ದಾರೆ. ಗೋವಿಂದಾ ಗೋವಿಂದಾ ಎಂದು ಸ್ಮರಿಸಬೇಕು. ಮಣಿರತ್ನಂ ಅವರ ಸಿನಿಮಾಗಳ ಸಂಗೀತವನ್ನ ಕೇಳುತ್ತಾ ದಿನ ಕಳೆಯುವೆ ಎಂದು ನಟಿ ಹೇಳಿದ್ದಾರೆ. ಶಿಖರ್ ಪಹಾರಿಯಾ ಜೊತೆ ಜಾನ್ವಿ ಡೇಟಿಂಗ್ ವಿಚಾರ ಸಾಕಷ್ಟು ಭಾರೀ ಕೇಳಿ ಬಂದಿದೆ.

# 'ಮುಂದಿನ ಆರು ತಿಂಗಳು ನಗುತ್ತಾ ಇರುತ್ತೇನೆ'

2021ರಿಂದ ಈಚೆಗೆ ನಟಿ ಸಮಂತಾ ಅವರು ನಕ್ಕಿದ್ದಕ್ಕಿಂತ ಅತ್ತಿದ್ದೇ ಹೆಚ್ಚು. ಅವರು ಸಾಕಷ್ಟು ಕಣ್ಣೀರು ಹಾಕಿದರು. ಸಂಸಾರದಲ್ಲಿ ಬೀಸಿದ ಬಿರುಗಾಳಿ, ಅನಾರೋಗ್ಯದಲ್ಲಿ ಉಂಟಾದ ಏರುಪೇರು ಇದಕ್ಕೆ ಪ್ರಮುಖ ಕಾರಣ. ಈಗ ಸಮಂತಾ ಅವರು ಹೊಸ ಪೋಸ್ಟ್ ಒಂದನ್ನು ಹಾಕಿದ್ದಾರೆ. ಇದರಲ್ಲಿ ಅವರು ಸಖತ್ ನಗುತ್ತಾ ಇದ್ದಾರೆ. ಮುಂದಿನ ಆರು ತಿಂಗಳು ಇದೇ ರೀತಿ ಅವರು ನಗುತ್ತಿರೋದಾಗಿ ಅಭಿಮಾನಿಗಳಿಗೆ ಭರವಸೆ ನೀಡಿದ್ದಾರೆ. ಈ ಫೋಟೋಗೆ ಫ್ಯಾನ್ಸ್ ಕಡೆಯಿಂದ ಲೈಕ್ಸ್ ಸಿಕ್ಕಿದೆ. ಸಮಂತಾ ಅವರು ಕಾರ್ಯಕ್ರಮ ಒಂದಕ್ಕೆ ತೆರಳಿದ್ದರು. ಇದರಲ್ಲಿ ಅವರು ನಗುತ್ತಾ ಇರುವ ಫೋಟೋಗಳು ಇವೆ. ಈ ಫೋಟೋಗಳನ್ನು ಫ್ಯಾನ್ಸ್ ಇಷ್ಟಪಟ್ಟಿದ್ದಾರೆ. ಇದಕ್ಕೆ ಫ್ಯಾನ್ಸ್ ಕಡೆಯಿಂದ ವಿವಿಧ ರೀತಿಯ ಕಮೆಂಟ್‌ಗಳು ಕೂಡ ಬಂದಿವೆ. ಸಮಂತಾ ಅವರ ಮಾಜಿ ಪತಿ ನಾಗ ಚೈತನ್ಯ ಅವರು ಈಗಾಗಲೇ ಮತ್ತೊಂದು ವಿವಾಹ ಆಗಿ ಆಗಿದೆ. ಸಮಂತಾ ಕೂಡ ಮತ್ತೊಂದು ಮದುವೆ ಆಗಲಿ ಎಂದು ಫ್ಯಾನ್ಸ್ ಬಯಸುತ್ತಾ ಇದ್ದಾರೆ. ಆದರೆ, ಸಮಂತಾ ಅವರು ಈ ಬಗ್ಗೆ ಆಲೋಚಿಸಿಲ್ಲ. ಸಮಂತಾ ಮುಂದಿನ ದಿನಗಳಲ್ಲಿ ಸಾಲು ಸಾಲು ಸಿನಿಮಾ ಒಪ್ಪಿಕೊಳ್ಳುವ ಸಾಧ್ಯತೆ ಇದೆ. 'ಖುಷಿ' ಸಿನಿಮಾ ಬಳಿಕ ಸಮಂತಾ ಯಾವುದೇ ಹೊಸ ಸಿನಿಮಾ ಒಪ್ಪಿಕೊಂಡಿಲ್ಲ.





# ಒಂದು ಕಾಲದ ಹಾಟ್ ನಟಿ
## ಈಗ ಸಾಧು ಸನ್ಯಾಸಿನಿ

90ರ ದಶಕದ ಹಾಟ್ ಬಾಲಿವುಡ್ ನಟಿ, ಕನ್ನಡದ ಸಿನಿಮಾದಲ್ಲಿಯೂ ನಟಿಸಿದ್ದ ಮಮತಾ ಕುಲಕರ್ಣಿ ಈಗ ಅಧ್ಯಾತ್ಮದ ಹಾದಿ ಹಿಡಿದಿದ್ದಾರೆ. ಮಮತಾ ಕುಲಕರ್ಣಿ ಸಾಧು ಸನ್ಯಾಸಿನಿ ಆಗಿದ್ದಾರೆ. ಕಿನ್ನರ ಅಖಾಡದ ಮಹಾಮಂಡಲೇಶ್ವರಿ ಆಗಿದ್ದಾರೆ ಸಿನಿಮಾಗಳಲ್ಲಿ ಹಾಟ್ ಅವತಾರಗಳಲ್ಲಿ ನಟಿಸಿದ್ದ ನಟಿ, ಜೀವನದಲ್ಲಿ ಸಾಕಷ್ಟು ಐಶಾರಾಮಿತನಗಳನ್ನು ಕಂಡಿದ್ದ ನಟಿ ಈಗ ಒಮ್ಮೆಲೆ ಅಧ್ಯಾತ್ಮದ ಹಾದಿ ಹಿಡಿದ್ದಾರೆ.

ಎಲ್ಲಾ ವಿಷಯ ವಾಸನೆಗಳನ್ನು ತ್ಯಜಿಸಿ ಸನ್ಯಾಸಿನಿ ಆಗಿದ್ದಾರೆ. ಕನ್ನಡದ 'ವಿಷ್ಣುವಿಜಯ' ಸೇರಿದಂತೆ ಹಲವು ಹಿಂದಿ, ತೆಲುಗು, ಮಲಯಾಳಂ, ತಮಿಳು ಸಿನಿಮಾಗಳಲ್ಲಿ ನಟಿಸಿದ್ದ, 90ರ ದಶಕದಲ್ಲಿ ಹಾಟ್ ನಟಿಯಾಗಿ ಗುರುತಿಸಿಕೊಂಡಿದ್ದ ಮಮತಾ ಕುಲಕರ್ಣಿ ಈಗ ಸಾಧ್ವಿ ಆಗಿದ್ದಾರೆ. ಅವರು ಕಿನ್ನರ ಅಖಾಡದ ಮಹಾಮಂಡಲೇಶ್ವರಿ ಆಗಿ ನೇಮಕ ಆಗಿದ್ದಾರೆ. ಕಿನ್ನರ ಅಖಾಡ ಅಥವಾ ಕಿನ್ನರ ಅಖಾರ ಧಾರ್ಮಿಕ ಆಚರಣೆಗಳಲ್ಲಿ ತೊಡಗಿಕೊಂಡಿರುವ ತೃತೀಯ ಲಿಂಗಿಗಳ ಸಂಘವಾಗಿದೆ. 2015 ರಲ್ಲಿ ಪ್ರಾರಂಭವಾದ ಕಿನ್ನರ ಅಖಾಡ ಇದೀಗ ನಟಿ ಮಮತಾ ಕುಲಕರ್ಣಿಯನ್ನು ತಮ್ಮ ಮಹಾಮಂಡಲೇಶ್ವರಿಯನ್ನಾಗಿ ನೇಮಕ ಮಾಡಿದೆ. ಇದೊಂದು ರೀತಿಯ ಧಾರ್ಮಿಕ ಸ್ಥಾನವಾಗಿದ್ದು ಪಿಂಡ ಪ್ರಧಾನ ಸೇರಿದಂತೆ ಹಲವು ಧಾರ್ಮಿಕ ಕಾರ್ಯಗಳನ್ನು ಮಮತಾ ಕುಲಕರ್ಣಿ ಅವರಿಂದ ಮಾಡಿಸಿ ಅವರನ್ನು ಕಿನ್ನರ ಅಖಾಡದ ಮಹಾಮಂಡಲೇಶ್ವರಿ ಮಾಡಲಾಗುತ್ತದೆ.

# 35 ವರ್ಷಗಳ ದಾಖಲೆ ಮುರಿದ 10ನೇ ತರಗತಿಯ ಅಂಕಿತ್



ದೇಶೀ ಟೂರ್ನಿ ರಣಜಿ ಟ್ರೋಫಿ 2024-25 ರ ಲೀಗ್ ಹಂತದ ಎರಡನೇ ಹಂತವು ಇಂದಿನಿಂದ ಪ್ರಾರಂಭವಾಗಿದೆ. ಈ ಟೂರ್ನಿಯಲ್ಲಿ ಬಹಳ ವರ್ಷಗಳ ಬಳಿಕ ಟೀಂ ಇಂಡಿಯಾದ ಸ್ಟಾರ್ ಆಟಗಾರರಾದ ರೋಹಿತ್ ಶರ್ಮಾ, ರಿಷಬ್ ಪಂತ್, ಶುಭ್‌ಮನ್ ಗಿಲ್ ಆಡುತ್ತಿದ್ದಾರೆ. ಬಿಸಿಸಿಐನ ಖಡಕ್ ಸೂಚನೆ ಮೇರೆಗೆ ಟೀಂ ಇಂಡಿಯಾದ ಈ ಅನುಭವಿಗಳು ರಣಜಿ ಟ್ರೋಫಿಗೆ ಮರಳಿದ್ದಾರೆ.

ಹೀಗಾಗಿ ಎಲ್ಲಾರ ಗಮನ ಈ ಖ್ಯಾತ ಆಟಗಾರರ ಮೇಲೆ ಕೇಂದ್ರೀಕೃತವಾಗಿರುವಾಗಲೇ 16 ವರ್ಷದ ಯುವ ಕ್ರಿಕೆಟರ್ ಅದ್ಭುತ ದಾಖಲೆ ಮಾಡಿದ್ದಾನೆ. 10ನೇ ತರಗತಿ ಓದುತ್ತಿರುವ ಅಂಕಿತ್ ಚಟರ್ಜಿ, ಅನುಭವಿ ಬ್ಯಾಟ್ಸ್‌ಮನ್ ಮತ್ತು ಮಾಜಿ ನಾಯಕ ಸೌರವ್ ಗಂಗೂಲಿ ಅವರ ದಾಖಲೆಯನ್ನು ಮುರಿದಿದ್ದಾನೆ. ರಣಜಿ ಟ್ರೋಫಿಯ ಗುಂಪು ಹಂತದ ಪಂದ್ಯದಲ್ಲಿ ಇಂದು ಬಂಗಾಳ ಮತ್ತು ಹರಿಯಾಣ ತಂಡಗಳು ಪಶ್ಚಿಮ ಬಂಗಾಳದ ಕಲ್ಯಾಣಿಯಲ್ಲಿ ಮುಖಾಮುಖಿಯಾಗಿದ್ದವು. ಮೊದಲ ದಿನವೇ ಬೆಂಗಾಲ್ ಬೌಲರ್‌ಗಳು ಮಾರಕ ದಾಳಿ ನಡೆಸಿ ಹರಿಯಾಣವನ್ನು ಮೊದಲ ಇನ್ನಿಂಗ್ಸ್‌ನಲ್ಲಿ ಕೇವಲ 157 ರನ್‌ಗಳಿಗೆ ಆಲೌಟ್ ಮಾಡಿದರು. ಬಂಗಾಳದ ಬೌಲರ್‌ಗಳ ಈ ಪವಾಡಕ್ಕೂ ಮುನ್ನ ಅಂಕಿತ್ ಚಟರ್ಜಿ ವಿಶೇಷ ದಾಖಲೆ ಮಾಡಿದ್ದರು. ವಾಸ್ತವವಾಗಿ, ಅವರು ಮೈದಾನಕ್ಕೆ ಕಾಲಿಟ್ಟ ತಕ್ಷಣ, ಅಂಕಿತ್ ಬಂಗಾಳದ ಪರ ಪ್ರಥಮ ದರ್ಜೆ ಕ್ರಿಕೆಟ್ ಆಡಿದ ಅತ್ಯಂತ ಕಿರಿಯ ಆಟಗಾರ ಎನಿಸಿಕೊಂಡಿದ್ದಾರೆ.

**35 ವರ್ಷಗಳ ಹಳೆಯ ದಾಖಲೆ ಉಡೀಸ್**

ಈ ಪಂದ್ಯದಲ್ಲಿ ಆರಂಭಿಕ ಬ್ಯಾಟ್ಸ್‌ಮನ್ ಆಗಿ ಕಣಕ್ಕಿಳಿದಿದ್ದ ಅಂಕಿತ್, ಕೇವಲ 15 ವರ್ಷ ಮತ್ತು 361 ದಿನ ವಯಸ್ಸಿನಲ್ಲಿ ಬಂಗಾಳದ ಪರ ಪ್ರಥಮ ದರ್ಜೆ ಕ್ರಿಕೆಟ್ ಆಡಿದ ಅತ್ಯಂತ ಕಿರಿಯ ಆಟಗಾರನೆಂಬ ದಾಖಲೆ ಬರೆದಿದ್ದಾರೆ. ಈ ಮೂಲಕ ಅಂಕಿತ್, ಬಂಗಾಳದ ಶ್ರೇಷ್ಠ ಬ್ಯಾಟ್ಸ್‌ಮನ್ ಮತ್ತು ಭಾರತದ ಮಾಜಿ ನಾಯಕ ಸೌರವ್ ಗಂಗೂಲಿ ಅವರ ದಾಖಲೆಯನ್ನು ಮುರಿದಿದ್ದಾರೆ. ಗಂಗೂಲಿ 35 ವರ್ಷಗಳ ಹಿಂದೆ ತಮ್ಮ 17 ನೇ ವಯಸ್ಸಿನಲ್ಲಿ 1990 ರ ರಣಜಿ ಟ್ರೋಫಿ ಫೈನಲ್‌ನಲ್ಲಿ ಪಾದಾರ್ಪಣೆ ಮಾಡಿದ ದಾಖಲೆಯನ್ನು ಮಾಡುವುದರ ಜೊತೆಗೆ, ಅವರು ಬಂಗಾಳದ ಪ್ರಶಸ್ತಿ ಗೆಲುವಿನ ಭಾಗವಾಗಿದ್ದರು. ಇದೀಗ ಅಂಕಿತ್, ಗಂಗೂಲಿ ಅವರ ದಾಖಲೆಯನ್ನು ಮುರಿದಿದ್ದಾರೆ. ವಿಶೇಷವೆಂದರೆ ಅಂಕಿತ್ ತಮ್ಮ ಹುಟ್ಟುಹಬ್ಬದ ಮುನ್ನವೇ (ಜನವರಿ 27) ಈ ಸಾಧನೆ ಮಾಡಿದ್ದಾರೆ.

# ತಮ್ಮ ಹಳೆಯ ಲಯಕ್ಕೆ ಮರಳಿದ ಜಡೇಜಾ



ಸುದೀರ್ಘ ಕಾಯುವಿಕೆಯ ನಂತರ ಟೀಂ ಇಂಡಿಯಾ ನಾಯಕ ರೋಹಿತ್ ಶರ್ಮಾ ಅಂತಿಮವಾಗಿ ದೇಶೀಯ ಕ್ರಿಕೆಟ್‌ಗೆ ಮರಳಿದ್ದಾರೆ. ಬಹಳ ದಿನಗಳಿಂದ ತಮ್ಮ ಕಳಪೆ ಫಾರ್ಮ್‌ನೊಂದಿಗೆ ಹೋರಾಡುತ್ತಿರುವ ರೋಹಿತ್, ತಮ್ಮ ತವರು ತಂಡ ಮುಂಬೈ ಪರವಾಗಿ ಮೈದಾನಕ್ಕಿಳಿದರಾದರೂ ಅವರ ವಾಪಸಾತಿ, ನ್ಯೂಜಿಲೆಂಡ್ ಮತ್ತು ಆಸ್ಟ್ರೇಲಿಯಾ ವಿರುದ್ಧದ ಟೆಸ್ಟ್ ಸರಣಿಯಲ್ಲಿದ್ದಂತೆಯೇ ಇತ್ತು. 10 ವರ್ಷಗಳ ಬಳಿಕ ರಣಜಿ ಅಂಗಳಕ್ಕಿಳಿದ ರೋಹಿತ್ ಕೇವಲ 3 ರನ್ ಗಳಿಸಿ ಔಟಾದರು. ಒಂದೆಡೆ ರೋಹಿತ್ ವೈಫಲ್ಯದ ಬಗ್ಗೆ ಚರ್ಚೆಯಾಗುತ್ತಿದ್ದರೆ, ಇನ್ನೊಂದೆಡೆ ರೋಹಿತ್ ವಿಕೆಟ್ ಉರುಳಿಸಿದ ಜಮ್ಮು ಮತ್ತು ಕಾಶ್ಮೀರ ವೇಗಿ ಉಮರ್ ನಜೀರ್ ಕೂಡ ಅಷ್ಟೇ ಸುದ್ದಿಯಾಗುತ್ತಿದ್ದಾರೆ. ಅದರಲ್ಲೂ ಅವರು ರೋಹಿತ್ ವಿಕೆಟ್ ಪಡೆದರೂ ಸಂಭ್ರಮಿಸದಿರುವುದು ಎಲ್ಲಾರಿಗೂ ಅಚ್ಚರಿ ಮೂಡಿಸಿದೆ. ಆದರೆ ಇದೀಗ ಈ ಬೌಲರ್ ತಾನು ಏಕೆ ಸಂಭ್ರಮಾಚರಣೆ ಮಾಡಲಿಲ್ಲ ಎಂಬುದಕ್ಕೆ ಕಾರಣವನ್ನೂ ನೀಡಿದ್ದಾರೆ.

**ಅದೇ ಕಳಪೆ ಆಟ:** ರಣಜಿ ಟ್ರೋಫಿಯ ಗುಂಪು ಹಂತದ ಪಂದ್ಯದಲ್ಲಿ ಇಂದು ಮುಂಬೈ ತಂಡ, ಜಮ್ಮು ಮತ್ತು ಕಾಶ್ಮೀರ ತಂಡವನ್ನು ಎದುರಿಸುತ್ತಿದೆ. ಪಂದ್ಯದ ಮೊದಲ ದಿನದಂದು ಮೊದಲು ಬ್ಯಾಟಿಂಗ್ ಮಾಡಿದ ಮುಂಬೈ ತಂಡ ಶ್ರೇಷ್ಠ ಬ್ಯಾಟ್ಸ್‌ಮನ್‌ಗಳಿಂದ ತುಂಬಿದ್ದರೂ ಕೇವಲ 120 ರನ್‌ಗಳಿಗೆ ಆಲೌಟ್ ಆಯಿತು. ಅದರಲ್ಲೂ ಟೆಸ್ಟ್ ಕೆರಿಯರ್ ಅಪಾಯದಲ್ಲಿರುವ ರೋಹಿತ್ ಶರ್ಮಾ ಮೇಲೆ ಎಲ್ಲಾರ ಕಣ್ಣು ನೆಟ್ಟಿತ್ತು. ಆದರೆ ಟೀಂ ಇಂಡಿಯಾ ನಾಯಕನಿಗೆ ರಣಜಿ ಟ್ರೋಫಿಯ ಮೊದಲ ಇನ್ನಿಂಗ್ಸ್‌ನಲ್ಲೂ ಅದ್ಭುತ ಏನನ್ನೂ ಮಾಡಲು ಸಾಧ್ಯವಾಗಲಿಲ್ಲ. ಸುಮಾರು 10 ವರ್ಷಗಳ ನಂತರ ಈ ಟೂರ್ನಿಗೆ ಮರಳಿದ ರೋಹಿತ್, ಯಶಸ್ವಿ ಜೈಸ್ವಾಲ್ ಅವರೊಂದಿಗೆ ಓಪನಿಂಗ್ ಮಾಡಿದರು. ಆದರೆ ಟೀಂ ಇಂಡಿಯಾ ಪರ ಆರಂಭಿಕರಾಗಿ ಕಣಕ್ಕಿಳಿಯುವ ಈ ಜೋಡಿ ಮುಂಬೈನಲ್ಲೂ ವಿಫಲವಾಯಿತು. ಜೈಸ್ವಾಲ್ ಔಟಾದ ಕೆಲವೇ ಹೊತ್ತಿನಲ್ಲಿ ರೋಹಿತ್ ಕೂಡ ನಿರ್ಗಮಿಸಿದರು. ಕಳೆದ ಡಿಸೆಂಬರ್‌ನಲ್ಲಿ ನಡೆದಿದ್ದ ಬಾರ್ಡರ್- ಗವಾಸ್ಕರ್ ಟ್ರೋಫಿ ಟೆಸ್ಟ್ ಸರಣಿಯಲ್ಲಿ ಆಸ್ಟ್ರೇಲಿಯಾದ ಲೆಜೆಂಡರಿ ವೇಗದ ಬೌಲರ್ ಪ್ಯಾಟ್ ಕಮ್ಮಿನ್ಸ್ ಅವರ ಎಸೆತದಲ್ಲಿ ಔಟಾದ ರೀತಿಯಲ್ಲಿಯೇ ರೋಹಿತ್ ಔಟಾದರು. ವ್ಯತ್ಯಾಸವೆಂದರೆ ಈ ಬಾರಿಯ ಬೌಲರ್ ಕಮ್ಮಿನ್ಸ್‌ನಂತೆ ಅನುಭವಿ ಮತ್ತು ವಿಶ್ವ ಕ್ರಿಕೆಟ್ ದಂತಕಥೆಯಾಗಿರಲಿಲ್ಲ, ಬದಲಿಗೆ ಆತ ಜಮ್ಮು ಮತ್ತು ಕಾಶ್ಮೀರದ ಹಿರಿಯ ವೇಗಿ ಒಮರ್ ನಜೀರ್.



## ರೋಹಿತ್ ವಿಕೆಟ್ ಪಡೆದು ಸಂಭ್ರಮಾಚರಣೆ ಮಾಡಿಲ್ಲ

**ಸಂಭ್ರಮಿಸಲಿಲ್ಲ ಏಕೆ:** ಸುಮಾರು 6 ಅಡಿ 4 ಇಂಚು ಎತ್ತರದ ಈ ಬೌಲರ್ ಆರಂಭದಿಂದಲೂ ರೋಹಿತ್‌ಗೆ ಸಾಕಷ್ಟು ತೊಂದರೆ ನೀಡಿ ನಂತರ ಅವರನ್ನು ಔಟ್ ಮಾಡಿದರು. ಆದರೆ ರೋಹಿತ್‌ನಂತಹ ದಿಗ್ಗಜ ಬ್ಯಾಟ್ಸ್‌ಮನ್‌ನ ವಿಕೆಟ್ ಪಡೆದ ನಂತರವೂ ಉಮರ್ ಅಥವಾ ಅವರ ಸಹ ಆಟಗಾರರು ಯಾವುದೇ ರೀತಿಯಲ್ಲಿ ಸಂಭ್ರಮಿಸದಿರುವುದು ಎಲ್ಲಾರಿಗೂ ಆಶ್ಚರ್ಯ ತಂದಿತು. ದಿನದಾಟದ ಅಂತ್ಯದ ನಂತರ ಈ ಬಗ್ಗೆ ಮಾತನಾಡಿದ ಉಮರ್, 'ನಾನು ರೋಹಿತ್ ಶರ್ಮಾ ಅವರ ದೊಡ್ಡ ಅಭಿಮಾನಿಯಾದ ಕಾರಣ ಅವರ ವಿಕೆಟ್ ಪಡೆದ ನಂತರ ಸಂಭ್ರಮಾಚರಣೆ ಮಾಡಲಿಲ್ಲ. ಅವರ ವಿಕೆಟ್ ಪಡೆಯುವುದು ನನಗೆ ತುಂಬಾ ವಿಶೇಷವಾಗಿದೆ. ನಾನು ಮೊದಲ ಬಾರಿಗೆ ಅವರಿಗೆ ಬೌಲಿಂಗ್ ಮಾಡಿದೆ ಎಂದಿದ್ದಾರೆ.

ರಣಜಿ ಟ್ರೋಫಿ ಪಂದ್ಯಗಳಲ್ಲಿ ರವೀಂದ್ರ ಜಡೇಜಾ ಅದ್ಭುತ ಸಾಧನೆ ಮಾಡಿದ್ದಾರೆ. ಸೌರಾಷ್ಟ್ರ ಪರ ಆಡುತ್ತಿರುವ ರವೀಂದ್ರ ಜಡೇಜಾ ಡೆಲ್ಲಿ ವಿರುದ್ಧದ ಮೊದಲ ಇನ್ನಿಂಗ್ಸ್‌ನಲ್ಲಿ ಐದು ವಿಕೆಟ್ ಪಡೆದ ಸಾಧನೆ ಮಾಡಿದರು. ಜಡೇಜಾ ಡೆಲ್ಲಿ ವಿರುದ್ಧ 17.4 ಓವರ್ ಬೌಲ್ ಮಾಡಿ ಕೇವಲ 66 ರನ್ ನೀಡಿ ಐದು ವಿಕೆಟ್ ಪಡೆದರು. ಜಡೇಜಾ ಡೆಲ್ಲಿ ಮೇಲೆ ಎಂತಹ ಒತ್ತಡವನ್ನು ಸೃಷ್ಟಿಸಿದರು ಎಂದರೆ ತಂಡವು ಮೊದಲ ಇನ್ನಿಂಗ್ಸ್‌ನಲ್ಲಿ ಕೇವಲ 188 ರನ್ ಗಳಿಸಲಷ್ಟೇ ಶಕ್ತವಾಯಿತು. ರಿಷಬ್ ಪಂತ್ ಕೂಡ ಡೆಲ್ಲಿ ತಂಡದಲ್ಲಿ ಆಡುತ್ತಿದ್ದರು ಆದರೆ ಅವರ ಉಪಸ್ಥಿತಿಯು ಈ ತಂಡಕ್ಕೆ ಹೆಚ್ಚು ನೆರವಾಗಲಿಲ್ಲ ಎಂಬುದು ದೊಡ್ಡ ವಿಷಯ. 10 ಎಸೆತಗಳಲ್ಲಿ ಕೇವಲ ಒಂದು ರನ್ ಗಳಿಸಿ ರಿಷಬ್ ಪಂತ್ ಔಟಾದರು.

ರವೀಂದ್ರ ಜಡೇಜಾ ತಮ್ಮ ಮೊದಲ ಬೇಟೆಯಾಗಿ ಸನತ್ ಸಂಗ್ವಾನ್ ಅವರನ್ನು ಬಲಿ ಪಡೆದರೆ, ಇದಾದ ಬಳಿಕ 44 ರನ್ ಗಳಿಸಿ ಕ್ರೀಸ್‌ನಲ್ಲಿದ್ದ ಯಶ್ ಧುಲ್ ಅವರ ವಿಕೆಟ್ ಕೂಡ ಪಡೆದರು. ಮೂರನೇ ವಿಕೆಟ್ ಆಗಿ ಜಡೇಜಾ ಡೆಲ್ಲಿ ನಾಯಕ ಆಯುಷ್ ಬಧೋನಿಯನ್ನೂ ಬಲಿಪಶು ಮಾಡಿದರು. ಆ ನಂತರವೂ ಮ್ಯಾಜಿಕ್ ಮಾಡಿದ ಜಡೇಜಾ, ಹರ್ಷ್ ತ್ಯಾಗಿ ಮತ್ತು ನವದೀಪ್ ಸೈನಿ ಅವರ ವಿಕೆಟ್‌ಗಳನ್ನು ಪಡೆಯುವಲ್ಲಿ ಯಶಸ್ವಿಯಾದರು ಮತ್ತು ಆ ಮೂಲಕ ಅವರು ಪ್ರಥಮ ದರ್ಜೆ ಕ್ರಿಕೆಟ್‌ನಲ್ಲಿ 35 ನೇ ಬಾರಿಗೆ ಇನ್ನಿಂಗ್ಸ್‌ನಲ್ಲಿ ಐದು ವಿಕೆಟ್‌ಗಳನ್ನು ಪಡೆದ ಸಾಧನೆಯನ್ನು ಸಾಧಿಸಿದರು.

ಜಡೇಜಾ ಪ್ರಥಮ ದರ್ಜೆ ಕ್ರಿಕೆಟ್‌ನಲ್ಲಿ 547 ವಿಕೆಟ್‌ಗಳನ್ನು ಪಡೆದಿದ್ದಾರೆ. ಇದೀಗ ಈ ದೇಶೀ ಟೂರ್ನಿಯಲ್ಲಿ ಜಡೇಜಾ 550 ವಿಕೆಟ್‌ಗಳ ಮೈಲಿಗಲು ದಾಟಲು ಕೇವಲ ಮೂರು ವಿಕೆಟ್‌ಗಳ ದೂರದಲ್ಲಿದ್ದಾರೆ.

ರವೀಂದ್ರ ಜಡೇಜಾ 2023ರಲ್ಲಿ ತಾವು ಆಡಿದ್ದ ಕೊನೆಯ ರಣಜಿ ಪಂದ್ಯದಲ್ಲಿ ತಮಿಳುನಾಡು ವಿರುದ್ಧ 53 ರನ್‌ಗಳಿಗೆ 7 ವಿಕೆಟ್ ಪಡೆದಿದ್ದರು. ವಾಸ್ತವವಾಗಿ ಟೀಂ ಇಂಡಿಯಾದ ಎಲ್ಲಾ ಆಟಗಾರರು ಪ್ರಸ್ತುತ ನಡೆಯುತ್ತಿರುವ ರಣಜಿ ಟ್ರೋಫಿಯಲ್ಲಿ ಕಣಕ್ಕಿಳಿದಿದ್ದಾರೆ. ಆದರೆ ಜಡೇಜಾರನ್ನು ಹೊರತುಪಡಿಸಿ ಮಿಕ್ಕವರ್ಯಾರು ಉತ್ತಮ ಪ್ರದರ್ಶನ ನೀಡಿಲ್ಲ. ರೋಹಿತ್ ಶರ್ಮಾ, ಶುಭಮನ್ ಗಿಲ್, ಯಶಸ್ವಿ ಜೈಸ್ವಾಲ್, ರಿಷಬ್ ಪಂತ್ ಕೂಡ ದಯನೀಯವಾಗಿ ವಿಫಲರಾಗಿದ್ದಾರೆ.





# ಸೆಹ್ವಾಗ್ ಬಾಳಲ್ಲಿ ಬಿರುಗಾಳಿ ಬೀಸಿದ್ದೇಕೆ



ಟೀಂ ಇಂಡಿಯಾ ಕ್ರಿಕೆಟಿಗ ದಾಂಪತ್ಯ ಜೀವನಕ್ಕೆ ಏನಾಗುತ್ತಿದೆ ಹಾರ್ದಿಕ್ ಪಾಂಡ್ಯ ಡಿವೋರ್ಸ್ ಬಳಿಕ ಹಲವು ಕ್ರಿಕೆಟಿಗರ ಬಾಳಲ್ಲಿ ಕೋಲಾಹಲ ಶುರುವಾಗಿದೆ. ಇದೀಗ ಈ ಸಾಲಿನಲ್ಲಿ ಯಾರೂ ಊಹಿಸದ ವಿರೇಂದ್ರ ಸೆಹ್ವಾಗ್ ಹೆಸರು ಕೇಳಿಬರುತ್ತಿದೆ. ಟೀಂ ಇಂಡಿಯಾದ ಹಲವು ಕ್ರಿಕೆಟಿಗ ವೈಯುಕ್ತಿಕ ಬದುಕು ಈಗಾಗಲೇ ಹಲವು ಏರಿಳಿತ ಕಂಡಿದೆ. ಮೊಹಮ್ಮದ ಶಮ, ಹಾರ್ದಿಕ್ ಪಾಂಡ್ಯ ಈಗಾಗಲೇ ಡಿವೋರ್ಸ್ ನೀಡಿ ಹೊರಬಂದಿದ್ದಾನೆ. ಇತ್ತೀಚೆಗೆ ಯಜುವೇಂದ್ರ ಚಹಾಲ್ ದಾಂಪತ್ಯ ಜೀವನದಲ್ಲಿ ಬಿರುಕು ಮೂಡಿದೆ ಅನ್ನೋ ಮಾತುಗಳು ಕೇಳಿಬಂದಿತ್ತು. ಇದೀಗ ಯಾರೂ ಊಹಿಸದ ಹೆಸರು ಈ ಪಟ್ಟಿಯಲ್ಲಿ ಕಾಣಿಸಿಕೊಂಡಿದೆ. ಹೌದು, ಟೀಂ ಇಂಡಿಯಾ ಮಾಜಿ ಕ್ರಿಕೆಟಿಗ ವಿರೇಂದ್ರ ಸೆಹ್ವಾಗ್ ದಾಂಪತ್ಯ ಜೀವನ ಬಿರುಕು ಬಿಟ್ಟಿದೆ ಎಂದು ವರದಿಯಾಗಿದೆ. ಕಳೆದ ಹಲವು ತಿಂಗಳಿನಿಂದ ಸೆಹ್ವಾಗ್ ಹಾಗೂ ಪತ್ನಿ ಆರತಿ ಬೇರೆ ಬೇರೆ ನೆಲೆಸಿದ್ದಾರೆ ಅನ್ನೋ ಮಾತುಗಳು ಕೇಳಿಬಂದಿದೆ. 20 ವರ್ಷ ಸಂಸಾರ ಮಾಡಿದ ಸೆಹ್ವಾಗ್ ಇದೀಗ ಗ್ರೇ ಡಿವೋರ್ಸ್‌ಗೆ ರೆಡಿಯಾದ್ರಾ ಅನ್ನೋ ಅನುಮಾನಗಳು ಬಲವಾಗುತ್ತಿದೆ. ಹಿಂದೂಸ್ಥಾನ್ ಟೈಮ್ಸ್ ವರದಿ ಪ್ರಕಾರ, ವೀರೇಂದ್ರ ಸೆಹ್ವಾಗ್ ಹಾಗೂ ಪತ್ನಿ ಆರತಿ ಇಬ್ಬರು ಬೇರೆ ಬೇರೆ ನೆಲೆಸಿದ್ದಾರೆ. ಇಷ್ಟೇ ಅಲ್ಲ ಇನ್‌ಸ್ಟಾಗ್ರಾಂನಲ್ಲಿ ವಿರೇಂದ್ರ ಸೆಹ್ವಾಗ್, ಪತ್ನಿ ಆರತಿಯನ್ನು ಅನ್‌ಫಾಲೋ ಮಾಡಿದ್ದಾರೆ.

ಇತ್ತ ಆರತಿ ಇನ್‌ಸ್ಟಾಗ್ರಾಂ ಪ್ರೊಫೈಲ್ ಪ್ರೈವೇಟ್ ಮಾಡಲಾಗಿದೆ. ಬರೋಬ್ಬರಿ 20 ವರ್ಷಗಳ ಸೆಹ್ವಾಗ್ ಹಾಗೂ ಆರತಿ ದಾಂಪತ್ಯ ಜೀವನದಲ್ಲಿ ಬಿರುಕು ಮೂಡಿದೆ ಅನ್ನೋ ಮಾತು ಬಲವಾಗಿ ಕೇಳಿಬರುತ್ತಿದೆ. ಇದಕ್ಕೆ ಪೂರಕವಾಗಿ ಹಲವು ಘಟನೆಗಳು ನಡೆದಿದೆ.ಸೆಹ್ವಾಗ್ ತಮ್ಮ ಸೋಶಿಯಲ್ ಮೀಡಿಯಾ ಖಾತೆಯಲ್ಲಿ ಪತ್ನಿ ಜೊತೆಗಿನ ಯಾವುದೇ ಫೋಟೋ ಹಂಚಿಕೊಂಡಿಲ್ಲ. ಕಳೆದ ವರ್ಷ ಆಚರಿಸಿದ ದೀಪಾವಳಿ ಸೇರಿದಂತೆ ಹಲವು ಹಬ್ಬಗಳಲ್ಲಿ ಸೆಹ್ವಾಗ್ ಮಕ್ಕಳು, ತಾಯಿ ಜೊತೆ ಕಾಣಿಸಿಕೊಂಡಿದ್ದಾರೆ. ಆದರೆ ಪತ್ನಿ ಆರತಿಯ ಫೋಟೋ ಆಗಲಿ,ಆರತಿ ಜೊತೆಯಾಗಲಿ ಯಾವುದೇ ಫೋಟೋ ಇಲ್ಲ. ಪುತ್ರರ ಜೊತೆ ಪ್ರವಾಸ ಮಾಡಿದ ಫೋಟೋಗಳನ್ನು ಹಂಚಿಕೊಂಡಿದ್ದಾರೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966